ಜನಮನದ ದನಿ

# ಪ್ರಜೋದಯ

ಸಂಪಾದಕ : ಜಿ.ಆರ್. ಕೆಂಚೇಗೌಡ



ಏಷ್ಯನ್ ಗೇಮ್ಸ್‌ನ ಗ್ರೀಕೊ ರೋಮನ್ ಕುಸ್ತಿಯಲ್ಲಿ ಭಾರತದ ನಿತೇಶ್ ಸಿವಾಚ್ ಅವರು ಗುರುವಾರ ರಜತ ಪದಕವನ್ನು ತಮ್ಮದಾಗಿಸಿ ಕೊಂಡಿದ್ದಾರೆ.

02 ಅಕ್ಟೋಬರ್, 2026 ಶುಕ್ರವಾರ ಬೆಲೆ ₹ 2.00 ಸಂಪುಟ : 20 ಸಂಚಿಕೆ -201 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629



ಅಹಿಂಸೆಯ ಅಸ್ತ್ರದಿಂದ ಜಗತ್ತನ್ನೇ ಗೆದ್ದ ಮಹಾತ್ಮ ಗಾಂಧೀಜಿ » 2



» ದುಬೈ ವಿಮಾನದಲ್ಲಿ ಸಹ ಪೈಲಟ್‌ನಿಂದ ದಾಳಿಗೊಳಗಾಗಿ ಗಂಭೀರವಾಗಿ ಗಾಯಗೊಂಡಿದ್ದ ಭಾರತೀಯ ಪೈಲಟ್ ಕ್ಯಾಪ್ಟನ್ ಸ್ಮಿತ್ ಮಚ್ಚರ್ ಅವರು ಇದೀಗ ಅಪಾಯದಿಂದ ಪಾರಾಗಿದ್ದಾರೆ. » 3



ಅವೈಜ್ಞಾನಿಕ ಸೇತುವೆ ಕಾಮಗಾರಿ : ಆರೋಪ » 4

## ಇಂದು ಗಾಂಧಿ - ಲಾಲ್ ಬಹದ್ದೂರ್ ಶಾಸ್ತ್ರಿ ಜನ್ಮ ದಿನಾಚರಣೆ

• ಪ್ರಜೋದಯ ವರದಿ

**ಹಾಸನ** : ನಗರದ ಎಂ.ಜಿ.ರಸ್ತೆಯಲ್ಲಿರುವ ಗಾಂಧಿ ಭವನದಲ್ಲಿ ಅ.2 ರಂದು ಬೆಳಿಗ್ಗೆ 9 ಗಂಟೆಗೆ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಮತ್ತು ಭಾರತದ ಮಾಜಿ ಪ್ರಧಾನ ಮಂತ್ರಿ ದಿ|| ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜನ್ಮ ದಿನಾಚರಣೆಯನ್ನು ಏರ್ಪಡಿಸಲಾಗಿದೆ ಎಂದು ಜಿಲ್ಲಾಧಿಕಾರಿ ಲತಾ ಕುಮಾರಿ ಅವರು ತಿಳಿಸಿದ್ದಾರೆ.

ಕಾರ್ಯಕ್ರಮದಲ್ಲಿ ಎಲ್ಲಾ ಸರ್ಕಾರಿ ಕಚೇರಿಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಕಡ್ಡಾಯವಾಗಿ ಭಾಗವಹಿಸುವಂತೆ ಜಿಲ್ಲಾಧಿಕಾರಿ ಅವರು ಸೂಚಿಸಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಕೋರಿದ್ದಾರೆ.

ಗಾಂಧಿ ಜಯಂತಿ ಹಿನ್ನಲೆಯಲ್ಲಿ ಗುರುವಾರ ಬೆಳಿಗ್ಗೆ 6 ರಿಂದ 8 ಗಂಟೆಯವರೆಗೆ ಹಾಸನಾಂಬ ದೇವಿ ಮತ್ತು ಶ್ರೀ ಸಿದ್ದೇಶ್ವರ ಸ್ವಾಮಿ ದೇವಾಲಯದ ಅಕ್ಕಪಕ್ಕದಲ್ಲಿ ಶ್ರಮದಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

# 50 ಲಕ್ಷ ಮತದಾರರನ್ನು ಕೈಬಿಡಲು ಷಡ್ಯಂತ್ರ

## ಸಂಪುಟ ಸಹೋದ್ಯೋಗಿಗಳೊಂದಿಗೆ ಸಿಎಂ ಧರಣಿ | ಬಿಜೆಪಿ-ಜೆಡಿಎಸ್ ವಿರುದ್ಧ ಕಿಡಿ

• ಪ್ರಜೋದಯ ವರದಿ



**ಬೆಂಗಳೂರು:** ಎಸ್‌ಐಆರ್‌ಯಲ್ಲಿ ಫಾರಂ -7 ಮೂಲಕ 50 ಲಕ್ಷ ಅರ್ಹ ಮತದಾರರ ಹೆಸರು ಕೈಬಿಡಲು ಷಡ್ಯಂತ್ರ ನಡೆದಿದೆ. ಕೂಡಲೇ ಕ್ರಿಮಿನಲ್ ಪ್ರಕರಣ ದಾಖಲಿಸಿ, ತನಿಖೆಗೆ ಆದೇಶ ನೀಡಬೇಕೆಂದು ಆಗ್ರಹಿಸಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಸಂಪುಟ ಸಹೋದ್ಯೋಗಿಗಳೊಂದಿಗೆ ಮುಖ್ಯ ಚುನಾವಣಾಧಿಕಾರಿಗಳ ಕಚೇರಿ ಆವರಣದಲ್ಲಿ ಧರಣಿ ನಡೆಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮತದಾರರನ್ನು ಪಟ್ಟಿಯಿಂದ ತೆಗೆದು ಹಾಕಲು ಬಿಜೆಪಿ ಹಾಗು ಜೆಡಿಎಸ್ ಕ್ರಿಮಿನಲ್ ಸಂಚು ರೂಪಿಸಿ ವ್ಯಾಪಕ ಅಕ್ರಮದಲ್ಲಿ ತೊಡಗಿರುವುದು ಬಯಲಿಗೆ ಬಂದಿದ್ದು, ಇದರ ವಿರುದ್ಧ ಸರ್ಕಾರ ಕಾನೂನು ಕ್ರಮ ಸೇರಿ ಎಲ್ಲಾ ಕ್ರಮಗಳನ್ನು ಕೈಗೊಳ್ಳಲಿದೆ ಎಂದು ತಿಳಿಸಿದರು.

ರಾಜ್ಯದಲ್ಲಿ ಈಗಾಗಲೇ ಎಐಆರ್ ಪ್ರಕ್ರಿಯೆಯಲ್ಲಿ 1.07 ಕೋಟಿ ಮತದಾರರ ಹೆಸರುಗಳು ಕೈಬಿಡಲಾಗಿದೆ. 45 ಲಕ್ಷ ಮತದಾರರಿಗೆ ನೋಟೀಸ್ ನೀಡಿದ್ದಾರೆ. ಇಷ್ಟಾದ ಬಳಿಕವು ಈಗ ಬಿಜೆಪಿ ಕಾರ್ಯಕರ್ತರು ಸುಮಾರು 50 ಲಕ್ಷ ಮತದಾರರನ್ನು ಮತಪಟ್ಟಿಯಿಂದ ಡಿಲೀಟ್ ಮಾಡಿಸಲು ಷಡ್ಯಂತ್ರ ನಡೆಸಿದ್ದಾರೆ. ರಾಜ್ಯ ಚುನಾವಣಾ ಆಯೋಗ, ತಕ್ಷಣ ಈ ಎಲ್ಲಾ ಪ್ರಕರಣಗಳ ಬಗ್ಗೆ ಎಫ್‌ಐಆರ್ ದಾಖಲಿಸಿ, ಈ ಎಲ್ಲಾ ಕಡೆಗಳಲ್ಲಿ ಸಮಗ್ರ ತನಿಖೆ ಆರಂಭಿಸಿ, ಯಾರು ಅದರಲ್ಲಿ ಒಳಗೊಂಡಿದ್ದಾರೆ ಅಂಹತವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಬೇಕೆಂದು ಒತ್ತಾಯಿಸಿದರು.

ಹಲವು ಜಿಲ್ಲೆಗಳ ಹಲವು ವಿಧಾನ ಸಭಾ ಕ್ಷೇತ್ರಗಳಲ್ಲಿ ಪೂರ್ವ ಮುದ್ರಿತ ಮಾಹಿತಿಗಳನ್ನು ಒಳಗೊಂಡ ಫಾರಂ-7 ನ್ನು ಬಿಜೆಪಿ ಕಾರ್ಯಕರ್ತರು ಬಿಎಲ್‌ಒಗಳಿಗೆ ಸಲ್ಲಿಸಿ, ಮತದಾರರ ಹೆಸರನ್ನು ಪಟ್ಟಿಯಿಂದ ತೆಗೆದು ಹಾಕಲು ಪ್ರಯತ್ನಿಸುತ್ತಿರುವುದು ಪತ್ತೆಯಾಗಿದೆ. ಇದು ಕ್ರಿಮಿನಲ್ ಸಂಚಾಗಿದ್ದು, ಕೋಮು ದ್ವೇಷ ಮೂಡಿಸಿ, ಕೋಮು ಸಾಮರಸ್ಯ ಕದಡಲು ನಡೆಸಿದ ವ್ಯವಸ್ಥಿತ ಷಡ್ಯಂತ್ರವಾಗಿದೆ ಎಂದು ಕಿಡಿಕಾರಿದರು.

ಬಬಲೇಶ್ವರದಲ್ಲಿ 1634 ಸಾವಿರಕ್ಕೂ ಅಧಿಕ ಇಂತಹ ಅರ್ಜಿಗಳನ್ನು ಸಲ್ಲಿಸಲಾಗಿದೆ. ಬಿಜಾಪುರದಲ್ಲಿ 14 ಸಾವಿರ ಅರ್ಜಿಗಳನ್ನು ಸಲ್ಲಿಸಲಾಗಿತ್ತು. ಭಾಲ್ಕಿಯಲ್ಲಿ 3244 ಇಂತಹ ಅರ್ಜಿಗಳನ್ನು ಬಿಜೆಪಿ ಕಾರ್ಯ ಕರ್ತರು ನೀಡಿದ್ದಾರೆ. ಭಾಲ್ಕಿ, ನರಸಿಂಹರಾಜಪುರ, ಬೆಳಗಾವಿ ಸೇರಿ ಹಲವು ಕ್ಷೇತ್ರಗಳಲ್ಲಿ ಅರ್ಹ ಮತದಾರರನ್ನು

» ನಾಲ್ಕನೇ ಪುಟದಲ್ಲಿ

### ಎಸ್‌ಐಆರ್ ರದ್ದಾಗಬೇಕು: ಸಿಎಂ

ಮುಖ್ಯ ಚುನಾವಣಾಧಿಕಾರಿ ಜ್ಞಾನೇಶ್ ಕುಮಾರ್ ಅವರಿಗೆ ಮಾಹಿತಿ ಇಲ್ಲದೇ ಇಂತಹ ಕೃತ್ಯ ನಡೆಯಲು ಸಾಧ್ಯವಿಲ್ಲ. ಎಸ್‌ಐಆರ್ ದೇಶದ ಅತೀ ದೊಡ್ಡ ವಂಚನೆಯಾಗಿದ್ದು, ಎಸ್‌ಐಆರ್ ರದ್ದಾಗಬೇಕೆಂದು ಮುಖ್ಯಮಂತ್ರಿ ಆಗ್ರಹಿಸಿದರು.

ಆಯೋಗದ ಕಾರ್ಯಕ್ಕೆ ಎಲ್ಲಾ ರೀತಿಯ ನೆರವನ್ನು ಸರ್ಕಾರ ನೀಡುತ್ತಾ ಬಂದಿದೆ. ಆದರೆ, ಇದೀಗ ಅರ್ಹ ಮತದಾರರನ್ನು ಅಕ್ರಮವಾಗಿ ತೆಗೆದು ಹಾಕಲು ನಡೆಯುತ್ತಿರುವ ಕ್ರಿಮಿನಲ್ ಸಂಚು ಯಶಸ್ವಿಯಾಗಲು ನಾವು ಬಿಡುವುದಿಲ್ಲ ಎಂದರು.

### ಕ್ರಿಮಿನಲ್ ಕೃತ್ಯ ನಡೆಯಲು ಬಿಡುವುದಿಲ್ಲ

ಚುನಾವಣೆಯಲ್ಲಿ ಗೆಲ್ಲಲು ಸಾಧ್ಯವಿಲ್ಲವೆಂಬ ಕಾರಣಕ್ಕಾಗಿ ಬಿಜೆಪಿ ಹಾಗು ಜೆಡಿಎಸ್ ಇಂತಹ ಕ್ರಿಮಿನಲ್ ಷಡ್ಯಂತ್ರ ನಡೆಸುತ್ತಿರುವುದು ಜಗಜ್ಜಾಹೀರಾಗಿದೆ. ಇಡೀ ದೇಶದಲ್ಲಿಯೇ ಇಂತಹ ಕ್ರಿಮಿನಲ್‌ಗಳು ಇರಲು ಸಾಧ್ಯವಿಲ್ಲ. ನಾವು ಯಾವುದೇ ಕಾರಣಕ್ಕೂ ಕರ್ನಾಟಕದಲ್ಲಿ ಇಂತಹ ಕ್ರಿಮಿನಲ್ ಕೃತ್ಯಗಳು ನಡೆಯಲು ಬಿಡುವುದಿಲ್ಲ ಎಂದು ಮುಖ್ಯಮಂತ್ರಿ ಹೇಳಿದರು.

# ಐಐಟಿಗೆ ಭೂಮಿ ನೀಡಿದ ರೈತರಿಗೆ ಶೀಘ್ರ ಪರಿಹಾರ



• ಪ್ರಜೋದಯ ವರದಿ

**ಹಾಸನ:** ಐಐಟಿಗೆ ಭೂಸ್ವಾಧೀನ ಸಂದರ್ಭದಲ್ಲಿ ಜಮೀನು ಕಳೆದುಕೊಂಡಿರುವ ರೈತರಿಗೆ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಬಾಕಿ ಇರುವ ಪರಿಹಾರ ಮೊತ್ತವನ್ನು ಶೀಘ್ರ ವಿತರಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ.ಶಿವಲಿಂಗೇಗೌಡ ಅವರು ಅಧಿಕಾರಿಗಳಿಗೆ ಸೂಚಿಸಿದರು.

ನಗರದಲ್ಲಿ ಭಾರತೀಯ ತಂತ್ರಜ್ಞಾನ ಸಂಸ್ಥೆ (ಐಐಟಿ) ಸ್ಥಾಪನೆ ಹಾಗು ಕೈಗಾರಿಕಾ ಪ್ರದೇಶದ ಅಭಿವೃದ್ಧಿಗೆ ಸಂಬಂಧಿಸಿದಂತೆ ಗುರುವಾರ ವಿಕಾಸ ಸೌಧದಲ್ಲಿ ಪ್ರಗತಿ ಪರಿಶೀಲನಾ ಸಭೆ ನಡೆಸಿ ಮಾತನಾಡಿದ ಅವರು, ಐಐಟಿ ಯೋಜನೆ ಹಾಗೂ ಕೈಗಾರಿಕಾ ಪ್ರದೇಶದ ಅಭಿವೃದ್ಧಿ ಕಾರ್ಯಗಳಲ್ಲಿ ಅನಗತ್ಯ ವಿಳಂಬವಾಗದಂತೆ ಸಂಬಂಧಿಸಿದ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು. ಅಭಿವೃದ್ಧಿಪಡಿಸಿರುವ ನಿವೇಶನಗಳ ಹಂಚಿಕೆ ಪ್ರಕ್ರಿಯೆಯನ್ನೂ ವಿಳಂಬವಿಲ್ಲದೆ ಪೂರ್ಣಗೊಳಿಸುವಂತೆ ನಿರ್ದೇಶನ ನೀಡಿದರು.

ಐಐಟಿ ಕಾಲೇಜು ಕಟ್ಟಡ ನಿರ್ಮಾಣ ಹಾಗು ಕೈಗಾರಿಕಾ ಪ್ರದೇಶದ ಅಭಿವೃದ್ಧಿಗಾಗಿ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ (ಕೆಐಎಡಿಬಿ) ಭೂಸ್ವಾಧೀನ ಮಾಡಿಕೊಂಡು ಹಲವು ವರ್ಷಗಳು ಕಳೆದಿದ್ದರೂ, ನಿರೀಕ್ಷಿತ ಪ್ರಮಾಣದಲ್ಲಿ ಅಭಿವೃದ್ಧಿ ಕಾಮಗಾರಿಗಳು ನಡೆದಿಲ್ಲ. ಇದು ಸ್ವೀಕಾರಾರ್ಹವಲ್ಲ. ಕೈಗಾರಿಕಾ ಪ್ರದೇಶದ ಸಮಗ್ರ ಅಭಿವೃದ್ಧಿಗೆ ಅಗತ್ಯ ಯೋಜನೆ ರೂಪಿಸಿ, ಕಾಮಗಾರಿಗಳನ್ನು ತ್ವರಿತವಾಗಿ ಕೈಗೊಳ್ಳಬೇಕೆಂದು ಸಚಿವರು ಅಧಿಕಾರಿಗಳಿಗೆ ಸೂಚಿಸಿದರು.

# ವಿದ್ಯುತ್ ಸಂಪರ್ಕ ಕಲ್ಪಿಸಲು 1.05 ಕೋ.ರೂ.ಅನುದಾನ

• ಪ್ರಜೋದಯ ವರದಿ

**ಹಾಸನ:** ತಾಲ್ಲೂಕಿನ ದುದ್ದ ಮತ್ತು ಶಾಂತಿಗ್ರಾಮ ಹೋಬಳಿಗಳ 160 ಕೆರೆಗಳು ಹಾಗು 10 ಕಟ್ಟೆಗಳಿಗೆ ಹೇಮಾವತಿ ನದಿಯಿಂದ ನೀರು ತುಂಬಿಸುವ ಮಹತ್ವಾಕಾಂಕ್ಷೆಯ ಯೋಜನೆಗೆ ಅಗತ್ಯವಿರುವ ವಿದ್ಯುತ್ ಸಂಪರ್ಕ ಕಲ್ಪಿಸಲು 1.05 ಕೋ.ರೂ. ಅನುದಾನ ಬಿಡುಗಡೆ ಮಾಡುವಂತೆ ಜಲಸಂಪನ್ಮೂಲ ಸಚಿವ ಎನ್.ಚಲುವರಾಯಸ್ವಾಮಿ ಸೂಚನೆ ನೀಡಿದ್ದಾರೆ.

ಯೋಜನೆಯ ಮೊದಲ ಮತ್ತು ಎರಡನೇ ಹಂತಗಳ ಅನುಷ್ಠಾನಕ್ಕೆ ಅಗತ್ಯವಿರುವ ವಿದ್ಯುತ್ ಸಂಪರ್ಕಕ್ಕಾಗಿ ಒಟ್ಟು 1,05,09,162ರೂ. ಅನುದಾನ ಬಿಡುಗಡೆ ಮಾಡುವಂತೆ ಕಾವೇರಿ ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಿಗೆ ಸಚಿವರು ನಿರ್ದೇಶನ ನೀಡಿದ್ದಾರೆ.



ಸಂಸದ ಶ್ರೇಯಸ್ ಅವರು ಮಾವಿನಕೆರೆ ಮತ್ತು ಮರ್ಕುಲಿ ಗ್ರಾಮಗಳಲ್ಲಿ 66 ಕೆ.ವಿ. ವಿದ್ಯುತ್ ಸಂಪರ್ಕ ಕಲ್ಪಿಸಲು ಅನು ದಾನ ಒದಗಿಸುವಂತೆ ಜಲಸಂಪನ್ಮೂಲ ಸಚಿವರಿಗೆ ಮನವಿ ಸಲ್ಲಿಸಲಾಗಿತ್ತು. ಮನವಿಗೆ ಸ್ಪಂದಿಸಿ ಅನುದಾನ ಬಿಡುಗಡೆಗೆ ಕ್ರಮ ಕೈಗೊಂಡಿರುವ ಸಚಿವರಿಗೆ ಧನ್ಯವಾದ ಸಲ್ಲಿಸಿದ್ದಾರೆ.

ಈ ಯೋಜನೆ ಪೂರ್ಣಗೊಂಡಲ್ಲಿ ದುದ್ದ ಮತ್ತು ಶಾಂತಿಗ್ರಾಮ ಹೋಬಳಿಗಳ ವ್ಯಾಪ್ತಿಯ ಕೆರೆ-ಕಟ್ಟೆಗಳಿಗೆ ನೀರು ಹರಿಸಲು ಅನುಕೂಲವಾಗಲಿದೆ. ಇದರಿಂದ ಅಂತರ್ಜಲ ಮಟ್ಟ ಹೆಚ್ಚಳದ ಜತೆಗೆ ಸ್ಥಳೀಯ ಗ್ರಾಮಗಳ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೂ ನೆರವಾಗುವ ನಿರೀಕ್ಷೆ ಇದೆ. ಜಿಲ್ಲೆಯ ಜನರ ಅಭಿವೃದ್ಧಿ ಹಾಗೂ ಮೂಲ ಸೌಕರ್ಯಗಳ ಸುಧಾರಣೆಗೆ ನಿರಂತರ ಪ್ರಯತ್ನ ಮುಂದುವರಿಸುವುದಾಗಿ ಸಂಸದ ಶ್ರೇಯಸ್ ತಿಳಿಸಿದ್ದಾರೆ.

# ಕಾಫಿ ಬೆಳೆಗಾರರ ಪರ ಸಂಸತ್ತಿನಲ್ಲಿ ಹೋರಾಟ: ಶ್ರೇಯಸ್

**ಸಕಲೇಶಪುರ:** ಪ್ರತಿಕೂಲ ಹವಾಮಾನ, ಬೆಲೆ ಏರಿಳಿತ, ಕಾರ್ಮಿಕರ ಕೊರತೆ, ಕಾಡಾನೆ ಹಾವಳಿ ಸೇರಿ ಹಲವು ಸಮಸ್ಯೆಗಳ ನಡುವೆ ಕಾಫಿ ಬೆಳೆಗಾರರು ಸಂಕಷ್ಟ ಎದುರಿಸುತ್ತಿದ್ದಾರೆ. ಬೆಳೆಗಾರರ ಸಮಸ್ಯೆಗಳಿಗೆ ಸಂಸತ್ತಿನಲ್ಲಿ ಧ್ವನಿ ಎತ್ತುವುದರ ಜೊತೆಗೆ, ಬೆಳೆಗಾರರ ಹಿತಾಸಕ್ತಿ ಕಾಪಾಡಲು ಪ್ರಾಮಾಣಿಕವಾಗಿ ಶ್ರಮಿಸುವುದಾಗಿ ಸಂಸದ ಶ್ರೇಯಸ್ ಪಟೇಲ್ ಅವರು ಭರವಸೆ ನೀಡಿದರು.

ತಾಲ್ಲೂಕಿನ ಒಸ್ಸೂರು ಗ್ರಾಮದ ಸಮೀಪ ಕರ್ನಾಟಕ ಬೆಳೆಗಾರರ ಒಕ್ಕೂಟ ಹಾಗು ಜಿಲ್ಲಾ ಪ್ಲಾಂಟರ್ಸ್ ಸಂಘದ ವತಿಯಿಂದ ಗುರುವಾರ ಆಯೋಜಿಸಿದ್ದ 12ನೇ ಅಂತರಾಷ್ಟ್ರೀಯ ಕಾಫಿ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ಕಾಫಿ ಬೆಳೆಗಾರರು ಹಲವು ಸವಾಲುಗಳ ನಡುವೆಯೂ ತಮ್ಮ ಸಂಕಷ್ಟಗಳನ್ನು ಬಹಿರಂಗ ಪಡಿಸದೆ ಕೃಷಿಯಲ್ಲಿ ತೊಡಗಿಸಿಕೊಂಡಿರುವ ಶ್ರಮಜೀವಿಗಳು. ಮಲೆನಾಡಿನ ಆರ್ಥಿಕತೆಯ ಬೆನ್ನೆಲುಬಾಗಿರುವ ಕಾಫಿ ಬೆಳೆ ಸಾವಿರಾರು ಕುಟುಂಬಗಳ ಜೀವನೋಪಾಯದ ಮೂಲವಾಗಿದೆ. ಬೆಳೆಗಾರರ ಸಮಸ್ಯೆಗಳಿಗೆ ಸ್ಪಂದಿಸುವುದು ಜನಪ್ರತಿನಿಧಿಯಾಗಿ ತಮ್ಮ ಜವಾಬ್ದಾರಿಯಾಗಿದೆ. ಈಗಾಗಲೇ ಭೂ ಒತ್ತುವರಿ ಕಾನೂನು ಹಾಗು ಕಾಡಾನೆ ಸಮಸ್ಯೆಗಳ ಕುರಿತು ಸಂಸತ್ತಿನಲ್ಲಿ ಗಮನ ಸೆಳೆದಿದ್ದು, ಮುಂದೆಯೂ ಬೆಳೆಗಾರರ ಪರವಾಗಿ ಹೋರಾಟ ಮುಂದುವರಿಸುವುದಾಗಿ ತಿಳಿಸಿದರು.

### ▪ ಭೂ ಒತ್ತುವರಿ ಕಾನೂನು, ಕಾಡಾನೆ ಸಮಸ್ಯೆ ಪರಿಹಾರಕ್ಕೆ ಪ್ರಯತ್ನ



ಕಾಫಿ ಬೆಳೆಯ ಮಹತ್ವವನ್ನು ದೇಶಾದ್ಯಂತ ಪರಿಚಯಿಸುವ ಉದ್ದೇಶದಿಂದ ಸಂಸತ್ತಿನ ಎಲ್ಲಾ ಸದಸ್ಯರಿಗೆ ಕಾಫಿ ಪುಡಿ ವಿತರಿಸಿ, ಜಿಲ್ಲೆಯ ಕಾಫಿಯ ಪರಿಚಯ ಮಾಡಿ ಕೊಡುವ ಯೋಜನೆಯೂ ಇದೆ. ಕಾಫಿ ಸೇವನೆಯಿಂದ ಮನಃಶಾಂತಿ ದೊರೆಯುತ್ತದೆ ಹಾಗು ಒತ್ತಡ ನಿವಾರಣೆಗೆ ಸಹಕಾರಿಯಾಗುತ್ತದೆ ಎಂಬ ಅಂಶಗಳನ್ನು ಉಲ್ಲೇಖಿಸಿದ ಅವರು,

> ಕಾಡಾನೆ-ಮಾನವ ಸಂಘರ್ಷ, ಡೀಮ್ಡ್ ಫಾರೆಸ್ಟ್, ಸೆಕ್ಷನ್-4 ಹಾಗು ಕಸ್ತೂರಿ ರಂಗನ್ ವರದಿಯಿಂದ ಉಂಟಾಗಬಹುದಾದ ಸಮಸ್ಯೆಗಳ ಕುರಿತು ಅಂಕಿ-ಅಂಶಗಳೊಂದಿಗೆ ಸರ್ಕಾರದ ಗಮನಕ್ಕೆ ತಂದಿದ್ದೇನೆ. ಈ ಬಗ್ಗೆ ಕ್ರಮ ಕೈಗೊಂಡು ಪರಿಹಾರ ಸೂಚಿಸಬೇಕಿದೆ.
> -ಸಿಮೆಂಟ್ ಮಂಜು, ಶಾಸಕ

ಕಾಫಿ ಬೆಳೆಗಾರರ ಮುಖದಲ್ಲಿನ ನಗು ಮಾಸದಂತೆ ನೋಡಿಕೊಳ್ಳುವುದು ತಮ್ಮ ಹೊಣೆಗಾರಿಕೆ ಎಂದರು.

### ಬಗೆ ಹರಿಯಬೇಕಿದೆ ಡೀಮ್ಡ್, ಸೆಕ್ಷನ್-4 ಸಮಸ್ಯೆ

ತಾಲ್ಲೂಕಿನಲ್ಲಿ ಡೀಮ್ಡ್ ಅರಣ್ಯ ಸಮಸ್ಯೆ ಗಂಭೀರವಾಗಿದೆ. ಸುಪ್ರೀಂ ಕೋರ್ಟ್ ನಿರ್ದೇಶನದಂತೆ ವೈಜ್ಞಾನಿಕ ಹಾಗು ಭೌತಿಕ ಸಮೀಕ್ಷೆ ನಡೆಸಿ, ವಾಸ್ತವವಾಗಿ ಅರಣ್ಯ ಪ್ರದೇಶ ಗುರುತಿಸಿ ಸೂಕ್ತ ಕ್ರಮ ಕೈಗೊಳ್ಳುವ ಅಗತ್ಯವಿದೆ. ಸೆಕ್ಷನ್-4 ಸಮಸ್ಯೆ ನಿವಾರಣೆಗೆ ರೈತರು ಹಾಗೂ ಸಂಘ ಟನೆಗಳು ನಿರಂತರ ಹೋರಾಟ ನಡೆ ಸುತ್ತಿವೆ. ಕಸ್ತೂರಿ ರಂಗನ್ ವರದಿ ಕೂಡ ಬೆಳೆಗಾರರಿಗೆ ಮತ್ತೊಂದು ಆತಂಕ ತಂದಿದೆ ಎಂದು ಶಾಸಕ ಸಿಮೆಂಟ್ ಮಂಜು ಅವರು ಹೇಳಿದರು.

### ಸಕಲೇಶಪುರ ಬರ ಪಟ್ಟಿಗೆ ಸೇರಿಸಲು ಪ್ರಯತ್ನ

ಮಲೆನಾಡಿನಲ್ಲಿಯೂ ಬರದ ಛಾಯೆ ಆವರಿಸಿರುವ ಹಿನ್ನಲೆ ಸಕಲೇಶಪುರ ತಾಲ್ಲೂಕನ್ನು ಬರ ಪೀಡಿತ ಪ್ರದೇಶಗಳ ಪಟ್ಟಿಗೆ ಸೇರ್ಪಡೆಗೊಳಿಸಲು ಪ್ರಾಮಾಣಿಕ ಪ್ರಯತ್ನ ನಡೆಸಲಾಗುವುದು. ಬೆಳೆಗಾರರ ಸಮಸ್ಯೆಗಳನ್ನು ಮುಖ್ಯಮಂತ್ರಿಗಳ ಗಮನಕ್ಕೆ ತರಲು ಮತ್ತೊಮ್ಮೆ

» ನಾಲ್ಕನೇ ಪುಟದಲ್ಲಿ

# ಹಾಸನ ಮಾರ್ಗವಾಗಿ ಗೋವಾಕ್ಕೆ ವಂದೇ ಭಾರತ್ ರೈಲು

## ಹೆಚ್.ಡಿ.ಕುಮಾರಸ್ವಾಮಿ ಸಲ್ಲಿಸಿದ ಪ್ರಸ್ತಾವನೆಗೆ ರೈಲ್ವೆ ಸಚಿವ ಸಮ್ಮತಿ

• ಪ್ರಜೋದಯ ವರದಿ

**ಹಾಸನ:** ಹಾಸನ, ಮಂಗಳೂರು, ಉಡುಪಿ ಹಾಗು ಕಾರವಾರ ಮಾರ್ಗವಾಗಿ ಬೆಂಗಳೂರಿನಿಂದ ಗೋವಾದ ಮಡಗಾಂವ್‌ಗೆ ಸಂಪರ್ಕ ಕಲ್ಪಿಸುವಂತೆ ಮಡಗಾಂವ್-ಮಂಗಳೂರು ವಂದೇ ಭಾರತ್ ಎಕ್ಸ್‌ಪ್ರೆಸ್ ಸೇವೆಯನ್ನು ವಿಸ್ತರಿಸಲಾಗಿದೆ ಎಂದು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ.

ಈ ಮೂಲಕ ಬೆಂಗಳೂರು-ಹಾಸನ-ಕರಾವಳಿ-ಗೋವಾ ನಡುವೆ ವಂದೇ ಭಾರತ್ ರೈಲು ಸಂಪರ್ಕಕ್ಕೆ ಅವಕಾಶ ಕಲ್ಪಿಸಿದಂತಾಗಿದೆ. ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಈ ಸೇವೆಯನ್ನು ಬೆಂಗಳೂರಿನವರೆಗೆ ವಿಸ್ತರಿಸುವಂತೆ ರೈಲ್ವೆ ಸಚಿವರಿಗೆ ಸಲ್ಲಿಸಿದ್ದ ಪ್ರಸ್ತಾವನೆ ಹಿನ್ನಲೆ ಈ ವಂದೇ ಭಾರತ್ ಸಂಪರ್ಕ ಸೇವೆಯನ್ನು ವಿಸ್ತರಿಸಲಾಗಿದೆ.

ಪ್ರವಾಸೋದ್ಯಮ, ಧಾರ್ಮಿಕ ಯಾತ್ರೆ, ಶಿಕ್ಷಣ ಹಾಗು ವೃತ್ತಿಪರ ಉದ್ದೇಶಗಳಿಗಾಗಿ ಈ ಮಾರ್ಗದಲ್ಲಿ ಸಂಚರಿಸುವ ಪ್ರಯಾಣಿಕರಿಗೆ ಅನುಕೂಲವಾಗಲಿದೆ. ಬೆಂಗಳೂರು, ಕರಾವಳಿ ಕರ್ನಾಟಕ ಮತ್ತು ಗೋವಾದ ಪ್ರಮುಖ ವಾಣಿಜ್ಯ, ಬಂದರು ಹಾಗು ಪ್ರವಾಸೋದ್ಯಮ ಕೇಂದ್ರಗಳ ನಡುವೆ ಉತ್ತಮ ರೈಲು ಸಂಪರ್ಕದ ಅಗತ್ಯವಿದೆ ಎಂದು ಕುಮಾರಸ್ವಾಮಿ ಅವರು ತಮ್ಮ ಪ್ರಸ್ತಾವನೆಯಲ್ಲಿ ತಿಳಿಸಿದ್ದರು.

ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರು ಸೆ.28 ರಂದು ಕುಮಾರಸ್ವಾಮಿ ಅವರಿಗೆ ಬರೆದಿರುವ ಪತ್ರದಲ್ಲಿ, ಡಿಸೆಂಬರ್ 23, 2025ರಂದು ಸಲ್ಲಿಸಿದ್ದ ಅವರ ಪ್ರಸ್ತಾವನೆಯನ್ನು ಉಲ್ಲೇಖಿಸಿದ್ದಾರೆ. ಅದರಂತೆ ಅಸ್ತಿತ್ವದಲ್ಲಿದ್ದ ಮಡಗಾಂವ್-ಮಂಗಳೂರು ವಂದೇ ಭಾರತ್ ಸೇವೆಯನ್ನು ಹಾಸನ, ಉಡುಪಿ ಹಾಗು ಕಾರವಾರ ಮಾರ್ಗ ವಾಗಿ ಯಶವಂತಪುರದ ವರೆಗೆ ವಿಸ್ತರಿಸಲಾಗಿದೆ ಎಂದು ತಿಳಿಸಿದ್ದಾರೆ.

ಪರಿಷ್ಕೃತ ವೇಳಾಪಟ್ಟಿಯೊಂದಿಗೆ ಈ ಸೇವೆಯು ರೈಲು ಸಂಖ್ಯೆ



26655/26656 ಯಶವಂತಪುರ-ಮಂಗಳೂರು-ಮಡಗಾಂವ್ ವಂದೇ ಭಾರತ್ ಎಕ್ಸ್‌ಪ್ರೆಸ್ ಹೆಸರಿನಲ್ಲಿ ಕಾರ್ಯನಿರ್ವಹಿಸಲಿದೆ. ಪ್ರಯಾಣಿಕರ ಬೇಡಿಕೆಗೆ ಅನುಗುಣ ವಾಗಿ ಸಂಪರ್ಕ ವ್ಯವಸ್ಥೆ ಸುಧಾರಿಸುವುದರಿಂದ ಪ್ರವಾಸೋದ್ಯಮ ಹಾಗು ಪ್ರಾದೇಶಿಕ ಆರ್ಥಿಕ ಚಟುವಟಿಕೆಗಳಿಗೆ ಉತ್ತೇಜನ ದೊರೆಯಲಿದೆ ಎಂದು ಕುಮಾರಸ್ವಾಮಿ ಅವರು ತಮ್ಮ ಪ್ರಸ್ತಾವನೆಯಲ್ಲಿ ಪ್ರತಿಪಾದಿಸಿದ್ದರು.

## ನಾಳೆ ಪ್ರಜಾಸೇವಾ ಅಂದೋಲನ

• ಪ್ರಜೋದಯ ವರದಿ

**ಹಾಸನ** : ನಗರದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಅ.3 ರಂದು ಬೆಳಿಗ್ಗೆ 10.30ಕ್ಕೆ ತಹಶೀಲ್ದಾರ್ ಅವರ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮಟ್ಟದ ಅಧಿಕಾರಿಗಳು ಸಾರ್ವಜನಿಕರ ಅಹವಾಲು ದಾಖಲಿಸುವ ಕಾರ್ಯಕ್ರಮ ಆಯೋಜಿಸಲಾಗಿದೆ. ತಾಲ್ಲೂಕು ವ್ಯಾಪ್ತಿಯ ಸಾಮಾಜಿಕ, ಶೈಕ್ಷಣಿಕ, ಕೃಷಿ ಚಟುವಟಿಕೆ ಸೇರಿ ವಿವಿಧ ಇಲಾಖೆಗಳಲ್ಲಿ ದೊರೆಯಬೇಕಾದ ಸೌಲಭ್ಯಗಳ ಅಹವಾಲು ಸ್ವೀಕರಿಸಲು ಸರ್ಕಾರದ ಏಕೀಕೃತ ಸಾರ್ವಜನಿಕ ದೂರು ನಿವಾರಣಾ ತಂತ್ರಾಂಶದಲ್ಲಿ ವ್ಯವಸ್ಥೆಯನ್ನು ಅನುಷ್ಠಾನಗೊಳಿಸಿದ್ದು, ಸದರಿ ದಿನದಂದು ಸಾರ್ವಜನಿಕರು ಹಾಜರಾಗಿ ಅಹವಾಲನ್ನು ಸಲ್ಲಿಸುವಂತೆ ತಹಶೀಲ್ದಾರ್ ತಿಳಿಸಿದ್ದಾರೆ.

# ಪರಿಶ್ರಮದಿಂದ ಬದುಕಿನಲ್ಲಿ ಬದಲಾವಣೆ ಸಾಧ್ಯ

## ಇತರರನ್ನು ವಿಮರ್ಶಿಸುವ ಮೊದಲು ಆತ್ಮಾವಲೋಕನ ಮಾಡಿಕೊಳ್ಳಿ : ಕೆ.ಆರ್. ಕವಿತಾ

• ಪ್ರಜೋದಯ ವರದಿ

**ಹಾಸನ:** ಜ್ಞಾನಾರ್ಜನೆ, ಪರಿಶ್ರಮ ಹಾಗು ಆತ್ಮವಿಮರ್ಶೆಯ ಮೂಲಕ ಬದುಕಿನಲ್ಲಿ ಬದಲಾವಣೆ ತಂದುಕೊಳ್ಳಬಹುದೆಂದು ಮಹಾನಗರ ಪಾಲಿಕೆ ಇಂಜಿನೀಯರ್ ಕೆ.ಆರ್. ಕವಿತಾ ಅವರು ಹೇಳಿದರು.

ನಗರದ ಎ.ವಿ.ಕಾಂತಮ್ಮ ಮಹಿಳಾ ಕಾಲೇಜಿನಲ್ಲಿ ಗುರುವಾರ ನಡೆದ 2026-27ನೇ ಸಾಲಿನ ವಿವಿಧ ಸಂಘಗಳ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು, ಇತರರನ್ನು ವಿಮರ್ಶಿಸುವ ಮೊದಲು ನಮ್ಮ ಸಾಮರ್ಥ್ಯ ಹಾಗೂ ಸಮಾಜಕ್ಕೆ ನೀಡುತ್ತಿರುವ ಕೊಡುಗೆಯ ಬಗ್ಗೆ ಆತ್ಮಾವಲೋಕನ ಮಾಡಿಕೊಳ್ಳಬೇಕು. ಸೋಲು ಎದುರಾದರೂ ಛಲದಿಂದ ಮುನ್ನಡೆಯಬೇಕೆಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.



ವಿದ್ಯಾರ್ಥಿಗಳು ಪಠ್ಯಕ್ಕೆ ಮಾತ್ರ ಸೀಮಿತವಾಗದೆ ವೇದಿಕೆ ಮೇಲೆ ಮಾತನಾಡುವ ಆತ್ಮವಿಶ್ವಾಸ ಬೆಳೆಸಿಕೊಳ್ಳಬೇಕು. ಪಠ್ಯೇತರ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವ ಮೂಲಕ ತಮ್ಮಲ್ಲಿರುವ ಪ್ರತಿಭೆಯನ್ನು ಗುರುತಿಸಿಕೊಂಡು ಬೆಳೆಸಿಕೊಳ್ಳಬೇಕು.

ಪೌರಕಾರ್ಮಿಕರ ಶ್ರಮವನ್ನು ಗೌರವಿಸುವುದು ಪ್ರತಿಯೊಬ್ಬ ನಾಗರಿಕನ ಕರ್ತವ್ಯವಾಗಿದೆ. ತ್ಯಾಜ್ಯ ಉತ್ಪಾದನೆಯನ್ನು ಕಡಿಮೆ ಮಾಡುವುದರ ಜೊತೆಗೆ ಸ್ವಚ್ಛತೆ ಕಾಪಾಡಲು ಸಾರ್ವಜನಿಕರು ಸಹಕರಿಸಬೇಕು. ವಿದ್ಯಾರ್ಥಿಗಳು ಕೂಡ ಪರಿಸರ ಸಂರಕ್ಷಣೆ ಹಾಗೂ ಸ್ವಚ್ಛತೆಯ ಬಗ್ಗೆ ಸಮಾಜದಲ್ಲಿ

» ನಾಲ್ಕನೇ ಪುಟದಲ್ಲಿ

## ಇಂದು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರ ಪದಗ್ರಹಣ

• ಪ್ರಜೋದಯ ವರದಿ




**ಹಾಸನ:** ಜಿಲ್ಲಾ ಕಾಂಗ್ರೆಸ್ ನೂತನ ಅಧ್ಯಕ್ಷರಾಗಿ ಆಯ್ಕೆಯಾಗಿರುವ ಜಿ.ಬಿ.ಶಶಿಧರ್ ಅವರು ಶುಕ್ರವಾರ ಬೆಳಿಗ್ಗೆ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಪದಗ್ರಹಣ ಸ್ವೀಕಾರ ಮಾಡಲಿದ್ದಾರೆ.

ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಜಿ.ಬಿ.ಶಶಿಧರ್ ಅವರು, ಪದಗ್ರಹಣ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಶಿವಲಿಂಗೇಗೌಡ, ಸಂಸದ ಶ್ರೇಯಸ್ ಸೇರಿ ಜಿಲ್ಲೆಯ ಹಿರಿಯ ಕಾಂಗ್ರೆಸ್ ನಾಯಕರು, ಮಾಜಿ ಸಚಿವರು, ಶಾಸಕರು ಹಾಗೂ ಮುಖಂಡರು ಭಾಗವಹಿಸಲಿದ್ದಾರೆಂದು ತಿಳಿಸಿದರು.

ಅಧ್ಯಕ್ಷರಾಗಿ ಜವಾಬ್ದಾರಿ ವಹಿಸಿಕೊಂಡ ಬಳಿಕ ಬೂತ್ ಮಟ್ಟದಿಂದ ಪಕ್ಷ ಸಂಘಟನೆಗೆ ಹೆಚ್ಚಿನ ಒತ್ತು ನೀಡಲಾಗುವುದು. ಪಕ್ಷದಲ್ಲಿ ಸಣ್ಣಪುಟ್ಟ ಭಿನ್ನಾಭಿಪ್ರಾಯಗಳು ಇರಬಹುದು. ಯಾವುದೇ ವ್ಯತ್ಯಾಸಗಳಿದ್ದರೂ ಸಚಿವರು ಹಾಗೂ ಸಂಸದರ ಮಾರ್ಗದರ್ಶನದಲ್ಲಿ ಬಗೆಹರಿಸಿಕೊಂಡು ಎಲ್ಲರನ್ನೂ ಒಗ್ಗೂಡಿಸಿ ಪಕ್ಷವನ್ನು ಮುನ್ನಡೆಸಲಾಗುವುದು ಎಂದರು.

ಪಕ್ಷ ವಹಿಸಿರುವ ಜವಾಬ್ದಾರಿಯನ್ನು ಅಚ್ಚುಕಟ್ಟಾಗಿ ನಿರ್ವಹಿಸುವ ವಿಶ್ವಾಸವಿದೆ. ಜಿಲ್ಲೆಯ ಎಲ್ಲಾ ಮುಖಂಡರು ಹಾಗೂ ಕಾರ್ಯಕರ್ತರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಪಕ್ಷವನ್ನು ಮತ್ತಷ್ಟು ಬಲಪಡಿಸುವುದು ಪ್ರಮುಖ ಉದ್ದೇಶವೆಂದರು.

## ಶೀಘ್ರ ಕಾಮಗಾರಿ ಆರಂಭ | ಸಚಿವ ಸತೀಶ್ ಜಾರಕಿಹೊಳಿ ಭರವಸೆ

# 45 ಕೋ.ರೂ. ವೆಚ್ಚದಲ್ಲಿ ಕೊಣನೂರು-ಕಟ್ಟೇಪುರ ಸೇತುವೆ

• ಪ್ರಜೋದಯ ವರದಿ

**ಅರಕಲಗೂಡು:** ತಾಲ್ಲೂಕಿನ ಕೊಣನೂರು-ಕಟ್ಟೇಪುರ ನಡುವೆ ಕಾವೇರಿ ನದಿಗೆ ಅಡ್ಡಲಾಗಿ 45.25 ಕೋ. ರೂ. ವೆಚ್ಚದಲ್ಲಿ ಸೇತುವೆ ನಿರ್ಮಾಣ ಕಾಮಗಾರಿ ಶೀಘ್ರದಲ್ಲೇ ಆರಂಭವಾಗಲಿದೆ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರು ತಿಳಿಸಿದರು.

ಅಧಿಕಾರಿಗಳೊಂದಿಗೆ ಸ್ಥಳಕ್ಕೆ ಭೇಟಿ ನೀಡಿ ಸೇತುವೆ ನಿರ್ಮಾಣ ಸ್ಥಳ ಪರಿಶೀಲಿಸಿದ ಬಳಿಕ ಮಾತನಾಡಿದ ಅವರು, ಕೊಣನೂರು ಹಾಗು ಕಟ್ಟೇಪುರ ಸುತ್ತಮುತ್ತಲಿನ ಸುಮಾರು 15 ಗ್ರಾಮಗಳ ಜನರ ದಶಕಗಳ ಕನಸಾಗಿರುವ ಸೇತುವೆ ನಿರ್ಮಾಣದಿಂದ ಈ ಭಾಗದ ಸಂಚಾರ ವ್ಯವಸ್ಥೆ ಮತ್ತಷ್ಟು ಸುಧಾರಿಸಲಿದೆ. ಪ್ರವಾಸೋದ್ಯಮ ಹಾಗೂ ವಾಣಿಜ್ಯ ಚಟುವಟಿಕೆಗಳ ಬೆಳವಣಿಗೆಗೂ ಅನುಕೂಲವಾಗಲಿದೆ ಎಂದರು.



ಕಾವೇರಿ ನದಿಗೆ ಅಡ್ಡಲಾಗಿ ಶಾಶ್ವತ ಸೇತುವೆ ನಿರ್ಮಾಣದ ಕಾರ್ಯಕ್ಕೆ ವೇಗ ದೊರೆತಿದ್ದು, ಕಾಮಗಾರಿ ಶೀಘ್ರ ಆರಂಭಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗುತ್ತಿದೆ. ಸೇತುವೆ ನಿರ್ಮಾಣಕ್ಕೆ ಅಗತ್ಯವಿರುವ ಜಾಗ ಹಾಗು ಕೊಣನೂರು ಪಟ್ಟಣದ ಮುಖ್ಯ ರಸ್ತೆ ಮತ್ತು ಕಟ್ಟೇಪುರ ಸಂಪರ್ಕ ರಸ್ತೆಗೆ ಬೇಕಾದ ಜಾಗದ ಕುರಿತು ಕೂಡಲೇ ಸರ್ವೆ ಕಾರ್ಯ ಪೂರ್ಣಗೊಳಿಸುವಂತೆ ಸ್ಥಳದಲ್ಲಿದ್ದ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

> ಸೇತುವೆ ನಿರ್ಮಾಣ ಸ್ಥಳಕ್ಕೆ ಸಚಿವರು ಭೇಟಿ ನೀಡಿ ಪರಿಶೀಲನೆ ನಡೆಸಿರುವುದು ಸಂತಸ ತಂದಿದೆ. ಸಚಿವರೊಂದಿಗೆ ಚರ್ಚಿಸಿ ಶೀಘ್ರ ದಿನಾಂಕ ನಿಗದಿಪಡಿಸಿ ಸೇತುವೆ ಹಾಗು ಸಂಪರ್ಕ ರಸ್ತೆ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಲಾಗುವುದು.
> - ಎ.ಮಂಜು, ಶಾಸಕ

ಪಿಎಲ್‌ಡಿ ಬ್ಯಾಂಕ್ ನಿರ್ದೇಶಕ ಹೊಯ್ಸಳ ಕೊಣನೂರು ಅವರು ಮಾತನಾಡಿ, ಕೊಣನೂರು-ಕಟ್ಟೇಪುರ ನಡುವೆ ಶಾಶ್ವತ ಸೇತುವೆ ನಿರ್ಮಾಣ ಹಲವು ವರ್ಷಗಳ ಬೇಡಿಕೆಯಾಗಿತ್ತು. ಎ.ಮಂಜು ಅವರು ಈ ಬಾರಿ ಶಾಸಕರಾಗಿ ಆಯ್ಕೆಯಾದ ಬಳಿಕ ಕನಿಷ್ಠ ನಾಲ್ಕು ಬಾರಿ ಅಧಿವೇಶನದಲ್ಲಿ ವಿಷಯ ಪ್ರಸ್ತಾಪಿಸಿ, ಸಚಿವರ ಮೇಲೆ ಒತ್ತಡ ತಂದು ಅನುದಾನ ಮಂಜೂರು ಮಾಡಿಸಲು ಶ್ರಮಿಸಿದ್ದಾರೆ. ಇದೀಗ ಸೇತುವೆ ನಿರ್ಮಾಣದ ಕನಸು ನನಸಾಗುತ್ತಿರುವುದು ಸಂತಸ ತಂದಿದೆ ಎಂದು ಹೇಳಿದರು.

ಸೇತುವೆ ನಿರ್ಮಾಣದಿಂದ ಕೊಣನೂರು, ಕಟ್ಟೇಪುರ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಜನರ ಸಂಚಾರಕ್ಕೆ ಅನುಕೂಲವಾಗುವುದರ ಜೊತೆಗೆ ಈ ಭಾಗದ ಆರ್ಥಿಕ ಚಟುವಟಿಕೆಗಳಿಗೂ ಉತ್ತೇಜನ ದೊರೆಯುವ ನಿರೀಕ್ಷೆ ಇದೆ ಎಂದು ತಿಳಿಸಿದರು.

## ಬೈಕ್‌ಗೆ ಟ್ಯಾಂಕರ್ ಡಿಕ್ಕಿ : ಇಬ್ಬರು ಸಾವು

• ಪ್ರಜೋದಯ ವರದಿ

**ಹಾಸನ** : ಗ್ಯಾಸ್ ಟ್ಯಾಂಕರ್ ಹಾಗು ಬೈಕ್ ನಡುವೆ ಮುಖಾಮುಖಿ ಡಿಕ್ಕಿ ಸಂಭವಿಸಿ ಇಬ್ಬರು ಯುವಕರು ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ತಾಲ್ಲೂಕಿನ ಮುದ್ದಾಪುರ ಗ್ರಾಮದ ಬಳಿ ಗುರುವಾರ ನಡೆದಿದೆ. ಯಲಗುಂದ ಗ್ರಾಮದ ಸಚಿನ್ (26) ಹಾಗು ವಿಜಯ್ ಕುಮಾರ್ (38) ಮೃತ ದುರ್ದೈವಿಗಳು.



ನಗರಕ್ಕೆ ಬಂದಿದ್ದ ಇಬ್ಬರು ವಾಪಾಸ್ ಬೈಕ್‌ನಲ್ಲಿ ಗ್ರಾಮಕ್ಕೆ ತೆರಳುತ್ತಿದ್ದ ವೇಳೆ, ಎದುರು ಬಂದ ಗ್ಯಾಸ್ ಟ್ಯಾಂಕರ್ ಬೈಕ್‌ಗೆ ಡಿಕ್ಕಿ ಹೊಡೆದಿದೆ. ಡಿಕ್ಕಿಯ ತೀವ್ರತೆಗೆ ಇಬ್ಬರೂ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಅಪಘಾತ ಸಂಭವಿಸಿದ ಬಳಿಕ ಗ್ಯಾಸ್ ಟ್ಯಾಂಕರ್ ನಿಲ್ಲಿಸದೆ ಚಾಲಕ ಪರಾರಿಯಾಗಿದ್ದ. ಪೊಲೀಸರು ಸಮೀಪದ ಪೆಟ್ರೋಲ್ ಬಂಕ್‌ನ ಸಿಸಿಟಿವಿ ದೃಶ್ಯಾವಳಿಗಳನ್ನು ಆಧರಿಸಿ ಪರಾರಿಯಾಗಿದ್ದ ಟ್ಯಾಂಕರ್ ಚಾಲಕನನ್ನು ಬಂಧಿಸಿದ್ದಾರೆ. ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಅಹಿಂಸೆಯ ಅಸ್ತ್ರದಿಂದ ಜಗತ್ತನ್ನೇ ಗೆದ್ದ ಮಹಾತ್ಮ ಗಾಂಧೀಜಿ



ಅಕ್ಟೋಬರ್ 2, 2026 ರಂದು ಮಹಾತ್ಮ ಗಾಂಧಿಯವರ 157ನೇ ಜನ್ಮದಿನವನ್ನು (ಗಾಂಧಿ ಜಯಂತಿ) ಆಚರಿಸಲಾಗುತ್ತಿದೆ. ಸತ್ಯ, ಅಹಿಂಸೆ, ಸರಳತೆ ಮತ್ತು ಸ್ವಚ್ಛತೆಯ ತತ್ವಗಳನ್ನು ಪ್ರತಿಪಾದಿಸಿದ ಗಾಂಧೀಜಿ, ಭಾರತದ ಸ್ವಾತಂತ್ರ್ಯ ಸಂಗ್ರಾಮದ ಸಾರಥಿಯಾಗಿದ್ದರು. ಅವರ ಅಹಿಂಸಾತ್ಮಕ ಹೋರಾಟಗಳು ಭಾರತಕ್ಕೆ ಸ್ವಾತಂತ್ರ್ಯ ತಂದುಕೊಟ್ಟವು. ಈ ದಿನವನ್ನು ಜಾಗತಿಕವಾಗಿ ಅಂತರರಾಷ್ಟ್ರೀಯ ಅಹಿಂಸಾ ದಿನವೆಂದು ಗುರುತಿಸಲಾಗಿದೆ, ಅವರ ತತ್ವಗಳು ಇಂದಿಗೂ ಪ್ರಸ್ತುತವಾಗಿವೆ.

## ಪ್ರಮುಖ ಮುಖ್ಯಾಂಶಗಳು

» ಮಹಾತ್ಮ ಗಾಂಧೀಜಿಯವರ 157ನೇ ಜನ್ಮದಿನೋತ್ಸವ
» ಅಹಿಂಸೆ, ಸತ್ಯ, ಸರಳತೆ ಹಾಗೂ ಸ್ವಚ್ಛತೆಯ ತತ್ವಗಳನ್ನು ಸಾರುವ ಈ ದಿನ
» ಸ್ವಾತಂತ್ರ್ಯ ಸಂಗ್ರಾಮದಲ್ಲಿ ಪ್ರಮುಖ ಮೈಲಿಗಲ್ಲುಗಳು

ಭಾರತೀಯ ಸ್ವಾತಂತ್ರ್ಯ ಸಂಗ್ರಾಮದ ಸಾರಥಿ, ಸತ್ಯ ಹಾಗೂ ಅಹಿಂಸೆಯ ಹರಿಕಾರ ಮಹಾತ್ಮ ಗಾಂಧೀಜಿಯವರ 157ನೇ ಜನ್ಮದಿನೋತ್ಸವವನ್ನು (ಗಾಂಧಿ ಜಯಂತಿ) ಶುಕ್ರವಾರ, ಅಕ್ಟೋಬರ್ 2, 2026 ರಂದು ದೇಶಾದ್ಯಂತ ಅತ್ಯಂತ ಸಡಗರ ಹಾಗೂ ಗೌರವಪೂರ್ವಕವಾಗಿ ಆಚರಿಸಲಾಗುತ್ತಿದೆ. ರಾಷ್ಟ್ರಪಿತ ಗಾಂಧೀಜಿಯವರು ಪ್ರತಿಪಾದಿಸಿದ ಅಹಿಂಸೆ, ಸತ್ಯ, ಸರಳತೆ ಹಾಗೂ ಸ್ವಚ್ಛತೆಯ ತತ್ವಗಳನ್ನು ಸಾರುವ ಈ ದಿನವು ಕೇವಲ ಭಾರತಕ್ಕಷ್ಟೇ ಅಲ್ಲದೆ ಜಾಗತಿಕ ಮಟ್ಟದಲ್ಲೂ ಅಂತರರಾಷ್ಟ್ರೀಯ ಅಹಿಂಸಾ ದಿನವಾಗಿ ಮಹತ್ವ ಪಡೆದುಕೊಂಡಿದೆ.

**ಮಹಾತ್ಮ ಗಾಂಧಿ ಜೀವನ:** 1869 ರ ಅಕ್ಟೋಬರ್ 2 ರಂದು ಗುಜರಾತ್‌ನ ಪೋರ್‌ಬಂದರ್‌ನಲ್ಲಿ ಜನಿಸಿದ ಮೋಹನ್‌ದಾಸ್ ಕರಮ್‌ಚಂದ್ ಗಾಂಧಿ (ಬಾಪು) ಲಂಡನ್‌ನಲ್ಲಿ ಕಾನೂನು ಶಿಕ್ಷಣ ಪೂರ್ಣಗೊಳಿಸಿದರು. ನಂತರ ವೃತ್ತಿ ನಿಮಿತ್ತ ದಕ್ಷಿಣ ಆಫ್ರಿಕಾಕ್ಕೆ ತೆರಳಿದ ಗಾಂಧೀಜಿಯವರು, ಅಲ್ಲಿ ಎದುರಿಸಿದ ಜನಾಂಗೀಯ ತಾರತಮ್ಯ ಮತ್ತು ಅಪಮಾನಗಳ ವಿರುದ್ಧ ಅಹಿಂಸಾತ್ಮಕ ಪ್ರತಿಭಟನೆಯನ್ನು ನಡೆಸಿ ಸತ್ಯಾಗ್ರಹ ಎಂಬ ಶಕ್ತಿಯುತ ಅಸ್ತ್ರವನ್ನು ರೂಪಿಸಿಕೊಂಡರು. ಭಾರತಕ್ಕೆ ಮರಳಿದ ನಂತರ, ದೇಶದ ಸ್ವಾತಂತ್ರ್ಯ ಚಳವಳಿಯ ಮುಂಚೂಣಿ ನಾಯಕರಾಗಿ ಕೋಟ್ಯಂತರ ಜನಸಾಮಾನ್ಯರನ್ನು ಬ್ರಿಟಿಷ್ ಆಡಳಿತದ ವಿರುದ್ಧ ಸಂಘಟಿಸಿದರು.

**ಅಂತರರಾಷ್ಟ್ರೀಯ ಅಹಿಂಸಾ ದಿನ ಹಾಗೂ ಜಾಗತಿಕ ಪ್ರಭಾವ:**

**ಯುಎನ್ ನಿರ್ಧಾರ (2007):** ವಿಶ್ವಸಂಸ್ಥೆಯ ಸಾಮಾನ್ಯ ಸಭೆಯು 2007 ರ ಜೂನ್ 15 ರಂದು ಅಂಗೀಕರಿಸಿದ ನಿರ್ಣಯದಂತೆ, ಗಾಂಧೀಜಿಯವರ ಜನ್ಮದಿನವಾದ ಅಕ್ಟೋಬರ್ 2 ರಂದು ಅಂತರರಾಷ್ಟ್ರೀಯ ಅಹಿಂಸಾ ದಿನ ಎಂದು ವಿಶ್ವದಾದ್ಯಂತ ಆಚರಿಸಲಾಗುತ್ತದೆ.

**ಜಾಗತಿಕ ನಾಯಕರಿಗೆ ಪ್ರೇರಣೆ:** ಮಾರ್ಟಿನ್ ಲೂಥರ್ ಕಿಂಗ್ ಜೂನಿಯರ್, ನೆಲ್ಸನ್ ಮಂಡೇಲಾ, ದಲೈ ಲಾಮಾ ಮುಂತಾದ ಜಾಗತಿಕ ನಾಯಕರು ಗಾಂಧೀಜಿಯವರ ಅಹಿಂಸಾ ಮಾರ್ಗವನ್ನು ಅನುಸರಿಸಿ ತಮ್ಮ ದೇಶಗಳಲ್ಲಿ ನಾಗರಿಕ ಹಕ್ಕುಗಳ ಹೋರಾಟ ನಡೆಸಿದರು.

**ಸ್ವಚ್ಛತಾ ಆಂದೋಲನ:** ಗಾಂಧಿ ಜಯಂತಿಯಂದು ದೆಹಲಿಯ ರಾಜ್‌ಘಾಟ್ ಸ್ಮಾರಕಕ್ಕೆ ರಾಷ್ಟ್ರಪತಿ, ಪ್ರಧಾನಮಂತ್ರಿ ಸೇರಿದಂತೆ ಹಲವು ಗಣ್ಯರು ತೆರಳಿ ಪುಷ್ಪನಮನ ಸಲ್ಲಿಸುತ್ತಾರೆ. ಶಾಲಾ-ಕಾಲೇಜುಗಳಲ್ಲಿ ಪ್ರಬಂಧ, ಭಾಷಣ, ರಸಪ್ರಶ್ನೆ ಹಾಗೂ ರಂಗೋಲಿ ಸ್ಪರ್ಧೆಗಳನ್ನು ಆಯೋಜಿಸಲಾಗುತ್ತದೆ. ಗಾಂಧೀಜಿಯವರು ಸ್ವಚ್ಛತೆಯೇ ದೇವತಾ ಕಾರ್ಯ ಎಂದು ನಂಬಿದ್ದರಿಂದ, ಭಾರತ ಸರ್ಕಾರವು ಗಾಂಧಿ ಜಯಂತಿಯ ಸಂದರ್ಭದಲ್ಲಿ ಸ್ವಚ್ಛತಾ ಹೈ ಸೇವಾ ಕಾರ್ಯಕ್ರಮಗಳನ್ನು ಆಯೋಜಿಸಿ ಸಾರ್ವಜನಿಕ ಸ್ಥಳಗಳ ನೈರ್ಮಲ್ಯ ಹಾಗೂ ಸಮುದಾಯ ಸೇವೆಗೆ ಹೆಚ್ಚಿನ ಒತ್ತು ನೀಡುತ್ತದೆ.

**ಭಾರತಕ್ಕೆ ಆಗಮನ ಹಾಗೂ ಮಹಾತ್ಮ ಬಿರುದು**

1915ರಲ್ಲಿ ದಕ್ಷಿಣ ಆಫ್ರಿಕಾದಿಂದ ಭಾರತಕ್ಕೆ ಮರಳಿದ ಗಾಂಧೀಜಿ, ತಮ್ಮ ರಾಜಕೀಯ ಗುರು ಗೋಪಾಲಕೃಷ್ಣ ಗೋಖಲೆಯವರ ಸಲಹೆಯಂತೆ ಇಡೀ ಭಾರತವನ್ನು ಪ್ರವಾಸ ಮಾಡಿ ಜನಸಾಮಾನ್ಯರ ಕಷ್ಟ-ನಷ್ಟಗಳನ್ನು ಅರಿತುಕೊಂಡರು. 1915ರಲ್ಲಿ ಗಾಂಧೀಜಿಯವರ ಆಧ್ಯಾತ್ಮಿಕ ಹಾಗೂ ನೈತಿಕ ಹೋರಾಟವನ್ನು ಮೆಚ್ಚಿ ವಿಶ್ವಕವಿ ರವೀಂದ್ರನಾಥ ಠಾಗೋರ್ ಅವರು ಮೋಹನ್‌ದಾಸ್ ಅವರಿಗೆ ಮಹಾತ್ಮ (ಮಹಾನ್ ಆತ್ಮ) ಎಂಬ ಗೌರವಪೂರ್ವಕ ಬಿರುದನ್ನು ನೀಡಿದರು. (ಬದಲಾಗಿ ಗಾಂಧೀಜಿಯವರು ಠಾಗೋರರನ್ನು ಗುರುದೇವ್ ಎಂದು ಕರೆದರು). 1944ರಲ್ಲಿ ಸಿಂಗಾಪುರ ರೇಡಿಯೋ ಮೂಲಕ ದೇಶವನ್ನು ಉದ್ದೇಶಿಸಿ ಮಾತನಾಡುತ್ತಾ ನೇತಾಜಿ ಸುಭಾಷ್ ಚಂದ್ರ ಬೋಸ್ ಅವರು ಗಾಂಧೀಜಿಯವರನ್ನು ಮೊದಲ ಬಾರಿಗೆ ರಾಷ್ಟ್ರಪಿತ ಎಂದು ಸಂಭೋದಿಸಿದರು.

**ಸಾಮಾನ್ಯವಾಗಿ ಕೇಳಲ್ಪಡುವ ಪ್ರಶ್ನೆಗಳು**

**ಪ್ರಶ್ನೆ:** ಗಾಂಧಿ ಜಯಂತಿ ಆಚರಣೆ ಮಾಡುವುದು ಏಕೆ?

ಉತ್ತರ: ಭಾರತೀಯ ಸ್ವಾತಂತ್ರ್ಯ ಸಂಗ್ರಾಮದ ಸಾರಥಿ, ಸತ್ಯ ಹಾಗೂ ಅಹಿಂಸೆಯ ಹರಿಕಾರ ಆಗಿರುವ ಕಾರಣ ಗೌರವಪೂರ್ವಕವಾಗಿ ಆಚರಿಸಲಾಗುತ್ತಿದೆ.

**ಪ್ರಶ್ನೆ:** ಸ್ವಾತಂತ್ರ್ಯ ಸಂಗ್ರಾಮದಲ್ಲಿ ಪ್ರಮುಖ ಮೈಲಿಗಲ್ಲುಗಳು ಯಾವುವು?

ಉತ್ತರ: ಚಂಪಾರಣ್ ಸತ್ಯಾಗ್ರಹ, ಅಸಹಕಾರ ಚಳವಳಿ, ಉಪ್ಪಿನ ಸತ್ಯಾಗ್ರಹ, ಕ್ವಿಟ್ ಇಂಡಿಯಾ (ಭಾರತ ಬಿಟ್ಟು ತೊಲಗಿ) ಚಳವಳಿ

**ಪ್ರಶ್ನೆ:** ಅಂತರರಾಷ್ಟ್ರೀಯ ಅಹಿಂಸಾ ದಿನ ಎಂದು ಯಾಕೆ ಆರಚರಣೆ ಮಾಡಲಾಗುತ್ತದೆ?

ಉತ್ತರ: ವಿಶ್ವಸಂಸ್ಥೆಯ ಸಾಮಾನ್ಯ ಸಭೆಯು 2007 ರ ಜೂನ್ 15 ರಂದು ಅಂಗೀಕರಿಸಿದ ನಿರ್ಣಯದಂತೆ, ಗಾಂಧೀಜಿಯವರ ಜನ್ಮದಿನವಾದ ಅಕ್ಟೋಬರ್ 2 ರಂದು ಅಂತರರಾಷ್ಟ್ರೀಯ ಅಹಿಂಸಾ ದಿನ ಎಂದು ವಿಶ್ವದಾದ್ಯಂತ ಆಚರಿಸಲಾಗುತ್ತದೆ.

**ಪ್ರಶ್ನೆ:** ಮಹಾತ್ಮ ಬಿರುದು ನೀಡಿದ್ದು ಯಾರು?

ಉತ್ತರ: 1915ರಲ್ಲಿ ಗಾಂಧೀಜಿಯವರ ಆಧ್ಯಾತ್ಮಿಕ ಹಾಗೂ ನೈತಿಕ ಹೋರಾಟವನ್ನು ಮೆಚ್ಚಿ ವಿಶ್ವಕವಿ ರವೀಂದ್ರನಾಥ ಠಾಗೋರ್ ಅವರು ಮೋಹನ್‌ದಾಸ್ ಅವರಿಗೆ ಮಹಾತ್ಮ (ಮಹಾನ್ ಆತ್ಮ) ಎಂಬ ಗೌರವಪೂರ್ವಕ ಬಿರುದನ್ನು ನೀಡಿದರು.

**ಗಾಂಧೀಜಿ ಮೊದಲ ಬಾರಿಗೆ ಬೆಂಗಳೂರಿಗೆ ಬಂದಾಗ ಆನಂದ್ ರಾವ್ ಸರ್ಕಲ್‌ನ ಈ ಮನೆಯಲ್ಲಿದ್ರು! ಆ ಘಟನೆ ಇಂದಿಗೂ ರೋಚಕ!**

## ಗಾಂಧೀಜಿಯವರ 4 ಪ್ರಮುಖ ಜೀವನ ತತ್ವಗಳು:

- ಸತ್ಯ: ಗಾಂಧೀಜಿಯವರ ದೃಷ್ಟಿಯಲ್ಲಿ ಸತ್ಯವೇ ಭಗವಂತ. ವೈಯಕ್ತಿಕ ನಡೆ ನುಡಿ ಹಾಗೂ ಸಾರ್ವಜನಿಕ ಜೀವನದಲ್ಲಿ ಸತ್ಯಕ್ಕೆ ಅತ್ಯುನ್ನತ ಸ್ಥಾನ ನೀಡಿದ್ದರು.
- ಅಹಿಂಸೆ: ದ್ವೇಷ ಹಾಗೂ ಹಿಂಸೆಯಿಂದ ಏನನ್ನೂ ಸಾಧಿಸಲು ಸಾಧ್ಯವಿಲ್ಲ. ಶಸ್ತ್ರಾಸ್ತ್ರಗಳಿಲ್ಲದೆ ಮನ ಪರಿವರ್ತನೆಯ ಮೂಲಕ ಬದಲಾವಣೆ ತರುವುದೇ ಅಹಿಂಸೆ.
- ಸರಳತೆ: ಸ್ವಾವಲಂಬನೆ ಹಾಗೂ ಸರಳ ಜೀವನಕ್ಕೆ ಒತ್ತು ನೀಡಿದ ಅವರು, ಖಾದಿ ನೂಲುವ ಮೂಲಕ ದೇಶೀಯ ಉದ್ಯೋಗ ಮತ್ತು ಸ್ವದೇಶಿ ತತ್ವವನ್ನು ಸಾರಿದರು.
- ಸಮಾಜ ಸೇವೆ: ದಲಿತರು, ಶೋಷಿತರು ಹಾಗೂ ಬಡವರ ಸೇವೆ ಮಾಡುವುದೇ ನಿಜವಾದ ಪೂಜೆ ಎಂದು ನಂಬಿದ್ದರು.



## ಸ್ವಾತಂತ್ರ್ಯ ಸಂಗ್ರಾಮದಲ್ಲಿ ಪ್ರಮುಖ ಮೈಲಿಗಲ್ಲುಗಳು:

- ಚಂಪಾರಣ್ ಸತ್ಯಾಗ್ರಹ (1917) ಬಿಹಾರದ ನೀಲಿ (ಇಂಡಿಗೋ) ಬೆಳೆಗಾರರ ಮೇಲಿನ ಶೋಷಣೆಯ ವಿರುದ್ಧ ಗಾಂಧೀಜಿಯವರು ಭಾರತದಲ್ಲಿ ನಡೆಸಿದ ಮೊದಲ ಪ್ರಮುಖ ಅಹಿಂಸಾತ್ಮಕ ಚಳವಳಿ.
- ಅಸಹಕಾರ ಚಳವಳಿ (1920) ಬ್ರಿಟಿಷ್ ಸಂಸ್ಥೆಗಳು, ಶಾಲೆಗಳು ಹಾಗೂ ಸರಕುಗಳನ್ನು ಬಹಿಷ್ಕರಿಸುವ ಮೂಲಕ ದೇಶಾದ್ಯಂತ ಜನಸಾಮಾನ್ಯರನ್ನು ಸ್ವಾತಂತ್ರ್ಯ ಸಂಗ್ರಾಮಕ್ಕೆ ಧುಮುಕುವಂತೆ ಮಾಡಿದ ಬೃಹತ್ ಚಳವಳಿ.
- ದಂಡಿ ಯಾತ್ರೆ (ಉಪ್ಪಿನ ಸತ್ಯಾಗ್ರಹ) (1930) ಸಬರಮತಿ ಆಶ್ರಮದಿಂದ ದಂಡಿಯವರೆಗೆ 240 ಮೈಲಿ ಕಾಲ್ನಡಿಗೆಯಲ್ಲಿ ಸಾಗಿ ಬ್ರಿಟಿಷರ ಉಪ್ಪಿನ ಕಾಯ್ದೆಯನ್ನು ಮುರಿಯುವ ಮೂಲಕ ಜಾಗತಿಕ ಗಮನ ಸೆಳೆದ ಐತಿಹಾಸಿಕ ಸತ್ಯಾಗ್ರಹ.
- ಕ್ವಿಟ್ ಇಂಡಿಯಾ (ಭಾರತ ಬಿಟ್ಟು ತೊಲಗಿ) ಚಳವಳಿ (1942) ಬ್ರಿಟಿಷರು ತಕ್ಷಣವೇ ಭಾರತವನ್ನು ತೊರೆಯಬೇಕೆಂದು ಆಗ್ರಹಿಸಿ ಗಾಂಧೀಜಿ ನೀಡಿದ ಮಾಡು ಇಲ್ಲವೇ ಮಡಿ ಕರೆಯೊಂದಿಗೆ ಆರಂಭವಾದ ಅಂತಿಮ ಹಂತದ ಹೋರಾಟ.

ದಕ್ಷಿಣ ಆಫ್ರಿಕಾದಿಂದ ಮರಳಿದ ಬಳಿಕ ಮಹಾತ್ಮ ಗಾಂಧೀಜಿಯವರು ಡಿ.ವಿ. ಗುಂಡಪ್ಪನವರ ಆಹ್ವಾನದ ಮೇರೆಗೆ 1915ರಲ್ಲಿ ಮೊದಲ ಬಾರಿಗೆ ಬೆಂಗಳೂರಿಗೆ ಭೇಟಿ ನೀಡಿದರು. ಈ ವೇಳೆ ಅವರು ಗೋಖಲೆ ಅವರ ಭಾವಚಿತ್ರವನ್ನು ಅನಾವರಣಗೊಳಿಸಿ, ಲಾಲ್‌ಬಾಗ್‌ನಲ್ಲಿ ಸನ್ಮಾನ ಸ್ವೀಕರಿಸಿದರು. ಅಂದಿನ ರೋಚಕ ಘಟನೆಗಳು ಇಲ್ಲಿವೆ.

1914ರ ಜನವರಿ 21ರಂದು ದಕ್ಷಿಣ ಆಫ್ರಿಕಾದಲ್ಲಿ ಭಾರತೀಯ ವಲಸಿಗರ ಹಕ್ಕುಗಳಿಗಾಗಿ ನಡೆದ ಸುದೀರ್ಘ ಹೋರಾಟಕ್ಕೆ ಅಂತ್ಯ ಹಾಡಿದ ಗಾಂಧೀಜಿ-ಸ್ಮಟ್ಸ್ ಒಪ್ಪಂದಕ್ಕೆ ಸಹಿ ಹಾಕಲಾಯಿತು. ಇದರೊಂದಿಗೆ ದಕ್ಷಿಣ ಆಫ್ರಿಕಾ ಸರ್ಕಾರದ ವಿರುದ್ಧ ಗಾಂಧೀಜಿ ನಡೆಸಿದ್ದ 20 ವರ್ಷಗಳ ಅಹಿಂಸಾತ್ಮಕ ಹೋರಾಟಕ್ಕೆ ತೃಪ್ತಿಕರ ಅಂತ್ಯ ಸಿಕ್ಕಿತು. ಆರು ತಿಂಗಳ ಬಳಿಕ ಜೂನ್ 26ರಂದು ಇಂಡಿಯನ್ ರಿಲೀಫ್ ಆಕ್ಟ್ ದಕ್ಷಿಣ ಆಫ್ರಿಕಾದ ಕಾನೂನಿನ ಭಾಗವಾಯಿತು. ಇದರಿಂದ ಗಾಂಧೀಜಿ ತಮ್ಮ ಮಾರ್ಗದರ್ಶಕರಾಗಿದ್ದ ಭಾರತೀಯ ರಾಜಕಾರಣಿ ಹಾಗೂ ಸಮಾಜ ಸುಧಾರಕ ಗೋಪಾಲಕೃಷ್ಣ ಗೋಖಲೆ ಅವರ ಸಲಹೆಯನ್ನು ಪಾಲಿಸಿ ಭಾರತಕ್ಕೆ ಮರಳಲು ಸಾಧ್ಯವಾಯಿತು. ಭಾರತಕ್ಕೆ ಬಂದು ಸ್ವರಾಜ್ಯಕ್ಕಾಗಿ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ನಡೆಸುತ್ತಿದ್ದ ಹೋರಾಟದಲ್ಲಿ ಕೈಜೋಡಿಸುವುದು ಅವರ ಉದ್ದೇಶವಾಗಿತ್ತು.

**ಡಿಸೆಂಬರ್‌ನಲ್ಲಿ ಭಾರತಕ್ಕೆ ಹೊರಡುವ ಹಡಗನ್ನು ಹತ್ತಿದ ಗಾಂಧೀಜಿ**

ಜುಲೈ 28ರಂದು ಮೊದಲ ವಿಶ್ವಯುದ್ಧ ಆರಂಭವಾದ ಒಂದು ವಾರದ ಬಳಿಕ, ಆಗಸ್ಟ್ 4ರಂದು ಗಾಂಧೀಜಿ ಲಂಡನ್‌ಗೆ ತಲುಪಿದರು.



ಅಲ್ಲಿಂದ ಭಾರತಕ್ಕೆ ಬರುವ ಮೊದಲು ಗೋಖಲೆ ಅವರನ್ನು ಭೇಟಿಯಾಗಬೇಕಿತ್ತು. ಬ್ರಿಟಿಷರು ಸಂಕಷ್ಟದಲ್ಲಿದ್ದಾಗ ಅವರಿಗೆ ನೆರವು ನೀಡಿದರೆ, ಭಾರತದ ಸ್ವರಾಜ್ಯದ ಬೇಡಿಕೆಗೆ ಅದು ಸಹಾಯವಾಗಬಹುದು ಎಂದು ಗಾಂಧೀಜಿ ಅಂದು ನಂಬಿದ್ದರು. ಈ ಕಾರಣದಿಂದ ಗಾಯಗೊಂಡ ಬ್ರಿಟಿಷ್ ಸೈನಿಕರ ಆರೈಕೆಗಾಗಿ ಅವರು ಇಂಡಿಯನ್ ವಾಲಂಟೀರ್ ಆಂಬ್ಯುಲೆನ್ಸ್ ಕಾರ್ಪ್ಸ್ ಅನ್ನು ಸ್ಥಾಪಿಸಿದರು. ಕೊನೆಗೆ ಡಿಸೆಂಬರ್‌ನಲ್ಲಿ ಭಾರತಕ್ಕೆ ಹೊರಡುವ ಹಡಗನ್ನು ಹತ್ತಿದ ಗಾಂಧೀಜಿ, 1915ರ ಜನವರಿ 9ರಂದು ಬಾಂಬೆಗೆ ತಲುಪಿದರು. ದುರಂತವೆಂದರೆ, 45 ವರ್ಷದ ಗಾಂಧೀಜಿಗಿಂತ ಕೇವಲ ಮೂರು ವರ್ಷ ದೊಡ್ಡವರಾಗಿದ್ದ ಗೋಪಾಲಕೃಷ್ಣ ಗೋಖಲೆ ಅವರು ತೀವ್ರ ದಣಿವಿನಿಂದ ಉಂಟಾದ ಆರೋಗ್ಯ ಸಮಸ್ಯೆಗಳಿಂದ ಫೆಬ್ರವರಿ 19ರಂದು ನಿಧನರಾದರು! ಸ್ನೇಹಿತನನ್ನು ಕಳೆದುಕೊಂಡ ದುಃಖದಲ್ಲಿದ್ದರೂ ಗೋಖಲೆ ಅವರಿಗೆ ನೀಡಿದ್ದ ಮಾತನ್ನು ಉಳಿಸಿಕೊಳ್ಳಲು ಗಾಂಧೀಜಿ ನಿರ್ಧರಿಸಿದರು. ಯಾವುದೇ ರಾಜಕೀಯ ಹೋರಾಟ ಆರಂಭಿಸುವ ಮೊದಲು ದೇಶದ ಜನರು ಎದುರಿಸುತ್ತಿರುವ ಸಮಸ್ಯೆಗಳನ್ನು ಅರ್ಥಮಾಡಿಕೊಳ್ಳಲು ಅವರು ದೇಶಾದ್ಯಂತ ಪ್ರವಾಸ ಆರಂಭಿಸಿದರು.

**ಗಾಂಧೀಜಿ ಪ್ರವಾಸ ಎಲ್ಲೆಲ್ಲಿ?**

ಅಹಮದಾಬಾದ್, ಪೂನಾ, ಕಲ್ಕತ್ತಾ, ರಂಗೂನ್, ಶಾಂತಿನಿಕೇತನ ಮತ್ತು ದೆಹಲಿಗೆ ಭೇಟಿ ನೀಡಿದ ಬಳಿಕ ಏಪ್ರಿಲ್ 17ರಂದು ಗಾಂಧೀಜಿ ಮದ್ರಾಸ್‌ಗೆ ಬಂದರು. ಮದ್ರಾಸ್‌ನ ಗೋಖಲೆ ಕ್ಲಬ್ ನೀಡಿದ ಆಹ್ವಾನದ ಮೇರೆಗೆ ಅವರು ಅಲ್ಲಿಗೆ ತೆರಳಿದ್ದರು. ಪ್ರಭಾವಿ ಪತ್ರಕರ್ತ ಮತ್ತು ಪ್ರಕಾಶಕರಾಗಿದ್ದ ಜಿಎ ನಟೇಸನ್ ಈ ಕ್ಲಬ್‌ನ ಪ್ರಮುಖ ಸದಸ್ಯರಾಗಿದ್ದರು. 1909ರಲ್ಲಿ ನಟೇಸನ್ ಇಂಡಿಯನ್ ಸೌತ್ ಆಫ್ರಿಕಾ ಲೀಗ್ ಅನ್ನು ಸ್ಥಾಪಿಸಿದ್ದರು. ದಕ್ಷಿಣ ಆಫ್ರಿಕಾದಲ್ಲಿ ವಾಸಿಸುತ್ತಿದ್ದ ಭಾರತೀಯರ ಹೋರಾಟಕ್ಕೆ ಹಣ ಮತ್ತು ಬೆಂಬಲ ಒದಗಿಸುವ ಉದ್ದೇಶ ಈ ಸಂಘಟನೆಯದ್ದಾಗಿತ್ತು. ಈ ವೇಳೆಗೆ ನಟೇಸನ್ ಗಾಂಧೀಜಿಯ ಆಪ್ತರಾಗಿದ್ದರು.

**ಗಾಂಧೀಜಿಯನ್ನು ಬೆಂಗಳೂರಿಗೆ ಆಹ್ವಾನಿಸಿದ್ದು ಯಾರು?**

ದಕ್ಷಿಣ ಆಫ್ರಿಕಾದ ಹೋರಾಟಕ್ಕೆ ನಟೇಸನ್ ಅವರ ಮೂಲಕ ಉದಾರವಾಗಿ ಹಣ ನೀಡಿದ ಭಾರತೀಯ ರಾಜಮನೆತನದವರಲ್ಲಿ ಮೈಸೂರಿನ ನಾಲ್ವಡಿ ಕೃಷ್ಣರಾಜ ಒಡೆಯರೂ ಒಬ್ಬರಾಗಿದ್ದರು. ಹೀಗಾಗಿ ಮೈಸೂರಿನ ಲೇಖಕ, ಕವಿ, ತತ್ವಜ್ಞಾನಿ ಹಾಗೂ ಗೋಖಲೆ ಅವರ ಕಟ್ಟಾ ಅನುಯಾಯಿಯಾಗಿದ್ದ ಡಿವಿ ಗುಂಡಪ್ಪ (ಡಿವಿಜಿ) ಅವರು ಗಾಂಧೀಜಿಯನ್ನು ಬೆಂಗಳೂರಿಗೆ ಆಹ್ವಾನಿಸಿದಾಗ, ಗಾಂಧೀಜಿ ಅದನ್ನು ನಿರಾಕರಿಸಲು ಸಾಧ್ಯವಾಗಲಿಲ್ಲ. ಗೋಖಲೆ ಅವರ ಭಾವಚಿತ್ರವನ್ನು ಅನಾವರಣಗೊಳಿಸುವುದು ಮತ್ತು ಮೈಸೂರು ಸೋಶಿಯಲ್ ಸರ್ವಿಸ್ ಲೀಗ್ ಅನ್ನು ಆರಂಭಿಸುವುದು ಈ ಭೇಟಿಯ ಉದ್ದೇಶವಾಗಿತ್ತು.

ಮೇ 8ರ ಬೆಳಗ್ಗೆ ಗಾಂಧೀಜಿ ಮತ್ತು ಕಸ್ತೂರಬಾ ಬೆಂಗಳೂರಿನ ರೈಲು ನಿಲ್ದಾಣಕ್ಕೆ ಬಂದಿಳಿದರು. ಅವರು ಮೊದಲ ದರ್ಜೆಯ ಬೋಗಿಯಲ್ಲಿ ಪ್ರಯಾಣಿಸಿದ್ದರು. ಅವರೊಂದಿಗೆ ಬಂದಿದ್ದ ನಟೇಸನ್ ಅವರಿಗೆ ಆರೋಗ್ಯ ಸರಿಯಿಲ್ಲದ ಕಾರಣ, ಅವರು ಮೊದಲ ದರ್ಜೆಯಲ್ಲೇ ಪ್ರಯಾಣಿಸಿದ್ದರು. ಸರಳವಾಗಿ ಬಟ್ಟೆ ಧರಿಸಿದ್ದ ಈ ದಂಪತಿಯನ್ನು ರೈಲು ನಿಲ್ದಾಣದಲ್ಲಿದ್ದ ಸ್ವಾಗತ ಸಮಿತಿಯವರು ಮೊದಲಿಗೆ ಗುರುತಿಸಲಿಲ್ಲ. ಗುರುತಿಸಿದ ಬಳಿಕ ಅಲ್ಲಿದ್ದವರಲ್ಲಿ ಸಂಭ್ರಮದ ವಾತಾವರಣ ನಿರ್ಮಾಣವಾಯಿತು.

**ಆನಂದರಾವ್ ಸರ್ಕಲ್‌ನಲ್ಲಿ ವಾಸ್ತವ್ಯ ಮಾಡಿದ್ದ ಗಾಂಧೀಜಿ!**

ಗೌರವಾನ್ವಿತ ಅತಿಥಿಗಳನ್ನು ಕರೆದುಕೊಂಡು ಹೋಗಲು ಬೆಂಗಳೂರು ಮುನ್ಸಿ ಪಾಲಿಟಿಯ ಅಧ್ಯಕ್ಷ ಕೆಪಿ ಪುಟ್ಟಣ್ಣ ಚೆಟ್ಟಿ ಅವರ ಅಲಂಕೃತ ಕುದುರೆ ಗಾಡಿಯನ್ನು ಸಿದ್ಧಪಡಿಸಲಾಗಿತ್ತು. ಉತ್ಸಾಹಗೊಂಡಿದ್ದ ಯುವಕರು ಕುದುರೆಗಳನ್ನು ಗಾಡಿಯಿಂದ ಬಿಚ್ಚಿ ತಾವೇ ಗಾಡಿಗೆ ನೊಗ ಹಾಕಿಕೊಂಡು ಎಳೆಯಲು ಮುಂದಾದರು. ಆದರೆ ಗಾಂಧೀಜಿ ಇದಕ್ಕೆ ಒಪ್ಪಲಿಲ್ಲ. ತಮ್ಮ ವಸತಿ ಎಷ್ಟು ದೂರವಿದೆ ಎಂದು ಅವರು ಕೇಳಿದರು. ಬೆಂಗಳೂರಿನ ಖ್ಯಾತ ನ್ಯಾಯಾಧೀಶರೊಬ್ಬರ ಆನಂದರಾವ್ ಸರ್ಕಲ್‌ನಲ್ಲಿದ್ದ ಮನೆಯಲ್ಲಿ ಅವರ ವಾಸ್ತವ್ಯ ವ್ಯವಸ್ಥೆ ಮಾಡಲಾಗಿತ್ತು. ಅರ್ಧ ಮೈಲಿ ಎಂದು ಉತ್ತರ ಬಂತು.

ಹಾಗಾದರೆ ನಾವೆಲ್ಲರೂ ನಡೆದುಕೊಂಡೇ ಹೋಗೋಣ ಎಂದು ಗಾಂಧೀಜಿ ನಗುತ್ತಾ ಹೇಳಿದರು.

ಅದೇ ಬೆಳಗ್ಗೆ ಕಾಲೇಜಿಯೇಟ್ ಹೈಸ್ಕೂಲ್‌ನಲ್ಲಿ ಗಾಂಧೀಜಿ ಗೋಖಲೆ ಅವರ ಭಾವಚಿತ್ರವನ್ನು ಅನಾವರಣಗೊಳಿಸಿದರು. ಇದೇ ಶಾಲೆ ಇಂದು ನೃಪತುಂಗ ರಸ್ತೆಯಲ್ಲಿರುವ ಸರ್ಕಾರಿ ಆರ್ಟ್ಸ್ ಕಾಲೇಜಾಗಿದೆ. ಗಾಂಧೀಜಿ ಅನಾವರಣಗೊಳಿಸಿದ ಆ ಭಾವಚಿತ್ರ ಈಗ ಡಿವಿಜಿ ಅವರು 1945ರಲ್ಲಿ ಸ್ಥಾಪಿಸಿದ ಗೋಖಲೆ ಇನ್‌ಸ್ಟಿಟ್ಯೂಟ್ ಆಫ್ ಪಬ್ಲಿಕ್ ಅಫೇರ್ಸ್‌ನಲ್ಲಿ ಇದೆ. ಅದೇ ಸಂಜೆ ಬೆಂಗಳೂರಿನ ಮುನ್ಸಿ ಪಾಲಿಟಿ ವತಿಯಿಂದ ಗಾಂಧೀಜಿ ಅವರನ್ನು ಗೌರವಿಸಲು ಲಾಲ್‌ಬಾಗ್ ಗ್ಲಾಸ್ ಹೌಸ್‌ನಲ್ಲಿ ಭವ್ಯ ಕಾರ್ಯಕ್ರಮ ಆಯೋಜಿಸಲಾಗಿತ್ತು. ಬಿಡುವಿಲ್ಲದ ಆ ದಿನ ಕೊನೆಗೊಂಡಿದ್ದು ಮೈಸೂರು ದಿವಾನರಾಗಿದ್ದ ಸರ್ ಎಂ. ವಿಶ್ವೇಶ್ವರಯ್ಯ ಅವರನ್ನು ಭೇಟಿಯಾಗುವುದರೊಂದಿಗೆ. ನಂತರ ಕಸ್ತೂರಬಾ ಮತ್ತು ಗಾಂಧೀಜಿ ಮದ್ರಾಸ್‌ಗೆ ವಾಪಸ್ ತೆರಳಿದರು. ಆತಿಥೇಯರು ಎಷ್ಟೇ ಮನವಿ ಮಾಡಿದರೂ ಅದನ್ನು ಲೆಕ್ಕಿಸದೆ, ಅವರು ಮೂರನೇ ದರ್ಜೆಯ ರೈಲು ಬೋಗಿಯಲ್ಲೇ ಪ್ರಯಾಣಿಸಿದರು.

# ವೀರಶೈವ ಪರಂಪರೆ ಅರಿಯಲು ಸಮಗ್ರ ಅಧ್ಯಯನ ಅಗತ್ಯ

## ಯುವಜನರಲ್ಲಿ ಅರಿವು ಮೂಡಿಸಿ | ಉಜ್ಜಯಿನಿ ಜಗದ್ಗುರು ಕರೆ

• ಪ್ರಜೋದಯ ವರದಿ

**ಬೇಲೂರು:** ವೀರಶೈವ ಲಿಂಗಾಯಿತ ಪರಂಪರೆ ಅತ್ಯಂತ ಪ್ರಾಚೀನವಾಗಿದ್ದು, ಅದರ ಇತಿಹಾಸ, ಸಾಂಸ್ಕೃತಿಕ ಪರಂಪರೆಯನ್ನು ಸಮಗ್ರವಾಗಿ ಅಧ್ಯಯನ ಮಾಡುವ ಮೂಲಕ ಧರ್ಮದ ವೈಶಿಷ್ಟ್ಯ ಮತ್ತು ಶ್ರೀ ಮಂತಿಕೆಯನ್ನು ಅರಿತುಕೊಳ್ಳಬೇಕು ಎಂದು ಉಜ್ಜಯಿನಿ ಜಗದ್ಗುರು ಸಿದ್ಧಲಿಂಗ ರಾಜದೇಶಿಕೇಂದ್ರ ಶಿವಾಚಾರ್ಯ ಭಗವತ್ಪಾದರು ಹೇಳಿದರು.

ಪಟ್ಟಣದ ಶಿವಕುಮಾರ ಸ್ವಾಮೀಜಿ ಸಮುದಾಯ ಭವನದಲ್ಲಿ ನಡೆದ ಅಡ್ಡಪಲ್ಲಕ್ಕಿ ಉತ್ಸವ, ಇಷ್ಟಲಿಂಗ ಮಹಾಪೂಜೆ, ಧರ್ಮಜಾಗೃತಿ ಸಮಾವೇಶ, ಶಿವದೀಕ್ಷಾ ಕಾರ್ಯಕ್ರಮ ಹಾಗು ವಧುವರರ ಸಮ್ಮೇಳನದಲ್ಲಿ ಆಶೀರ್ವಚನ ನೀಡಿದ ಅವರು, ವೀರಶೈವ ಲಿಂಗಾಯಿತ ಪರಂಪರೆಯ ಇತಿಹಾಸವನ್ನು ಕೇವಲ ಪುರಾಣಗಳ ದೃಷ್ಟಿಯಿಂದ ನೋಡದೆ, ಐತಿಹಾಸಿಕ ದಾಖಲೆಗಳು, ಪುರಾತತ್ವದ ಆಧಾರಗಳು ಹಾಗು ಸಾಂಸ್ಕೃತಿಕ ಪರಂಪರೆಯ ಹಿನ್ನಲೆಯಲ್ಲಿ ಅಧ್ಯಯನ ಮಾಡಬೇಕಿದೆ ಎಂದರು.

ಹರಪ್ಪ ಮೊಹೆಂಜೊದಾರೋ ನಾಗರಿಕತೆಯ ಕುರಿತ ಪುರಾತತ್ವ ಅಧ್ಯಯನಗಳಲ್ಲಿ ದೊರೆತಿರುವ ಕೆಲವು ವಸ್ತುಗಳು ಹಾಗು ಧಾರ್ಮಿಕ ಸಂಕೇತಗಳ ಕುರಿತು ವೀರಶೈವ ಪರಂಪರೆಯೊಂದಿಗೆ ಸಂಬಂಧಿಸಿ ಹಲವು ವಿಚಾರಗಳು ಚರ್ಚೆಯಾಗಿವೆ. ಈ ಹಿನ್ನಲೆ ವೀರಶೈವ ಪರಂಪರೆಯ ಪ್ರಾಚೀನತೆಯ ಕುರಿತು ಇನ್ನಷ್ಟು ಅಧ್ಯಯನ ಮತ್ತು ಸಂಶೋಧನೆ ನಡೆಯಬೇಕಿದೆ ಎಂದು ಹೇಳಿದರು.

ವೀರಶೈವ ಪರಂಪರೆಯಲ್ಲಿ ಇಷ್ಟ ಲಿಂಗಕ್ಕೆ ವಿಶೇಷ ಸ್ಥಾನವಿದೆ. ದೇವರನ್ನು ಹೊರಗೆ ಹುಡುಕುವುದಕ್ಕಿಂತ ತನ್ನೊಳಗಿನ ಚೈತನ್ಯವನ್ನು ಅರಿತುಕೊಳ್ಳುವ ಮಾರ್ಗವನ್ನು ಇಷ್ಟಲಿಂಗ ಪೂಜೆಯ ಮೂಲಕ ತೋರಿಸಲಾಗಿದೆ. ಜೀವ ಮತ್ತು ಶಿವನ ಐಕ್ಯತೆಯ ಸಂದೇಶವನ್ನು ಪರಂಪರೆ ಸಾರುತ್ತದೆ. ಮಹಿಳೆಯರಿಗೂ ಪುರುಷರಿಗೆ ಸಮಾನವಾದ ಧಾರ್ಮಿಕ ಹಾಗು ಸಾಮಾಜಿಕ ಸ್ಥಾನಮಾನವನ್ನು ಪ್ರತಿಪಾದಿಸಿರುವ ಈ ಪರಂಪರೆಯಲ್ಲಿ ಶಿವಶಕ್ತಿ ಅವಿಭಾಜ್ಯ ಎಂಬ ತತ್ವದ ಮೂಲಕ ಸಮಾನತೆಯ ಸಂದೇಶ ನೀಡಲಾಗಿದೆ ಎಂದು ವಿವರಿಸಿದರು.

ಗುರು ನೀಡುವ ಇಷ್ಟಲಿಂಗವು ವೀರಶೈವ ಲಿಂಗಾಯಿತರ ಆಧ್ಯಾತ್ಮಿಕ ಬದುಕಿನ ಪ್ರಮುಖ ಸಂಕೇತವಾಗಿದೆ. ಲಿಂಗಪೂಜೆ ಕೇವಲ ಆಚರಣೆಗೆ ಸೀಮಿತವಾಗದೆ, ಆಧ್ಯಾತ್ಮಿಕ ಶಿಸ್ತು, ಆತ್ಮಚಿಂತನೆ ಹಾಗು ಸತ್ಕಾರ್ಯಗಳಿಗೆ ಪ್ರೇರಣೆಯಾಗಬೇಕು. ಪ್ರತಿಯೊಬ್ಬರೂ ದಿನವನ್ನು ಲಿಂಗಪೂಜೆಯಿಂದ ಆರಂಭಿಸಿ, ಕಾಯಕ ಹಾಗು ದೈನಂದಿನ ಬದುಕಿನಲ್ಲಿಯೂ ಧಾರ್ಮಿಕ ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕು ಎಂದು ಅವರು ಕರೆ ನೀಡಿದರು.

**ವೀರಶೈವ ಧರ್ಮದ ಮೂಲ ಮೌಲ್ಯ ಉಳಿಯಲಿ:**

ತೆಂಕಲಗೋಡು ಬೃಹನ್ಮಠದ ಶ್ರೀ ಚನ್ನಸಿದ್ದೇಶ್ವರ ಶಿವಾಚಾರ್ಯ ಸ್ವಾಮೀಜಿ ಅವರು ಮಾತನಾಡಿ, ಎಲ್ಲಿಯ ತನಕ ಸೂರ್ಯಚಂದ್ರರು ಮತ್ತು ಭೂಮಿ ಇರುತ್ತವೆಯೋ ಅಲ್ಲಿಯ ತನಕ ವೀರಶೈವ ಧರ್ಮ ಹಾಗು ಪಂಚಪೀಠ ಪರಂಪರೆಗಳು ಅಚಲವಾಗಿ ಮುಂದುವರಿಯಲಿವೆ ಎಂದರು.

ಸಮುದಾಯದ ಮುಖಂಡ ಗ್ರಾನೈಟ್ ರಾಜಶೇಖರ್, ಮಾಜಿ ಶಾಸಕ ಕೆ.ಎಸ್. ಲಿಂಗೇಶ್, ಬಿಜೆಪಿ ಜಿಲ್ಲಾಧ್ಯಕ್ಷ ಸಿದ್ದೇಶ್ ನಾಗೇಂದ್ರ, ವೀಣಾ ಕಾಶಪ್ಪನವರ್, ಬಿಜೆಪಿ ಮುಖಂಡ ಕೊರಟಿಕೆರೆ ಪ್ರಕಾಶ್, ಉದ್ಯಮಿ ಮಸಾಲೆ ಮಂಜುನಾಥ್, ಪುರಸಭೆ ಮಾಜಿ ಉಪಾಧ್ಯಕ್ಷ ಅರುಣ್ ಕುಮಾರ್ ಸ್ವಾಮಿ ಉಪಸ್ಥಿತರಿದ್ದರು.



### ಬರಪೀಡಿತ ತಾಲ್ಲೂಕು ಹಸನಾಗಲಿ

ಜಗದ್ಗುರು ಸಿದ್ಧಲಿಂಗ ರಾಜದೇಶಿಕೇಂದ್ರ ಶಿವಾಚಾರ್ಯ ಭಗವತ್ಪಾದರು ಬೇಲೂರು ತಾಲ್ಲೂಕಿಗೆ ಆಗಮಿಸಿರುವ ಸಂದರ್ಭದಲ್ಲಿ ಮಳೆ ಸುರಿದಿರುವುದು ಸಂತಸದ ಸಂಗತಿ. ಜಗದ್ಗುರುಗಳ ಆಶೀರ್ವಾದದಿಂದ ಬರಪೀಡಿತ ತಾಲ್ಲೂಕು ಹಸನಾಗಿ, ರೈತರು, ಬಡವರು ಸೇರಿ ಎಲ್ಲಾ ವರ್ಗದ ಜನರು ಸಂತೋಷದಿಂದ ಬದುಕುವಂತಾಗಲಿ ಎಂದು ಆಶಿಸಿದರು.

– ಹೆಚ್.ಕೆ.ಸುರೇಶ್, ಶಾಸಕರು

- ಎಲ್ಲಿಯ ತನಕ ಸೂರ್ಯಚಂದ್ರರು ಮತ್ತು ಭೂಮಿ ಇರುತ್ತವೆಯೋ ಅಲ್ಲಿಯ ತನಕ ವೀರಶೈವ ಧರ್ಮ ಹಾಗು ಪಂಚಪೀಠ ಪರಂಪರೆಗಳು ಅಚಲವಾಗಿ ಮುಂದುವರಿಯಲಿವೆ.

– ಶ್ರೀ ಚನ್ನಸಿದ್ದೇಶ್ವರ ಶಿವಾಚಾರ್ಯ ಸ್ವಾಮೀಜಿ

# ಹಿರಿಯ ನಾಗರಿಕರು ಅನುಭವದ ಕಣಜಗಳು

## ಹಿರಿಯ ಸಿವಿಲ್ ನ್ಯಾಯಾಧೀಶೆ ಜಿ.ಕೆ.ದಾಕ್ಷಾಯಿಣಿ

• ಪ್ರಜೋದಯ ವರದಿ

**ಹಾಸನ:** ಹಿರಿಯ ನಾಗರಿಕರು ನಮ್ಮ ಸಮಾಜದ ಅನುಭವದ ಕಣಜಗಳು ಮತ್ತು ಮಾರ್ಗದರ್ಶಕರು, ಅವರ ಪರಿಶ್ರಮ, ತ್ಯಾಗ ಮತ್ತು ಜ್ಞಾನದ ಮೇಲೆ ಇಂದಿನ ಸಮಾಜ ನಿರ್ಮಾಣವಾಗಿದ್ದು, ಹಿರಿಯರನ್ನು ಗೌರವಿಸಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಜಿ.ಕೆ.ದಾಕ್ಷಾಯಿಣಿ ಅವರು ತಿಳಿಸಿದ್ದಾರೆ.

ನಗರದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಗುರುವಾರ ಆಯೋಜಿಸಿದ್ದ ವಿಶ್ವ ಹಿರಿಯ ನಾಗರಿಕರ ದಿನಾಚರಣೆಯ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಹಿರಿಯ ನಾಗರಿಕರಿಗೆ ಇರುವಂತಹ ಹಕ್ಕುಗಳನ್ನು ಹಾಗೂ ಅವರಿಗೆ ಯಾವ ರೀತಿ ಪಾಲನೆ, ಪೋಷಣೆ, ಗೌರವ ನೀಡಬೇಕು ಎಂಬುವುದನ್ನು ಯುವ ಜನಾಂಗಕ್ಕೆ ಎಚ್ಚರಿಕೆ ನೀಡಲು ಈ ವಿಶ್ವ ಹಿರಿಯ ನಾಗರಿಕ ದಿನವನ್ನು ಆಚರಿಸಲಾಗುತ್ತಿದೆ ಎಂದು ತಿಳಿಸಿದರು.

ಮನುಷ್ಯ ಹುಟ್ಟುತ್ತಲೇ ಬಾಲ್ಯದಿಂದ ಒಂದೊಂದು ಹಂತದ ವಯಸ್ಸನ್ನು ದಾಟುತ್ತ ಜವಾಬ್ದಾರಿಗಳನ್ನು ಹೆಚ್ಚಿಸಿಕೊಂಡು ತನ್ನ ತಂದೆ ತಾಯಿಯನ್ನೇ ಕಡೆಗಣಿಸುತ್ತಾ ತನ್ನದೇ ಆದ ಪ್ರತ್ಯೇಕ ಕುಟುಂಬವನ್ನು ರಚನೆ ಮಾಡಿಕೊಳ್ಳುತ್ತಾನೆ ಎಂದು ಹೇಳಿದರು.

ಹಿರಿಯ ನಾಗರಿಕರಿಗೆ ಒಂಟಿತನ ಕಾಡದಂತೆ ಪ್ರೀತಿ, ಕಾಳಜಿಯಿಂದ ನೋಡಿಕೊಳ್ಳಬೇಕು, ವಯಸ್ಸು ಹೆಚ್ಚಾದಂತೆ ಆಶ್ರಯದ ಅವಶ್ಯಕತೆ ಹೆಚ್ಚಾಗಿರುತ್ತದೆ. ಸರ್ಕಾರ ತಂದೆ -ತಾಯಿಯರ ಹಾಗೂ ಹಿರಿಯ ನಾಗರಿಕರ ಪಾಲನೆ ಪೋಷಣೆ ಶ್ರೇಯೋಭಿವೃದ್ಧಿಗೆ 2007ರಲ್ಲಿ ಅಧಿನಿಯಮ ಜಾರಿಗೆ ತರುವುದರ ಮೂಲಕ ಹಿರಿಯ ನಾಗರಿಕರಿಗೆ ಗೌರವ ನೀಡುವಂತೆ ತಿಳಿಸಿದೆ ಎಂದರು.

ತಹಸಿಲ್ದಾರ್ ಗೀತಾ ಅವರು ಮಾತನಾಡಿ, ಹಿರಿಯ ನಾಗರಿಕರಿಗೆ ಕಾನೂನುಗಳಲ್ಲಿ ನೀಡಿರುವ ಹಕ್ಕುಗಳು ಮತ್ತು ಸೌಲಭ್ಯಗಳ ಬಗ್ಗೆ ಹೆಚ್ಚಿನ ಅರಿವು ಮೂಡಿಸುವುದರ ಜೊತೆಗೆ, ಕುಟುಂಬ ಮತ್ತು ಸಮಾಜವು ಅವರಿಗೆ ಪ್ರೀತಿ, ಗೌರವ ಮತ್ತು ಸುರಕ್ಷತೆ ನೀಡಬೇಕು ಎಂದು ತಿಳಿಸಿದರು.

ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕ ಸಬಲೀಕರಣ ಅಧಿಕಾರಿ ಬಿ.ಸಿ.ಗಂಗಮ್ಮ, ನಿವೃತ್ತ ನೌಕರರ ಸಂಘದ ಅನಂತರಾಮ್, ಅರಸೀಕೆರೆ ತಾಲ್ಲೂಕಿನ ನಿವೃತ್ತ ನೌಕರರ ಸಂಘದ ಅಧ್ಯಕ್ಷ ಎಂ.ಎಂ.ಯೋಗೀಶ್ ಮತ್ತಿತರರು ಉಪಸ್ಥಿತರಿದ್ದರು.



# ನಿಷ್ಠೆಯಿಂದ ಕಾರ್ಯ ನಿರ್ವಹಿಸಿದರೆ ಆತ್ಮತೃಪ್ತಿ ಸಾಧ್ಯ

• ಪ್ರಜೋದಯ ವರದಿ

**ಆಲೂರು:** ಸರ್ಕಾರಿ ನೌಕರರು ನಿಷ್ಠೆಯಿಂದ ಕಾರ್ಯ ನಿರ್ವಹಿಸಿದರೆ ಆತ್ಮತೃಪ್ತಿ ಕಾಣಲು ಸಾಧ್ಯ ಎಂದು ಆಲೂರು ತಾಲ್ಲೂಕು ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ಅಧ್ಯಕ್ಷ ಡಿ.ಎಂ.ವರದರಾಜು ಅವರು ತಿಳಿಸಿದರು.

ಪಟ್ಟಣದ ನೌಕರರ ಭವನದಲ್ಲಿ ರಾಜ್ಯ ಸರ್ಕಾರಿ ನೌಕರರ ಸಂಘ ತಾಲ್ಲೂಕು ಘಟಕ ವತಿಯಿಂದ ಏರ್ಪಡಿಸಲಾಗಿದ್ದ 2026 ಸೆಪ್ಟಂಬರ್ ಮಾಹೆಯಲ್ಲಿ ಸೇವಾ ನಿವೃತ್ತಿ ಹೊಂದಿದ, ಶಿಕ್ಷಣ ಇಲಾಖೆಯ ನೌಕರರಾದ ನಿಡನೂರು ಶಾಲೆಯ ಶಿಕ್ಷಕಿ ರತ್ನಮ್ಮ ಹಾಗೂ ಕೊಡಿಗಿಹಳ್ಳಿ ಶಾಲೆಯ ಶಿಕ್ಷಕ ತಿಮ್ಮಪ್ಪ ಅವರಿಗೆ ಜೀವಮಾನ ಸಾಧನಾ ಶಿಕ್ಷಣ ರತ್ನ ಪ್ರಶಸ್ತಿ ಪ್ರದಾನ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಎಲ್ಲಾ ವೃತ್ತಿಗಳಿಗಿಂತಲೂ ಶಿಕ್ಷಕ ವೃತ್ತಿ ಶ್ರೇಷ್ಠವಾದುದು. ಶಿಕ್ಷಕರಿಂದ ಕಲಿತ ಸಾವಿರಾರು ಮಕ್ಕಳು ಸಮಾಜದ ವಿವಿಧ ಸ್ತರಗಳಲ್ಲಿ ಕಾಯಕ ನಿರತರಾಗಿ ಸಮಾಜದ ಅಭ್ಯುದಯಕ್ಕಾಗಿ ಶ್ರಮಿಸಲು ರಹದಾರಿಯಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ತಾಲ್ಲೂಕು ಒಕ್ಕಲಿಗರ ಸಂಘದ ಖಜಾಂಚಿ ಶಾಂತಕೃಷ್ಣ ಮಾತನಾಡಿ, ಸರ್ಕಾರಿ ನೌಕರರ ಸಂಘದ ವತಿಯಿಂದ ಸುದೀರ್ಘ ಕಾಲ ಸೇವೆ ಸಲ್ಲಿಸಿ ಸೇವಾ ನಿವೃತ್ತಿ ಹೊಂದಿದ ಸಾಧಕರಿಗೆ ಜೀವಮಾನ ಸಾಧನಾ ಪ್ರಶಸ್ತಿ ನೀಡಿ ಗೌರವಿಸುವುದು ಆದರ್ಶಪ್ರಾಯವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ತಾಲ್ಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಎಂ.ಆರ್.ಶ್ರೀನಿವಾಸ್, ಕೇಂದ್ರ ಕನ್ನಡ ಸಾಹಿತ್ಯ ವೇದಿಕೆಯ ರಾಜ್ಯಾಧ್ಯಕ್ಷ ಕೊಟ್ರೇಶ್ ಎಸ್. ಉಪ್ಪಾರ್, ತಾಲ್ಲೂಕು ಸರ್ಕಾರಿ ನೌಕರರ ಸಂಘದ ಗೌರವಾಧ್ಯಕ್ಷ ಬಿ.ಆರ್.ಧರ್ಮ, ಶಾಲಾ ಶಿಕ್ಷಣ ಸಂಘದ ತಾಲ್ಲೂಕು ಅಧ್ಯಕ್ಷ ಭೂಪಾಲಯ್ಯ, ಜಿಲ್ಲಾ ಶಿಕ್ಷಕರ ಸಂಘದ ಲೆಕ್ಕಪರಿಶೋಧಕ ಸಿ.ಎಸ್. ಅಣ್ಣಪ್ಪ, ತಾಲ್ಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಉಪಾಧ್ಯಕ್ಷ ಎಂ.ಆರ್.ವೇಣುಗೋಪಾಲ, ರವಿತ ವಿ., ಸಹ ಕಾರ್ಯದರ್ಶಿ ಜಯಣ್ಣ ಹಂತನಮನೆ, ಶಿಕ್ಷಕರಾದ ರವಿ, ಚಂದ್ರಕುಮಾರ್, ಶಿವು, ಎಸ್.ಎಂ. ನಾಗರಾಜ್, ಸಹನಾ, ಹರೀಶ್, ಪವನ್‌ಕುಮಾರ್, ಪ್ರಕಾಶ್ ಇನ್ನಿತರರು ಉಪಸ್ಥಿತರಿದ್ದರು.



# ಪರೀಕ್ಷಾ ಕೇಂದ್ರಗಳ ಸುತ್ತ ನಿಷೇದಾಜ್ಞೆ



**ಹಾಸನ:** ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂ ದಾಖಲೆಗಳ ಇಲಾಖೆಯಲ್ಲಿನ ಉಳಿದ ಮೂಲ ವೃಂದದ ಭೂಮಾಪಕರ ಹುದ್ದೆಗಳ ನೇರ ನೇಮಕಾತಿ ಹಾಗೂ ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಉಳಿಕೆ ಮೂಲ ವೃಂದದ ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳ ನೇರ ನೇಮಕಾತಿ ಸಂಬಂಧ ಅ.2 ರಂದು ಹಾಸನ ಜಿಲ್ಲಾ ವ್ಯಾಪ್ತಿಯಲ್ಲಿನ 8 ಪರೀಕ್ಷಾ ಕೇಂದ್ರಗಳಲ್ಲಿ ಹಾಗೂ ಅ.4 ರಂದು ಹಾಸನ ಜಿಲ್ಲಾ ವ್ಯಾಪ್ತಿಯ 46 ಪರೀಕ್ಷಾ ಕೇಂದ್ರಗಳಲ್ಲಿ ಲಿಖಿತ ಪರೀಕ್ಷೆಗಳು ನಡೆಯುತ್ತಿದೆ.

ಹಾಗಾಗಿ ಪರೀಕ್ಷಾ ಕೇಂದ್ರಗಳ ಸುತ್ತ 200 ಮೀಟರ್ ವ್ಯಾಪ್ತಿಯಲ್ಲಿನ ಜೆರಾಕ್ಸ್, ಸೈಬರ್ ಕೇಂದ್ರ, ಕಂಪ್ಯೂಟರ್ ಅಂಗಡಿಗಳನ್ನು ಮುಚ್ಚುವಂತೆ ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅವರು ಆದೇಶಿಸಿದ್ದಾರೆ.

## ಅಂಗನವಾಡಿ ಕಾರ್ಯಕರ್ತರು, ಅಧಿಕಾರಿ ವರ್ಗದ ಸೇವೆ ಶ್ಲಾಘನೀಯ: ಶಾಸಕ ಎಚ್.ಕೆ. ಸುರೇಶ್

# ಮಕ್ಕಳ ಆರೋಗ್ಯಕರ ಬೆಳವಣಿಗೆಗೆ ಪೌಷ್ಟಿಕ ಆಹಾರ ಅಗತ್ಯ

• ಪ್ರಜೋದಯ ವರದಿ

**ಬೇಲೂರು:** ಇಂದಿನ ಮಕ್ಕಳು ಮುಂದಿನ ಪ್ರಜೆಗಳಾಗಿದ್ದು, ಅವರ ಆರೋಗ್ಯಕರ ಬೆಳವಣಿಗೆಗೆ ಪೌಷ್ಟಿಕ ಆಹಾರ, ಸ್ವಚ್ಛತೆ ಹಾಗೂ ಉತ್ತಮ ವಾತಾವರಣ ಕಲ್ಪಿಸುವುದು ಅತ್ಯಂತ ಅಗತ್ಯವಾಗಿದೆ. ಈ ನಿಟ್ಟಿನಲ್ಲಿ ತಾಲ್ಲೂಕಿನಲ್ಲಿ ಅಂಗನವಾಡಿ ಕಾರ್ಯ ಕರ್ತರು, ಸಹಾಯಕಿಯರು ಹಾಗೂ ಅಧಿಕಾರಿ ವರ್ಗ ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿರುವುದು ಶ್ಲಾಘನೀಯ ಎಂದು ಶಾಸಕ ಎಚ್.ಕೆ.ಸುರೇಶ್ ಹೇಳಿದರು.

ಪಟ್ಟಣದ ಅಂಬೇಡ್ಕರ್ ಭವನದಲ್ಲಿ ನಡೆದ ರಾಷ್ಟ್ರೀಯ ಪೋಷಣ್ ಮಾಸಾಚರಣೆ ಹಾಗೂ ವಿಶ್ವ ಪೌಷ್ಟಿಕ ಆಹಾರ ಸಪ್ತಾಹ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಅಂಗನವಾಡಿ ಕೇಂದ್ರಗಳ ಮೂಲಕ ಮಕ್ಕಳು, ಗರ್ಭಿಣಿಯರು ಹಾಗೂ ಬಾಣಂತಿಯರಿಗೆ ಪೌಷ್ಟಿಕ ಆಹಾರ ಸೇರಿದಂತೆ ಸರ್ಕಾರದ ವಿವಿಧ ಸೌಲಭ್ಯಗಳನ್ನು ತಲುಪಿಸುವಲ್ಲಿ ಕಾರ್ಯಕರ್ತರು ಪ್ರಮುಖ ಪಾತ್ರ ವಹಿಸುತ್ತಿದ್ದಾರೆ ಎಂದು ಶ್ಲಾಘಿಸಿದರು.

ಮಕ್ಕಳ ದೈಹಿಕ ಹಾಗೂ ಮಾನಸಿಕ ಬೆಳವಣಿಗೆಗೆ ಪೌಷ್ಟಿಕ ಆಹಾರ ಅತ್ಯಂತ ಮುಖ್ಯವಾಗಿದೆ. ಅಂಗನವಾಡಿ ಕೇಂದ್ರಗಳ ಮೂಲಕ ಮಕ್ಕಳಿಗೆ ಪೌಷ್ಟಿಕ ಆಹಾರ ಒದಗಿಸುವುದರ ಜೊತೆಗೆ ಆರೋಗ್ಯ, ಸ್ವಚ್ಛತೆ ಮತ್ತು ಪೌಷ್ಟಿಕತೆಯ ಕುರಿತು ಅರಿವು ಮೂಡಿಸಲಾಗುತ್ತಿದೆ. ಗರ್ಭಿಣಿಯರು ಹಾಗೂ ಬಾಣಂತಿಯರ ಆರೋಗ್ಯದ ಬಗ್ಗೆಯೂ ಇಲಾಖೆ ವಿಶೇಷ ಕಾಳಜಿ ವಹಿಸುತ್ತಿರುವುದು ಮೆಚ್ಚುವಂತಹ ಕಾರ್ಯವಾಗಿದೆ ಎಂದು ಹೇಳಿದರು.

ರೋಟರಿ ಕ್ಲಬ್ ಅಧ್ಯಕ್ಷ ಬಿ.ಬಿ. ಶಿವರಾಜು ಮಾತನಾಡಿ, ಆರೋಗ್ಯವಂತ ತಾಯಿ ಹಾಗೂ ಆರೋಗ್ಯವಂತ ಮಗು ಹೊಂದಿರುವ ಸಮಾಜವೇ ದೇಶದ ಬಲವಾಗಿದ್ದು, ಗರ್ಭಿಣಿಯರು ಹಾಗೂ ಮಕ್ಕಳ ಪೌಷ್ಟಿಕ ಆಹಾರ ಮತ್ತು ಆರೋಗ್ಯದ ಬಗ್ಗೆ ವಿಶೇಷ ಕಾಳಜಿ ವಹಿಸಬೇಕು ಎಂದರು.

ನಮ್ಮ ಅಂಗನವಾಡಿ ನಮ್ಮ ಜವಾಬ್ದಾರಿ ಎಂಬ ಆಶಯದೊಂದಿಗೆ ಅಂಗನವಾಡಿ ಕೇಂದ್ರಗಳನ್ನು ಸ್ವಚ್ಛವಾಗಿ, ಆರೋಗ್ಯಕರವಾಗಿ ಮತ್ತು ಮಕ್ಕಳ ಸ್ನೇಹಿಯಾಗಿ ರೂಪಿಸುವ ಜವಾಬ್ದಾರಿ ಎಲ್ಲರದ್ದಾಗಿದೆ ಎಂದು ತಿಳಿಸಿದರು.

ಅಂಗನವಾಡಿ ಶಿಕ್ಷಕಿ ಪಲ್ಲವಿ ಲೋಹಿತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿ ವೆಂಕಟೇಶ್, ತೇಜಸ್ವಿನಿ, ಮಮತಾ, ಶಶಿಕಲಾ, ದಯಾನಂದ, ಪಲ್ಲವಿ ಲೋಹಿತ್ ಇನ್ನಿತರರು ಉಪಸ್ಥಿತರಿದ್ದರು.



### ತಾಯಿ-ಮಗುವಿನ ಆರೋಗ್ಯಕ್ಕೆ ಕಾಳಜಿ

ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳಿಗೆ ಪೌಷ್ಟಿಕ ಆಹಾರ ನೀಡುವುದರ ಜೊತೆಗೆ ಅವರ ಆರೋಗ್ಯ ಮತ್ತು ಬೆಳವಣಿಗೆಯ ಮೇಲೆ ನಿರಂತರವಾಗಿ ನಿಗಾ ವಹಿಸಲಾಗುತ್ತಿದೆ. ಗರ್ಭಿಣಿಯರು ಹಾಗೂ ಬಾಣಂತಿಯರಿಗೂ ಪೌಷ್ಟಿಕ ಆಹಾರ, ಆರೋಗ್ಯ ಮತ್ತು ಸ್ವಚ್ಛತೆ ಕುರಿತು ಅಗತ್ಯ ಮಾರ್ಗದರ್ಶನ ನೀಡಲಾಗುತ್ತಿದೆ. ತಾಯಿ ಮತ್ತು ಮಗುವಿನ ಆರೋಗ್ಯದ ಹಿತದೃಷ್ಟಿಯಿಂದ ಅಂಗನವಾಡಿ ಕಾರ್ಯಕರ್ತೆಯರು ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ.

- ಮಮತಾ, ಮೇಲ್ವಿಚಾರಕಿ.



ಮಹಾತ್ಮ ಗಾಂಧೀಜಿ
ಅವರ 157 ನೇ ಜನ್ಮದಿನಾಚರಣೆ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ



ಲಾಲ್ ಬಹದ್ದೂರ್ ಶಾಸ್ತ್ರಿ
ಅವರ 122 ನೇ ಜನ್ಮ ದಿನಾಚರಣೆ

# ನನ್ನ ಜೀವನವೇ ನನ್ನ ಸಂದೇಶ

## ನಾಡಿನ ಸಮಸ್ತ ಜನತೆಗೆ ಗಾಂಧಿ ಜಯಂತಿಯ ಹಾರ್ದಿಕ ಶುಭಾಶಯಗಳು



“ಎಲ್ಲ ಒಳ್ಳೆಯ ಕ್ರಿಯೆಗಳು ಅಂತಿಮವಾಗಿ ಒಳ್ಳೆಯ ಫಲವನ್ನೇ ನೀಡುತ್ತವೆ ಎನ್ನುವುದು ನನ್ನ ಅಚಲ ನಂಬಿಕೆ”

— M.K. Gandhi

ಸತ್ಯ, ಅಹಿಂಸೆ, ಸರಳತೆ, ಸೇವೆ ಮತ್ತು ದೇಶಭಕ್ತಿಯ ಮೌಲ್ಯಗಳನ್ನು ತಮ್ಮ ಬದುಕಿನ ಮೂಲಕ ಸಾರಿದ **ರಾಷ್ಟ್ರಪಿತ ಮಹಾತ್ಮ ಗಾಂಧೀಜಿ** ಹಾಗೂ ಮಾಜಿ ಪ್ರಧಾನಮಂತ್ರಿ **ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜನ್ಮದಿನಾಚರಣೆಯಂದು, ಈ ಮಹಾನ್ ಚೇತನಗಳಿಗೆ ಗೌರವಪೂರ್ವಕ ನಮನಗಳು.**

**ಗಾಂಧೀಜಿಯವರ ಚಿಂತನೆಗಳು ಚಿರಂತನ; ಅವರ ಆದರ್ಶಗಳು ಸದಾ ಪ್ರಸ್ತುತ**

"ನಮ್ಮ ವೈವಿಧ್ಯಮಯ ಸಂಸ್ಕೃತಿ ಮತ್ತು ಪರಂಪರೆಯನ್ನು ಗೌರವಿಸುವುದು ಮತ್ತು ಕಾಪಾಡುವುದು"
-ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ.

CMofKarnataka https://dipr.karnataka.gov.in/ Karnatakavarthe

ಕರ್ನಾಟಕ ವಾರ್ತೆ

# ಅವೈಜ್ಞಾನಿಕ ಸೇತುವೆ ಕಾಮಗಾರಿ: ಆರೋಪ

- ರವಿ ದುಮ್ಮಿ

## ಕಾಮಗಾರಿ ಗುಣ ಮಟ್ಟ ಖಚಿತಪಡಿಸಿ | ಸಂಚಾರಕ್ಕೆ ಮುಕ್ತಗೊಳಿಸಿ

• ಪ್ರಜೋದಯ ವರದಿ

**ಅರಕಲಗೂಡು:** ತಾಲ್ಲೂಕಿನ ರಾಮನಾಥಪುರದಲ್ಲಿ ಕಾವೇರಿ ನದಿಗೆ ಅಡ್ಡಲಾಗಿ ನಿರ್ಮಿಸಲಾಗುತ್ತಿರುವ 23 ಕೋಟಿ ರೂ. ವೆಚ್ಚದ ಹೊಸ ಸೇತುವೆ ಕಾಮಗಾರಿ ಬಹುತೇಕ ಪೂರ್ಣಗೊಳ್ಳುವ ಹಂತ ತಲುಪಿದ್ದು, ಸೇತುವೆ ಪ್ರವೇಶ ದ್ವಾರದಲ್ಲಿನ ರಸ್ತೆ ಅಗಲೀಕರಣ ಕಾಮಗಾರಿಯನ್ನು ನಿಯಮಾನುಸಾರ ಕೈಗೊಳ್ಳದೇ ಅವೈಜ್ಞಾನಿಕವಾಗಿ ನಿರ್ಮಿಸಿರುವುದು ಸಾರ್ವಜನಿಕ ಆರೋಪಕ್ಕೆ ಕಾರಣವಾಗಿದೆ.

ಈಗಾಗಲೇ ಸೇತುವೆಯ ರಕ್ಷಣಾ ತಡೆಗೋಡೆಯ ಕೆಲವು ಕಡೆ ಸಿಮೆಂಟ್ ಕಾಂಕ್ರಿಟ್ ಪಿಲ್ಲರ್‌ಗಳಲ್ಲಿ ಬಿರುಕು ಕಾಣಿಸಿಕೊಂಡಿದೆ. ಸೇತುವೆಯನ್ನು ನದಿಗೆ ನೇರವಾಗಿ ನಿರ್ಮಿಸಲಾಗಿದ್ದರೂ ಕೂಡ ನಂತರದ ಸಂಪರ್ಕ ರಸ್ತೆಯನ್ನು ಅವೈಜ್ಞಾನಿಕವಾಗಿ ಅಭಿವೃದ್ಧಿಪಡಿಸಲಾಗುತ್ತಿದೆ. ಇದು ಕೆಆರ್‌ಡಿಸಿಎಲ್ ಅಧಿಕಾರಿಗಳ ವಿವೇಚನೆ ಮೇರೆಗೆ ಹಾಗೂ ಪರಿಹಾರ ತೆಗೆದುಕೊಂಡಿರುವವರ ಹೊಂದಾಣಿಕೆಯಿಂದ ಈ ರೀತಿಯಾಗಿ ಪ್ರವೇಶಾದ್ವಾರದ ರಸ್ತೆ ಅಗಲೀಕರಣವನ್ನು ವಕ್ರ ವಕ್ರವಾಗಿ ಅಭಿವೃದ್ಧಿ ಪಡಿಸಲಾಗುತ್ತಿದೆ.

**ಒತ್ತಾಸೆಗೆ ಒಳಗಾಗಿರುವ ಅಧಿಕಾರಿಗಳು**

ರಾಮನಾಥಪುರ ಕಡೆಯಿಂದ ಹೊಸ ಸೇತುವೆ ಪ್ರವೇಶದ್ವಾರದಲ್ಲಿ ಖಾಸಗಿ ಪೆಟ್ರೋಲ್ ಬಂಕ್, ಬಾರ್, ರೆಸ್ಟೋರೆಂಟ್ ಕಾರ್ಯನಿರ್ವಹಿಸುತ್ತಿದೆ. ಹೊಸದಾದ ಸೇತುವೆ ರಸ್ತೆಗೆ ಹೊಂದಿ ಕೊಂಡಂತೆ ಇದ್ದು, ಇಲ್ಲಿ ಯಾವುದೇ ನಿಯಮನಗಳನ್ನು ಅನುಸರಿಸದೇ ರಸ್ತೆಯನ್ನು ಅಭಿವೃದ್ಧಿ ಪಡಿಸಲಾಗುತ್ತಿದೆ. ಖಾಸಗಿ ವ್ಯಕ್ತಿಯು ರಸ್ತೆಯ ಪರಿಹಾರವನ್ನು ಸಹ ತೆಗೆದುಕೊಂಡಿದ್ದಾರೆ ಎನ್ನಲಾಗಿದೆ. ಆದರೂ ಕೂಡ ಪರಿಹಾರ ಪಡೆದಿರುವ ಜಾಗವನ್ನು ಸ್ವಾಧೀನಕ್ಕೆ ಪಡೆಯದೆ ರಸ್ತೆ ಯನ್ನು ನಿರ್ಮಿಸಲಾಗುತ್ತಿದೆ. ಅದೇ ರೀತಿ ಮತ್ತೊಂದು ಬದಿಯ ಪ್ರವೇಶದ್ವಾರದಲ್ಲಿಯೂ ಕೂಡ ಖಾಸಗಿ ಜಾಗಕ್ಕೆ ಪರಿಹಾರ ನೀಡಿದ್ದು, ಅಲ್ಲಿಯೂ ಕೂಡ ರಸ್ತೆಯನ್ನು ನೇರವಾಗಿ ನಿರ್ಮಿಸದೇ ವಕ್ರವಾಗಿ ಸಂಪರ್ಕವನ್ನು ಕಲ್ಪಿಸಲಾಗಿದೆ.



**ಅವೈಜ್ಞಾನಿಕ ಕಲ್ಲಿನ ತಡೆಗೋಡೆ**

ನೂತನ ಸೇತುವೆಯ ಪ್ರವೇಶದ್ವಾರದ ಕೆಳ ಭಾಗದಲ್ಲಿ ದೇವಸ್ಥಾನಕ್ಕೆ ಹೋಗುವ ಮಾರ್ಗವಿದ್ದು, ರಸ್ತೆಯ ಕೆಳಭಾಗವನ್ನು ಕಾಂಕ್ರಿಟ್ ವಾಲ್‌ನಿಂದ ನಿರ್ಮಿಸದೆ ಸೈಜ್ ಕಲ್ಲುಗಳಿಂದ ತಡೆಗೋಡೆಯನ್ನು ಕಟ್ಟಲಾಗಿದೆ. ಇದು ಅತೀಯಾದ ಮಳೆಬಿದ್ದರೇ ಅದು ಸಂಪೂರ್ಣವಾಗಿ ಕುಸಿಯುವ ಸಾಧ್ಯತೆ ಹೆಚ್ಚಿದೆ.

ರಾಮನಾಥಪುರದಲ್ಲಿ ಮೈಸೂರು ಅರಸರ ಕಾಲದಲ್ಲಿ ನಿರ್ಮಿಸಲಾಗಿರುವ ಹಳೆಯ ಸೇತುವೆ ಶತಮಾನಕ್ಕೂ ಹೆಚ್ಚಿನ ಇತಿಹಾಸ ಹೊಂದಿದೆ. ಆ ಕಾಲದ ವಾಹನ ಸಂಚಾರಕ್ಕೆ ಅನುಗುಣವಾಗಿ ನಿರ್ಮಿಸಲಾಗಿದ್ದ ಸೇತುವೆಯ ಮೇಲೆ ಇತ್ತೀಚಿನ ವರ್ಷಗಳಲ್ಲಿ ವಾಹನಗಳ ಸಂಚಾರ ಗಣನೀಯವಾಗಿ ಹೆಚ್ಚಾಗಿದೆ. ಸೇತುವೆ ಕಿರಿದಾಗಿರುವುದರಿಂದ 2 ಬದಿಯಿಂದ ವಾಹನಗಳು ಬಂದಾಗ ಸಂಚಾರ ದಟ್ಟಣೆ ಉಂಟಾಗಿ, ಆಗಾಗ್ಗೆ ಟ್ರಾಫಿಕ್ ಸಮಸ್ಯೆ ಎದುರಾಗಿರುವುದು ತಪ್ಪಿರಲಿಲ್ಲ.

ಹಳೆಯ ಸೇತುವೆಯ ಕಿರಿದಾದ ಸ್ಥಿತಿ ಹಾಗೂ ಹೆಚ್ಚುತ್ತಿರುವ ವಾಹನ ಸಂಚಾರದ ಹಿನ್ನಲೆ ಯಲ್ಲಿ ಹೊಸ ಸೇತುವೆ ನಿರ್ಮಾಣಕ್ಕೆ ಹಲವು ವರ್ಷಗಳ ಹಿಂದೆ ಮಂಜೂರಾತಿ ದೊರೆತಿತ್ತು. ಕಾಮಗಾರಿ ಆರಂಭಗೊಂಡು 7 ವರ್ಷ ಕಳೆದರೂ ಮುಕ್ತಾಯವಾಗದೆ ವಿಳಂಬವಾಗುತ್ತಲೇ ಬಂದಿದೆ.

**ಸೇತುವೆ ಕಾಮಗಾರಿ ವಿಳಂಬ**

ಹೊಸ ಸೇತುವೆ ನಿರ್ಮಾಣದ ಕಾಮಗಾರಿ ಸುಮಾರು 10 ವರ್ಷಗಳಿಂದಲೂ ನಡೆಯುತ್ತಿದೆ. ಈ ವಿಳಂಬದಿಂದಾಗಿ ಪ್ರತಿದಿನ ಹಳೆಯ ಸೇತುವೆಯನ್ನೇ ಅವಲಂಬಿಸಬೇಕಾದ ಪರಿಸ್ಥಿತಿ ಮುಂದುವರಿದಿದ್ದು, ವಾಹನ ಸವಾರರು ಹಾಗೂ ಪ್ರಯಾಣಿಕರು ತೊಂದರೆ ಅನುಭವಿ ಸುತ್ತಿದ್ದಾರೆ. ಇದೀಗ ಕಾಮಗಾರಿ ಅಂತಿಮ ಹಂತ ತಲುಪಿರುವ ಸಂದರ್ಭದಲ್ಲಿಯೂ ಕಾಮಗಾರಿ ಯನ್ನು ಗುತ್ತಿಗೆದಾರ, ಇಂಜಿನೀಯರ್‌ಗಳ ಹೊಂದಾಣಿಕೆಯಿಂದ ಕೈಗೊಳ್ಳುತ್ತಿರುವುದು ಕಾಮಗಾರಿಯು ಅವೈಜ್ಞಾನಿಕವಾಗಿ ಕೂಡಿರಲು ಕಾರಣವಾಗಿದೆ.

**ಶಾಸಕರ ಭೇಟಿಯನ್ನು ಲೆಕ್ಕಿಸದ ಅಧಿಕಾರಿಗಳು**

ಹೊಸ ಸೇತುವೆ ಕಾಮಗಾರಿ ವಿಳಂಬವಾಗುತ್ತಿರುವ ಹಿನ್ನಲೆಯಲ್ಲಿ ಶಾಸಕ ಎ.ಮಂಜು ಅವರು ಕಳೆದ ಕೆಲ ತಿಂಗಳುಗಳಿಂದ ಕಾಮಗಾರಿ ಸ್ಥಳಕ್ಕೆ ಕೆಆರ್‌ಡಿಸಿಎಲ್ ಅಧಿಕಾರಿಗಳು ಹಾಗೂ ಆಂಧ್ರಪ್ರದೇಶ ಮೂಲದ ಗುತ್ತಿಗೆದಾರರನ್ನು ಕರೆಸಿ ಕಾಮಗಾರಿಯನ್ನು ವೈಜ್ಞಾನಿಕವಾಗಿ, ಗುಣ ಮಟ್ಟದಿಂದ ತ್ವರಿತವಾಗಿ ಪೂರ್ಣಗೊಳಿಸುವಂತೆ ತಾಕೀತು ಮಾಡುತ್ತಿದ್ದಾರೆ. ಕಾಮಗಾರಿ ಶೀಘ್ರ ಪೂರ್ಣಗೊಳಿಸಿ ಸಾರ್ವಜನಿಕರ ಸಂಚಾರಕ್ಕೆ ಸೇತುವೆಯನ್ನು ಮುಕ್ತಗೊಳಿಸುವಂತೆ ಶಾಸಕರು ಒತ್ತಡ ಹೇರಿದ್ದರೂ, ಕಾಮಗಾರಿ ಗುಣಮಟ್ಟದ ಬಗ್ಗೆ ಸಾರ್ವಜನಿಕರಿಂದ ಪ್ರಶ್ನೆಗಳು ಕೇಳಿಬಂದಿವೆ.

**ಗುಣಮಟ್ಟ ಪರಿಶೀಲನೆಗೆ ಆಗ್ರಹ**

ಸೇತುವೆಯ ರಕ್ಷಣಾ ತಡೆಗೋಡೆಯ ಕಾಂಕ್ರಿಟ್ ಪಿಲ್ಲರ್‌ಗಳಲ್ಲಿ ಬಿರುಕು ಕಾಣಿಸಿಕೊಂಡಿರುವುದನ್ನು ಗಂಭೀರವಾಗಿ ಪರಿಗಣಿಸಿ ಸಂಬಂಧ ಪಟ್ಟ ತಾಂತ್ರಿಕ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ಬಿರುಕು ಉಂಟಾ ಗಿರುವ ಕಾರಣವನ್ನು ಪತ್ತೆಹಚ್ಚಿ, ಅಗತ್ಯ ವಿದ್ದರೆ ತಾಂತ್ರಿಕ ಪರೀಕ್ಷೆ ನಡೆಸಿ, ದೋಷಪೂರಿತ ಕಾಮಗಾರಿ ಸರಿಪಡಿಸಿದ ನಂತರವೇ ಸೇತುವೆಯನ್ನು ಸಾರ್ವಜನಿಕರ ಸಂಚಾರಕ್ಕೆಮುಕ್ತ ಗೊಳಿಸಬೇಕೆಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

**ಜನರ ಸುರಕ್ಷತೆಗೆ ಆದ್ಯತೆ ನೀಡಿ**

ಜನರ ಸುರಕ್ಷತೆಗಿಂತ ಕಾಮಗಾರಿ ಪೂರ್ಣಗೊಳಿಸುವುದಕ್ಕೆ ಆದ್ಯತೆ ನೀಡಬಾರದು. ಕೋಟ್ಯಾಂತರ ರೂ. ವೆಚ್ಚದಲ್ಲಿ ನಿರ್ಮಿಸಲಾಗುತ್ತಿರುವ ಸೇತುವೆ ಗುಣಮಟ್ಟದಲ್ಲಿ ರಾಜಿ ಇರಬಾರದು. ಬಿರುಕು ಕಾಣಿಸಿಕೊಂಡಿರುವ ಭಾಗವನ್ನು ಮುಚ್ಚಿಹಾಕುವ ಬದಲು ಅದರ ಕಾರಣವನ್ನು ಪತ್ತೆಹಚ್ಚಿ ಶಾಶ್ವತ ಪರಿಹಾರ ಕಲ್ಪಿಸಬೇಕೆಂದು ಸ್ಥಳೀಯರು ಒತ್ತಾಯಿಸಿದ್ದಾರೆ.

> **ಹಳೆಯ ಸೇತುವೆಯ ಕಿರಿದಾದ ರಸ್ತೆಯಿಂದ ವರ್ಷಗಳಿಂದ ಸಂಕಷ್ಟ ಅನುಭವಿಸುತ್ತಿರುವ ರಾಮನಾಥಪುರ ಭಾಗದ ಜನರು ಹೊಸ ಸೇತುವೆ ಶೀಘ್ರ ಸಂಚಾರಕ್ಕೆ ಮುಕ್ತವಾಗುವುದನ್ನು ಎದುರು ನೋಡುತ್ತಿದ್ದಾರೆ. ಉದ್ಘಾಟನೆಗೂ ಮುನ್ನವೇ ಹೊಸ ಸೇತುವೆಯ ಪ್ರವೇಶ ದ್ವಾರದಲ್ಲಿ ಅವೈಜ್ಞಾನಿಕ ರಸ್ತೆ, ಸೈಜ್ ಕಲ್ಲುಗಳಿಂದ ಕೂಡಿರುವ ತಡೆಗೋಡೆ, ಕೆಲವು ಭಾಗದಲ್ಲಿ ಬಿರುಕು ಕಾಣಿಸಿಕೊಂಡಿರುವುದು ಅವರ ನಿರೀಕ್ಷೆಗೆ ಆತಂಕದ ಛಾಯೆ ಮೂಡಿಸಿದೆ. ಕಾಮಗಾರಿ ಗುಣ ಮಟ್ಟವನ್ನು ಖಚಿತ ಪಡಿಸಿ, ದೀರ್ಘಕಾಲ ಬಾಳಿಕೆ ಬರುವ ರೀತಿಯಲ್ಲಿ ಸೇತುವೆ ನಿರ್ಮಿಸಿ ಸಾರ್ವಜನಿಕರ ಸಂಚಾರಕ್ಕೆ ಸುರಕ್ಷಿತವಾಗಿ ಮುಕ್ತಗೊಳಿಸಬೇಕು.**
> **-ಭುವನೇಶ್, ರೈತ ಸಂಘದ ಅಧ್ಯಕ್ಷ.**



**ಸೇತುವೆ ಗುಣಮಟ್ಟ ಪರೀಕ್ಷಿಸಿ**

ಸೇತುವೆ ನಿರ್ಮಾಣ ಕಾಮಗಾರಿಗೆ ಕೋಟ್ಯಾಂತರ ರೂಪಾಯಿ ಸಾರ್ವಜನಿಕ ಹಣ ವ್ಯಯವಾಗುತ್ತಿರುವ ಹಿನ್ನಲೆಯಲ್ಲಿ ಕಾಮಗಾರಿ ಪ್ರತಿಯೊಂದು ಹಂತದಲ್ಲೂ ಗುಣಮಟ್ಟ ಕಾಯ್ದುಕೊಳ್ಳಬೇಕು. ಉದ್ಘಾಟನೆಗೂ ಮುನ್ನವೇ ಬಿರುಕು ಕಾಣಿಸಿಕೊಂಡಿರುವುದರಿಂದ ಸಂಬಂಧಪಟ್ಟ ಇಲಾಖೆ ಸಮಗ್ರ ತಾಂತ್ರಿಕ ಪರಿಶೀಲನೆ ನಡೆಸಿ ಸಾರ್ವಜನಿಕರ ಆತಂಕ ನಿವಾರಿಸ ಬೇಕೆಂಬುದು ಸ್ಥಳೀಯರ ಆಗ್ರಹವಾಗಿದೆ.

> **ರಾಮನಾಥಪುರ ನೂತನ ಸೇತುವೆ ಕಾಮಗಾರಿ ಮುಕ್ತಾಯದ ಹಂತ ತಲುಪಿದೆ. ಸೇತುವೆಗೆ ರಸ್ತೆ ನಿರ್ಮಾಣ ಕಾಮಗಾರಿ ಮಾತ್ರ ಬಾಕಿ ಇದ್ದು, ಮಳೆಗಾಲದ ಹಿನ್ನಲೆಯಲ್ಲಿ ಸದ್ಯ ಡಾಂಬರೀಕರಣ ಮಾಡಲಾಗಿಲ್ಲ. ಸೇತುವೆಯ ಪ್ರವೇಶದ್ವಾರದ ರಸ್ತೆ ಕಾಮಗಾರಿಯನ್ನು ಇನ್ನೂ ಕೈಗೊಂಡಿಲ್ಲ. ತಡೆಗೋಡೆ ಪಿಲ್ಲರ್‌ನಲ್ಲಿ ಬಿರುಕು ಕಾಣಿಸಿಕೊಂಡಿರುವ ವಿಷಯ ನನ್ನ ಗಮನಕ್ಕೆ ಬಂದಿಲ್ಲ. ಈ ಬಗ್ಗೆ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಲಾಗುವುದು. ಪರಿಶೀಲನೆ ನಂತರ ಅಗತ್ಯವಿರುವ ಕ್ರಮ ಕೈಗೊಳ್ಳಲಾಗುವುದು.**
> **-ರಾಜು, ಕೆಆರ್‌ಡಿಸಿಎಲ್ ಸಹಾಯಕ ಕಾರ್ಯಪಾಲಕ ಇಂಜಿನೀಯರ್, ಮೈಸೂರು.**

## ಕಾಫಿ ಬೆಳೆಗಾರರ ಪರ ಸಂಸತ್ತಿನಲ್ಲಿ ಹೋರಾಟ : ಶ್ರೇಯಸ್



» **ಮೊದಲನೇ ಪುಟದಿಂದ**

ಅವರನ್ನು ತಾಲ್ಲೂಕಿಗೆ ಆಹ್ವಾನಿಸಿ, ನೇರವಾಗಿ ಮನವಿ ಸಲ್ಲಿಸುವ ಪ್ರಯತ್ನ ಮಾಡಲಾಗುವುದು ಎಂದರು.

**ಗುತ್ತಿಗೆ ಯೋಜನೆ ಅನುಷ್ಠಾನಕ್ಕೆ ಒತ್ತಾಯ**

ಶಾಸಕ ಸಿಮೆಂಟ್ ಮಂಜು ಅವರು ಮಾತನಾಡಿ, ಒತ್ತುವರಿ ಭೂಮಿಯನ್ನು ಗುತ್ತಿಗೆ ಆಧಾರದಲ್ಲಿ ನೀಡುವ ಯೋಜನೆ ಅರ್ಧದಲ್ಲೇ ಸ್ಥಗಿತಗೊಂಡಿದ್ದು, ಅದನ್ನು ಶೀಘ್ರ ಅನುಷ್ಠಾನಗೊಳಿಸುವಂತೆ ಸರ್ಕಾರವನ್ನು ಒತ್ತಾಯಿಸಿದ ಅವರು, ಕಸ್ತೂರಿ ರಂಗನ್ ವರದಿ ಅನುಷ್ಠಾನದ ವಿಚಾರದಲ್ಲಿ ಬೆಳೆಗಾರರ ಪರವಾಗಿ ಹೋರಾಟ ನಡೆಸಲಾಗಿದೆ. ವಿಧಾನಸೌಧದಲ್ಲಿ ಕಾಫಿ ಬೆಳೆಗಾರರು ಎದುರಿಸುತ್ತಿರುವ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತರಲಾಗಿದೆ. ಬೆಳೆಗಾರರು ಒಗ್ಗಟ್ಟಿನಿಂದ ಹೋರಾಟ ನಡೆಸಿದರೆ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬಹುದೆಂದು ತಿಳಿಸಿದರು.

ಕಾಫಿ ಬೆಳೆಗಾರರು ಹೊರನೋಟಕ್ಕೆ ಸಮೃದ್ಧವಾಗಿ ಕಾಣಿಸಿದರೂ, ತೋಟದಲ್ಲಿ ಅವರು ಅನುಭವಿಸುವ ಶ್ರಮ ಮತ್ತು ಸಂಕಷ್ಟಗಳು ಅವರಿಗೆ ಮಾತ್ರ ಗೊತ್ತಿದೆ. ರೈತರು ಹೊಲದಲ್ಲಿ ಎಷ್ಟು ಶ್ರಮಿಸುತ್ತಾರೋ, ಅದೇ ರೀತಿ ಕಾಫಿ ಬೆಳೆಗಾರರು ತೋಟದಲ್ಲಿ ದುಡಿಯುತ್ತಾರೆ. ಬೆಳೆಗಾರರ ಸಮಸ್ಯೆಗಳ ಬಗ್ಗೆ ತಳಮಟ್ಟದಿಂದಲೇಅರಿವು ಹೊಂದಿದ್ದು, ಅವರ ಧ್ವನಿಯನ್ನು ಸರ್ಕಾರದ ಮಟ್ಟದಲ್ಲಿ ಪ್ರಾಮಾಣಿಕವಾಗಿ ಮಂಡಿಸುವ ಕೆಲಸ ಮಾಡುತ್ತಿದ್ದೇನೆಂದು ಹೇಳಿದರು.

ನಗರ ಪ್ರದೇಶದಲ್ಲಿರುವವರಿಗೆ ಕಾಫಿ ಬೆಳೆಗಾರರು ಸುಖವಾಗಿದ್ದಾರೆ, ಸಮೃದ್ಧರಾಗಿದ್ದಾರೆ, ಯಾವುದೇ ಸಮಸ್ಯೆ ಇಲ್ಲವೆಂಬ ಭಾವನೆ ಇರಬಹುದು. ಆದರೆ, ಪ್ರತಿದಿನ ಬೆಳಿಗ್ಗೆ ತೋಟಕ್ಕೆ ತೆರಳಿ ಸಂಜೆ ಮನೆಗೆ ಮರಳುವವರೆಗೆ ಬೆಳೆಗಾರರು ಪಡುವ ಶ್ರಮ ಅವರಿಗೆ ಮಾತ್ರ ತಿಳಿದಿದೆ. ಉತ್ತಮ ಇಳುವರಿ ಪಡೆಯಲು ನಿರಂತರ ಪರಿಶ್ರಮ ಅಗತ್ಯ ವಾಗಿದ್ದು, ವಾರ್ಷಿಕ ಆದಾಯದ ಮೇಲೆಯೇ ಅನೇಕ ಕುಟುಂಬಗಳ ಬದುಕು ಅವಲಂಬಿತವಾಗಿದೆ ಎಂದು ಹೇಳಿದರು.

ಕಾಫಿ ತೋಟಗಳಲ್ಲಿ ಕಾರ್ಮಿಕರ ಕೊರತೆ ಇತ್ತೀಚಿನ ದಿನಗಳಲ್ಲಿ ಪ್ರಮುಖ ಸಮಸ್ಯೆಯಾಗಿದೆ. ಹೊರರಾಜ್ಯಗಳಿಂದ ಕಾರ್ಮಿಕರು ಆಗಮಿಸುತ್ತಿರುವುದರಿಂದ ಕೆಲಮಟ್ಟಿಗೆ ಸಮಸ್ಯೆ ನಿವಾರಣೆಯಾಗುತ್ತಿದ್ದರೂ, ಕಾರ್ಮಿಕರ ಕೊರತೆ ಸಂಪೂರ್ಣವಾಗಿ ಬಗೆಹರಿದಿಲ್ಲ. ಬೆಳೆಗಾರರು ಹಲವು ಸಮಸ್ಯೆಗಳನ್ನು ಎದುರಿಸುತ್ತಿದ್ದು, ಅವುಗಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳುವ ಅಗತ್ಯವಿದೆ ಎಂದರು.

ಕಾಫಿ ದಿನಾಚರಣೆಯ ಅಂಗವಾಗಿ ರಾಷ್ಟ್ರೀಯ ಹೆದ್ದಾರಿ 75ರಲ್ಲಿ ವಾಹನ ಸವಾರರು ಹಾಗು ಸಾರ್ವಜನಿಕರಿಗೆ ಉಚಿತವಾಗಿ ಕಾಫಿ ವಿತರಿಸಲಾಯಿತು. ಕರ್ನಾಟಕ ಬೆಳೆಗಾರರ ಒಕ್ಕೂಟದ ಅಧ್ಯಕ್ಷ ಹಳಸೆ ಶಿವಣ್ಣ, ಜಿಲ್ಲಾ ಬೆಳೆಗಾರರ ಸಂಘದ ಅಧ್ಯಕ್ಷ ಮಂಜುನಾಥ್ ಶೆಟ್ಟಿ, ಕರ್ನಾಟಕ ಬೆಳೆಗಾರರ ಒಕ್ಕೂಟದ ಮಾಜಿ ಅಧ್ಯಕ್ಷ ಜಯರಾಂ, ಪ್ರಧಾನ ಕಾರ್ಯದರ್ಶಿ ಸುರೇಂದ್ರ, ಜಿಲ್ಲಾ ಬೆಳೆಗಾರರ ಸಂಘದ ಪ್ರಧಾನ ಕಾರ್ಯದರ್ಶಿ ಹೆಗ್ಗುವೆ ಪುಟ್ಟರಾಜು, ಬೆಕ್ಕನಹಳ್ಳಿ ನಾಗರಾಜ್, ಸುಬ್ರಹ್ಮಣ್ಯ ಇದ್ದರು.

## ಅ.3, 4ರಂದು ಜೆಸಿಐ ಪ್ರಭಂಜನ ವಲಯ ಸಮ್ಮೇಳನ

• ಪ್ರಜೋದಯ ವರದಿ



**ಹಾಸನ:** ನಗರದಲ್ಲಿ ನೂತನವಾಗಿ ಅಸ್ತಿತ್ವಕ್ಕೆ ಬಂದಿರುವ ಜೆಸಿಐ ಪ್ರಭಂಜನ ವತಿಯಿಂದ ಅ.3 ಮತ್ತು 4 ರಂದು ಎರಡು ದಿನಗಳ ವಲಯ ಸಮ್ಮೇಳನ ಆಯೋಜಿಸಲಾಗಿದೆ ಎಂದು ವಲಯ ಅಧ್ಯಕ್ಷ ಪ್ರಜ್ವಲ್ ಎಸ್.ಜೈನ್ ಅವರು ತಿಳಿಸಿದರು.

ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜೆಸಿಐ (ಜೂನಿಯರ್‌ಚೇಂಬರ್ ಇಂಟರ್‌ನ್ಯಾಷನಲ್) ಸಂಸ್ಥೆ 1915ರಲ್ಲಿ ಅಮೇರಿಕಾದಲ್ಲಿ ಆರಂಭವಾಗಿ, 1944ರ ಬಳಿಕ ಜಾಗತಿಕ ಸಂಸ್ಥೆಯಾಗಿ ರೂಪುಗೊಂಡಿದೆ. ಯುವ ಜನರಲ್ಲಿ ನಾಯಕತ್ವದ ಗುಣಗಳನ್ನು ಬೆಳೆಸು ವುದು, ಸಾಮಾಜಿಕ ಜವಾಬ್ದಾರಿ ಹಾಗು ವ್ಯಕ್ತಿತ್ವ ವಿಕಸನಕ್ಕೆ ಅವಕಾಶ ಕಲ್ಪಿಸುವುದು ಸಂಸ್ಥೆಯ ಪ್ರಮುಖ ಉದ್ದೇಶವಾಗಿದೆ ಎಂದರು.

ಜೆಸಿಐ ಹಾಸನ ಹೇಮಾವತಿ ಹಾಗು ಜೆಸಿಐ ಕುಶಾಲನಗರ ಕಾವೇರಿ ಸಹಯೋಗದಲ್ಲಿ ಜೆಸಿಐ ಇಂಡಿಯಾದ ವಲಯ 14ರ ಈ ಸಾಲಿನ ವಲಯ ಸಮ್ಮೇಳನವನ್ನು ಶಾಂತಿಗ್ರಾಮ ಬಳಿಯ ಹೋಟೆಲ್ ಸ್ಕೈಬರ್ಡ್‌ನಲ್ಲಿ ಆಯೋಜಿಸಲಾಗಿದೆ. ಸಮ್ಮೇಳನದಲ್ಲಿ ಕರ್ನಾಟಕದ 13 ಜಿಲ್ಲೆಗಳ ಜೆಸಿಐ ಸದಸ್ಯರು ಹಾಗು ಪದಾಧಿಕಾರಿಗಳು ಭಾಗವಹಿಸಲಿದ್ದಾರೆ. ಕನ್ನಡ ಚಿತ್ರರಂಗದ ಹಿರಿಯ ನಟ ದೊಡ್ಡಣ್ಣ ಕಾರ್ಯಕ್ರಮಕ್ಕೆ ಆಗಮಿಸಿ ಶುಭನುಡಿ ಆಡಲಿದ್ದಾರೆ. ಜೆಸಿಐ ಹಾಸನ ಹೇಮಾವತಿ ಘಟಕ ಆರಂಭವಾಗಿ ಕೇವಲ ಎರಡು ತಿಂಗಳಾಗಿದ್ದು, ಇಷ್ಟು ದೊಡ್ಡ ಕಾರ್ಯಕ್ರಮ ಆಯೋಜಿಸುತ್ತಿರುವುದು ಸಂತಸದ ಸಂಗತಿ ಎಂದರು.

ಸಮಾಜದಲ್ಲಿ ಬದಲಾವಣೆ ತರಲು ಮುಂದಾಗುವ ಮುನ್ನ ಪ್ರತಿಯೊಬ್ಬರೂ ತಮ್ಮಲ್ಲಿ ಬದಲಾವಣೆ ಮಾಡಿಕೊಳ್ಳಬೇಕು. ಈ ನಿಟ್ಟಿನಲ್ಲಿ 18ರಿಂದ 40 ವರ್ಷದೊಳಗಿನ ಯುವಕರಿಗೆ ವಿವಿಧ ಚಟುವಟಿಕೆಗಳು ಹಾಗೂ ತರಬೇತಿಗಳ ಮೂಲಕ ನಾಯಕತ್ವ, ವ್ಯಕ್ತಿತ್ವ ವಿಕಸನ ಮತ್ತು ಸಾಮಾಜಿಕ ಜವಾಬ್ದಾರಿಯ ಕುರಿತು ಅರಿವು ಮೂಡಿಸಲಾಗುವುದೆಂದು ತಿಳಿಸಿದರು.

ಜೆಸಿಐ ಹಾಸನ ಹೇಮಾವತಿ ಘಟಕದ ವಿಮಲ್ ರಾಜ್ ಜಿ., ಸುನಿಲ್ ಹಾಗೂ ಸತೀಶ್ ಉಪಸ್ಥಿತರಿದ್ದರು.

## 50 ಲಕ್ಷ ಮತದಾರರನ್ನು ಕೈಬಿಡಲು ಷಡ್ಯಂತ್ರ

» **ಮೊದಲನೇ ಪುಟದಿಂದ**

ಮತದಾರರ ಪಟ್ಟಿಯಿಂದ ತೆಗೆದು ಹಾಕಲು ಫಾರಂ 7 ನೀಡಿರುವುದು ಕಂಡು ಬಂದಿದೆ. ಮತ್ತೆ ಕೆಲವು ಕ್ಷೇತ್ರಗಳಲ್ಲಿ 5-10 ಸಾವಿರ ಮತಗಳನ್ನು ಡಿಲೀಟ್ ಮಾಡುವ ಷಡ್ಯಂತ್ರ ನಡೆದಿದೆ. ಪ್ರಕಾಶ್ ರಾಜ್ ಅವರ ನೇತೃತ್ವದ ಸಿವಿಲ್ ಸೊಸೈಟಿ ಸದಸ್ಯರು ಮತಗಟ್ಟೆಗಳಿಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸಿದ್ದಾರೆಂದು ಮಾಹಿತಿ ನೀಡಿದರು.

ಬಿಜೆಪಿಯ ಅಧಿಕೃತ ಕಾರ್ಯಕರ್ತರು ತಮ್ಮ ಹೆಸರಿನಲ್ಲಿ ನೂರಾರು ಇಂತಹ ಫಾರಂ-7 ಅರ್ಜಿಗಳನ್ನು ಸಲ್ಲಿಸಿರುವುದನ್ನು ನಾವು ಪತ್ತೆ ಹಚ್ಚಿದ್ದೇವೆ. ಕೆಲವು ಕಡೆ ಬಿಜೆಪಿ ಕಾರ್ಯಕರ್ತರು ತಮ್ಮ ತಪ್ಪನ್ನು ಒಪ್ಪಿಕೊಂಡಿದ್ದಾರೆ. ಬಿಜೆಪಿ ಹಾಗು ಜನತಾದಳದ ಷಡ್ಯಂತ್ರ ಇದೀಗ ಬಯಲಾಗಿದೆ. ಫಾರಂ-7 ರಲ್ಲಿ ಮಾಹಿತಿಯನ್ನು ಮುದ್ರಿಸಿ ಬಿಜೆಪಿ ಕಾರ್ಯಕರ್ತರು ಈ ಕಾರ್ಯದಲ್ಲಿ ತೊಡಗಿದ್ದಾರೆ.

# ಬರ: 46 ಸಾವಿರ ಕೋ.ರೂ.ಬೆಳೆ ನಷ್ಟ

## ಕೇಂದ್ರಕ್ಕೆ ಡಾ.ಜಿ.ಪರಮೇಶ್ವರ್ ಪತ್ರ | ತುರ್ತು ನೆರವು ಒದಗಿಸಲು ಕೋರಿಕೆ

• ಪ್ರಜೋದಯ ವರದಿ



**ಬೆಂಗಳೂರು:** ಕರ್ನಾಟಕದ 177 ಬರಪೀಡಿತ ತಾಲ್ಲೂಕುಗಳಲ್ಲಿ 47.09 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆಹಾನಿಯಾಗಿದ್ದು, ಆರ್ಥಿಕ ನಷ್ಟ 46,324.5 ಕೋಟಿಗೆ ತಲುಪಿದೆ. ನಿರಂತರ ಮೌಲ್ಯಮಾಪನದ ಪ್ರಕಾರ 2026ರ ಖಾರಿಫ್ ಅವಧಿಯಲ್ಲಿ ಒಟ್ಟಾರೆ ಬೆಳೆ ಹಾನಿ 55 ಲಕ್ಷ ಹೆಕ್ಟೇರ್‌ಗಿಂತ ಹೆಚ್ಚಾಗುವ ಸಾಧ್ಯತೆಯಿದೆ ಎಂದು ಉಪಮುಖ್ಯಮಂತ್ರಿ ಡಾ.ಜಿ. ಪರಮೇಶ್ವರ್ ಅವರು ತಿಳಿಸಿದ್ದಾರೆ.

ಕರ್ನಾಟಕದಲ್ಲಿ ಬರ ಪರಿಸ್ಥಿತಿ ಮತ್ತಷ್ಟು ಭೀಕರವಾಗುತ್ತಿರುವ ಹಿನ್ನಲೆ ಉಪ ಮುಖ್ಯಮಂತ್ರಿ ಪರಮೇಶ್ವರ್ ಅವರು ಕೇಂದ್ರ ಗೃಹ ಸಚಿವ ಅಮಿತ್ ಶಾ ಹಾಗು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರಿಗೆ ಪ್ರತ್ಯೇಕವಾಗಿ ಪತ್ರ ಬರೆದು, ಕರ್ನಾಟಕಕ್ಕೆ ತುರ್ತು ನೆರವು ಒದಗಿಸು ವಂತೆ ಕೋರಿದ್ದಾರೆ.

ಪತ್ರದಲ್ಲಿ ಬರದಿಂದ ರೈತರು ಹಾಗು ಗ್ರಾಮೀಣ ಜನರ ಜೀವನೋಪಾಯದ ಮೇಲೆ ಉಂಟಾಗುತ್ತಿರುವ ಪರಿಣಾಮವನ್ನು ವಿವರಿಸಿರುವ ಅವರು, ರೈತರಿಗೆ ಸಮಯೋಚಿತ ಹಾಗು ಸಮರ್ಪಕ ಪರಿಹಾರ ಒದಗಿಸಲು ರಾಜ್ಯ ಮತ್ತು ಕೇಂದ್ರ ಸರ್ಕಾರಗಳುಸಮನ್ವಯದಿಂದಕಾರ್ಯನಿರ್ವಹಿಸಬೇಕಾದ ಅಗತ್ಯವನ್ನು ಒತ್ತಿ ಹೇಳಿದ್ದಾರೆ.

ರಾಜ್ಯ ಸರ್ಕಾರವು ಈಗಾಗಲೇ 101 ಬರಪೀಡಿತ ತಾಲ್ಲೂಕುಗಳಿಗೆ 3,705.30 ಕೋಟಿ ರೂ. ನೆರವು ಕೋರಿ ಖಾರಿಫ್-2026 ಬರ ಪರಿಹಾರ ಮೆಮೊರಾಂ ಡಮ್ ಅನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಿದೆ. ಮುಂದಿನ ವೈಜ್ಞಾನಿಕ ಮೌಲ್ಯಮಾಪನದ ಬಳಿಕ ಹೆಚ್ಚುವರಿಯಾಗಿ 76 ತಾಲ್ಲೂಕುಗಳನ್ನು 2ನೇ ಹಂತದಲ್ಲಿ ಬರ ಪೀಡಿತವೆಂದು ಘೋಷಿಸಲಾಗಿದ್ದು, ಇದರೊಂದಿಗೆ ರಾಜ್ಯದಲ್ಲಿ ಬರಪೀಡಿತ ತಾಲ್ಲೂಕುಗಳ ಸಂಖ್ಯೆ 177ಕ್ಕೆ ಏರಿಕೆಯಾಗಿದೆ. ಇನ್ನೂ 40 ತಾಲ್ಲೂಕು ಗಳಲ್ಲಿ ಗ್ರೌಂಡ್ ಟ್ರೂಥಿಂಗ್ ನಡೆಯುತ್ತಿದೆ. ನಿರಂತರ ಮೌಲ್ಯಮಾಪ ನದ ಆಧಾರದ ಮೇಲೆ ಮುಂಗಾರು ಅಂತ್ಯದ ವೇಳೆಗೆ ಬರಪೀಡಿತ ತಾಲ್ಲೂಕುಗಳ ಸಂಖ್ಯೆ 220 ದಾಟುವ ಸಾಧ್ಯತೆ ಇದೆ ಎಂದು ತಿಳಿಸಿದ್ದಾರೆ.

> **ಪರಿಹಾರ ಮಾನದಂಡ ಪರಿಷ್ಕರಣೆ ಮಾಡಿ**
> ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಗೆ ಬರೆದ ಪತ್ರದಲ್ಲಿ ಎನ್‌ಡಿಆರ್‌ಎಫ್ ಮತ್ತು ಎಸ್‌ಡಿಆರ್‌ಎಫ್ ಅಡಿಯಲ್ಲಿ ನೀಡಲಾಗುವ ನೆರವಿನ ಅಂಶ ಹಾಗೂ ಮಾನದಂಡಗಳನ್ನು ವಿಶೇಷ ವಾಗಿ ರೈತರಿಗೆ ನೀಡುವ ಇನ್‌ಪುಟ್ ಸಬ್ಸಿಡಿಗೆ ಸಂಬಂಧಿಸಿದ ಮಾನದಂಡಗಳನ್ನು ಶೀಘ್ರ ಪರಿಷ್ಕರಿಸುವಂತೆ ಡಾ.ಜಿ.ಪರಮೇಶ್ವರ ಅವರು ಮನವಿ ಮಾಡಿದ್ದಾರೆ.

ಹೊಸದಾಗಿ ಘೋಷಿಸಲಾದ 76 ಬರಪೀಡಿತ ತಾಲ್ಲೂಕುಗಳಲ್ಲಿ ನಡೆಸಿದ ಬೆಳೆಹಾನಿ ಮೌಲ್ಯ ಮಾಪನದಲ್ಲಿ 26.08 ಲಕ್ಷ ಹೆಕ್ಟೇರ್ ಕೃಷಿ ಬೆಳೆ ಹಾಗೂ 1.49 ಲಕ್ಷ ಹೆಕ್ಟೇರ್ ತೋಟಗಾರಿಕ ಬೆಳೆ ಹಾನಿಯಾಗಿ ರುವುದು ಕಂಡುಬಂದಿದೆ. ಹಾನಿಯ ಪ್ರಮಾಣ ಶೇ.33ರಿಂದ ಶೇ.100ರ ವರೆಗೆ ಇದ್ದು, ಈ ಬರಪೀಡಿತ ಪ್ರದೇಶಗಳಲ್ಲಿ ಬಹುಪಾಲು ಶೇ.50ಕ್ಕಿಂತ ಹೆಚ್ಚು ಬೆಳೆಹಾನಿ ದಾಖಲಾಗಿದೆಂದು ತಿಳಿಸಿದ್ದಾರೆ.

## ಕಿಶನ್ ಬ್ಯಾಟಿಂಗ್: ಫೈನಲ್‌ಗೆ ಭಾರತ

• ಪ್ರಜೋದಯ ವರದಿ

**ನಿಶಿನ್:** ಏಷ್ಯನ್ ಗೇಮ್ಸ್ ಪುರುಷರ ಕ್ರಿಕೆಟ್ ಸೆಮಿಫೈನಲ್‌ನಲ್ಲಿ ಶ್ರೀಲಂಕಾ ವಿರುದ್ಧ 124 ರನ್ ಅಂತರದ ಭರ್ಜರಿ ಗೆಲುವು ದಾಖಲಿಸಿರುವ ಭಾರತ ತಂಡವು ಫೈನಲ್‌ಗೆ ಲಗ್ಗೆ ಇಟ್ಟಿದೆ. ಇದರೊಂದಿಗೆ ಶನಿವಾರ ನಡೆಯಲಿರುವ ಫೈನಲ್‌ನಲ್ಲಿ ಚಿನ್ನದ ಪದಕಕ್ಕಾಗಿ ಸಾಂಪ್ರದಾಯಿಕ ಬದ್ಧ ಎದುರಾಳಿ ಪಾಕಿಸ್ತಾನ ವಿರುದ್ಧ ಕದನ ಏರ್ಪಟ್ಟಿದೆ.

ಗುರುವಾರ ನಡೆದ ಸೆಮಿಫೈನಲ್ ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್‌ಗೆ ಆಹ್ವಾನಿಸಲ್ಪಟ್ಟ ಭಾರತ ಇಶಾನ್ ಕಿಶನ್ (ಅಜೇಯ 80) ಹಾಗೂ ವೈಭವ್ ಸೂರ್ಯವಂಶಿ (38) ಅಮೋಘ ಆಟದ ನೆರವಿನಿಂದ 7 ವಿಕೆಟ್ ನಷ್ಟಕ್ಕೆ 169 ರನ್‌ಗಳ ಸವಾಲಿನ ಮೊತ್ತ ಪೇರಿಸಿತ್ತು.

ಈ ಗುರಿ ಬೆನ್ನಟ್ಟಿದ ಲಂಕಾ ಬ್ಯಾಟಿಂಗ್ ಕುಸಿತ ಕಂಡಿತ್ತಲ್ಲದೆ ಕೇವಲ 9.5 ಓವರ್‌ಗಳಲ್ಲಿ 45 ರನ್‌ಗಳಿಗೆ ಆಲೌಟ್ ಆಯಿತು. ಲಂಕಾ ಪರ ನುವನಿಡು ಫೆರ್ನಾಂಡೊ ಗರಿಷ್ಠ 15 ರನ್ ಗಳಿಸಿದರೆ ಐವರು ಬ್ಯಾಟರ್‌ಗಳು ಶೂನ್ಯಕ್ಕೆ ಔಟ್ ಆದರು.

ಭಾರತದ ಪರ ಜಸ್‌ಪ್ರೀತ್ ಬೂಮ್ರಾ, ಅಕ್ಷರ್ ಪಟೇಲ್ ಹಾಗೂ ಅಭಿಷೇಕ್ ಶರ್ಮಾ ತಲಾ 2 ಹಾಗು ವಾಷ್ಟಿಂಗ್ಟನ್ ಸುಂದರ್ 1 ವಿಕೆಟ್ ಗಳಿಸಿದರು.

**ಕಿಶನ್, ಸೂರ್ಯವಂಶಿ ಮಿಂಚು**

ಈ ಮೊದಲು ಭಾರತದ ಆರಂಭ ಉತ್ತಮವಾಗಿರಲಿಲ್ಲ. ಅಭಿಷೇಕ್ ಶರ್ಮಾ ಹಾಗೂ ಸಂಜು ಸ್ಯಾಮ್ಸನ್ ತಲಾ ಏಳು ರನ್ ಗಳಿಸಿ ಔಟ್ ಆದರು. ನಾಯಕ ಶ್ರೇಯಸ್ ಅಯ್ಯರ್ (13) ಸಹ ನಿರಾಸೆ ಮೂಡಿಸಿದರು. ಮತ್ತೊಂದೆಡೆ ಬಿರುಸಿನ ಆಟ ಪ್ರದರ್ಶಿಸಿದ ವೈಭವ್ 21 ಎಸೆತದಲ್ಲಿ ಆರು ಬೌಂಡರಿ ಹಾಗೂ ಎರಡು ಸಿಕ್ಸರ್‌ಗಳಿಂದ 38 ರನ್ ಗಳಿಸಿ ಮಿಂಚಿದರು.

ಒಂದು ಹಂತದಲ್ಲಿ 87ಕ್ಕೆ ನಾಲ್ಕು ವಿಕೆಟ್ ಕಳೆದುಕೊಂಡಿದ್ದ ಭಾರತ ಸಂಕಷ್ಟಕ್ಕೆ ಸಿಲುಕಿತ್ತು. ಈ ಹಂತದಲ್ಲಿ ಅಮೋಘ ಅರ್ಧಶತಕ ಗಳಿಸಿದ ಇಶಾನ್ ಸವಾಲಿನ ಮೊತ್ತ ಪೇರಿಸಲು ನೆರವಾದರು. 46 ಎಸೆತಗಳನ್ನು ಎದುರಿಸಿದ ಇಶಾನ್ ನಾಲ್ಕು ಬೌಂಡರಿ ಹಾಗೂ ಐದು ಸಿಕ್ಸರ್‌ಗಳಿಂದ 80 ರನ್ ಗಳಿಸಿ ಔಟಾಗದೆ ಉಳಿದರು.

## ಅಗತ್ಯ ದಾಖಲೆ ಸಲ್ಲಿಸಿ ಮತದಾರರ ಪಟ್ಟಿಯಲ್ಲಿ ಹೆಸರು ಉಳಿಸಿಕೊಳ್ಳಿ

• ಪ್ರಜೋದಯ ವರದಿ

**ಸಕಲೇಶಪುರ:** ಮತದಾರರ ಪಟ್ಟಿಯ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ಯಲ್ಲಿ ಎರಡು ಬಾರಿ ನೋಟೀಸ್ ನೀಡಿದ್ದರೂ ಸ್ಪಂದಿಸದೆ ಇರುವ ಮತದಾರರು ಅಗತ್ಯ ದಾಖಲೆಗಳನ್ನು ಸಲ್ಲಿಸಿದರೆ ಅವರ ಹೆಸರುಗಳನ್ನು ಪಟ್ಟಿಯಲ್ಲಿ ಉಳಿಸಿಕೊಳ್ಳಬಹುದೆಂದು ತಹಶೀಲ್ದಾರ್ ಸುಪ್ರೀತಾ ಅವರು ಹೇಳಿದರು.

ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ವಿವಿಧ ರಾಜಕೀಯ ಪಕ್ಷಗಳ ಮುಖಂಡರೊಂದಿಗೆ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಎಸ್‌ಐಆರ್ ಪ್ರಕ್ರಿಯೆಯಲ್ಲಿ ಶೇ.91.70ರಷ್ಟು ಮತದಾರರಿಂದ ಮಾಹಿತಿ ವಾಪಸ್ ಬಂದಿದ್ದು, ಉಳಿದ ಪ್ರಕರಣಗಳನ್ನು ವಿವಿಧ ವರ್ಗಗಳಾಗಿ ವಿಂಗಡಿಸಿ ಪರಿಶೀಲನೆ ನಡೆಸಲಾಗಿದೆ ಎಂದರು.

ಸಕಲೇಶಪುರ ವಿಧಾನಸಭಾ ಕ್ಷೇತ್ರದಲ್ಲಿ 5,436 ಮಂದಿ ಮತದಾರರು ಮೃತಪಟ್ಟಿರುವುದು, 9,774 ಮಂದಿ ಬೇರೆಡೆಗೆ ಸ್ಥಳಾಂತರಗೊಂಡಿರುವುದು ಹಾಗೂ 1,741 ಮಂದಿ ಎರಡು ಕಡೆ ಮತದಾರರ ಪಟ್ಟಿಯಲ್ಲಿ ನೋಂದಣಿಯಾಗಿರುವುದು ಪರಿಶೀಲನೆಯಲ್ಲಿ ತಿಳಿದುಬಂದಿದೆ. 1,471 ಮಂದಿ ಗೈರು ಮತದಾರರು ಹಾಗೂ ಇತರೆ 44 ಪ್ರಕರಣಗಳೂ ಗುರುತಿಸಲ್ಪಟ್ಟಿದ್ದು, ಒಟ್ಟಾರೆ ಸುಮಾರು 18,600 ಪ್ರಕರಣಗಳನ್ನು ಪರಿಶೀಲಿಸಲಾಗಿದೆ ಎಂದು ಹೇಳಿದರು.



ನೋ-ಮ್ಯಾಪಿಂಗ್ ವಿಭಾಗದಲ್ಲಿ 3,634 ಪ್ರಕರಣಗಳಿದ್ದು, ಎರಡು ಬಾರಿ ನೋಟೀಸ್ ನೀಡಿ ವಿಚಾರಣೆ ನಡೆಸಲಾಗಿದೆ. ಇದುವರೆಗೆ 47 ಪ್ರಕರಣಗಳ ಹೆಸರುಗಳನ್ನು ಪಟ್ಟಿಯಿಂದ ತೆಗೆದು ಹಾಕಲು ಶಿಫಾರಸು ಮಾಡಲಾಗಿದೆ. ಸೂಕ್ತ ದಾಖಲೆಗಳನ್ನು ಸಲ್ಲಿಸಿ ಅರ್ಹತೆ ಸಾಬೀತು ಪಡಿಸು ವವರಿಗೆ ಅಂತಿಮ ಮತದಾರರ ಪಟ್ಟಿಯಲ್ಲಿ ಹೆಸರು ಉಳಿಸಿಕೊಳ್ಳಲು ಅವಕಾಶವಿದೆ ಎಂದರು.

ಚುನಾವಣಾ ಆಯೋಗದ ಸೂಚನೆಯಂತೆ ಸದ್ಯ ವಿಚಾರಣೆ ಪ್ರಕ್ರಿಯೆಯನ್ನು ಸ್ಥಗಿತಗೊಳಿಸ ಲಾಗಿದೆ. ಎರಡು ಬಾರಿ ನೋಟಿಸ್ ಪಡೆದಿದ್ದರೂ ಸ್ಪಂದಿಸದ ಮತದಾರರು ಅಗತ್ಯ ದಾಖಲೆಗಳನ್ನು ತಮ್ಮ ಬಿಎಲ್ ಒಗಳಿಗೆ ಸಲ್ಲಿಸಬಹುದು. ಸೂಕ್ತ ದಾಖಲೆಗಳನ್ನು ಒದಗಿಸಿದರೆ ಅಂತಿಮ ಮತದಾರರ ಪಟ್ಟಿಯಲ್ಲಿ ತಿದ್ದುಪಡಿ ಅಥವಾ ಸೇರ್ಪಡೆ ಮಾಡಲಾಗುವುದೆಂದು ತಿಳಿಸಿದರು.

ಎಸ್‌ಐಆರ್ ಪ್ರಕ್ರಿಯೆಯಲ್ಲಿ ವಿವಿಧ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವಿಚಾರಣೆ ನಡೆಸಲಾಗಿದ್ದು, ಎಇಆರ್‌ಒ, ತಹಶೀಲ್ದಾರ್ ಹಾಗೂ ಇತರೆ ಅಧಿಕಾರಿಗಳು ಭಾಗವಹಿಸಿದ್ದರು. ರಾಜಕೀಯ ಪಕ್ಷಗಳ ಬೂತ್ ಮಟ್ಟದ ಏಜೆಂಟರೂ ಪ್ರಕ್ರಿಯೆ ಯಲ್ಲಿ ಭಾಗವಹಿಸಿ ಮಾಹಿತಿ ನೀಡಿದ್ದೇವೆಂದು ಹೇಳಿದರು.

ಆಲೂರು ತಹಶೀಲ್ದಾರ್ ಮಲ್ಲಿಕಾರ್ಜುನ್ ಚುನಾವಣಾ ಶಿರಸ್ತೇದಾರ್ ಜನಾರ್ಧನ್ ಹಾಗೂ ವಿವಿಧ ಪಕ್ಷಗಳ ಮುಖಂಡರು ಪಾಲ್ಗೊಂಡಿದ್ದರು.

## ಅ.4ರಂದು ಸಂಪೂರ್ಣ ರಾಮಾಯಣ ನಾಟಕ

• ಪ್ರಜೋದಯ ವರದಿ

**ಹಾಸನ:** ನಗರದ ಲಕ್ಷ್ಮೀ ಜನಾರ್ಧನ ಸಂಘದ ವತಿಯಿಂದ ಅನಂತ ಪೂರ್ಣಿಮೆ ಹಾಗು ಗುರುಪೂರ್ಣಿಮೆ ಅಂಗವಾಗಿ ಅ.4 ರಂದು ಬೆಳಿಗ್ಗೆ ಗುರು ವಂದನೆ ಹಾಗು ಸಂಪೂರ್ಣ ರಾಮಾಯಣ ಪೌರಾಣಿಕ ನಾಟಕ ಪ್ರದರ್ಶನ ಆಯೋಜಿಸಲಾಗಿದೆ ಎಂದು ಪುರೋಹಿತ ರಾಮಪ್ರಸಾದ್ ಅವರು ತಿಳಿಸಿದರು.

ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಾಲಿ ಗ್ರಾಮದ ಶ್ರೀ ಧನುರ್ದಾಸ ರಾಮಾನುಜ ಜೀಯರ್ ಸ್ವಾಮೀಜಿ, ಬೆಲಗೂರಿನ ಶ್ರೀ ವಿಜಯಮಾರುತಿ ಶರ್ಮ ಅವರ ಸಾನಿಧ್ಯದಲ್ಲಿ ಕಾರ್ಯಕ್ರಮ ನಡೆಯಲಿದೆ. ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ಸಂಘಟನಾ ಕಾರ್ಯದರ್ಶಿ ಕೆ.ಪಿ.ಎಸ್. ಪ್ರಮೋದ್ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ನಗರ ಬ್ರಾಹ್ಮಣ ಮಹಾಸಭಾದ ಅಧ್ಯಕ್ಷ ಪಿ.ಎಸ್.ವೆಂಕಟೇಶ್ ಅಧ್ಯಕ್ಷತೆ ವಹಿಸಲಿದ್ದಾರೆ ಎಂದರು.

ನಿವೃತ್ತ ಪೊಲೀಸ್ ಅಧಿಕಾರಿ ಸಿ.ಡಿ. ಜಗದೀಶ್ ಅವರು ಮಾತನಾಡಿ,



ಪೌರಾಣಿಕ ಕಲಾ ಪ್ರಕಾರಗಳನ್ನು ಉಳಿಸಿ ಬೆಳೆಸುವುದು ನಾಟಕ ಪ್ರದರ್ಶನದ ಮುಖ್ಯ ಉದ್ದೇಶವಾಗಿದೆ. ಈ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ 15 ಮಂದಿಯನ್ನು ಸನ್ಮಾನಿಸಲಾಗು ವುದೆಂದು ತಿಳಿಸಿದರು.

ಅಂಚೆ ನಿವೃತ್ತ ನೌಕರ ಹೆಚ್.ಕೆ. ಸತ್ಯನ್ ಅವರು ಮಾತನಾಡಿ, ಈ ಬಾರಿ ವಾಡಿಕೆಗಿಂತ ಕಡಿಮೆ ಮಳೆಯಾಗಿದ್ದು, ಅದರಿಂದ ರೈತರು ಹಲವು ರೀತಿಯ ಸಂಕಷ್ಟ ಎದುರಿಸುವಂತಾಗಿದೆ. ಭಗವಂತನ ಕೃಪೆಯಿಂದ ಉತ್ತಮ ಮಳೆ ಹಾಗು ಸಮೃದ್ಧ ಬೆಳೆ ದೊರೆಯಲಿ ಎಂದು ಪ್ರಾರ್ಥಿ ಸುವ ಉದ್ದೇಶದಿಂದ ಪೌರಾಣಿಕ ನಾಟಕ ಆಯೋಜಿಸಲಾಗಿದೆ ಎಂದು ತಿಳಿಸಿದರು.

ನಿವೃತ್ತ ಶಿಕ್ಷಕ ಶ್ರೀನಿವಾಸ್ ಪ್ರಸಾದ್ ಇತರರು ಇದ್ದರು.

## ಕ್ಯಾತನಹಳ್ಳಿ ಏತ ನೀರಾವರಿ: ಪ್ರೀತಮ್ ಕೊಡುಗೆ ಶೂನ್ಯ

• ಪ್ರಜೋದಯ ವರದಿ

**ಹಾಸನ:** ಕ್ಯಾತನಹಳ್ಳಿ ಏತ ನೀರಾವರಿ ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಹಾಲಿ ಶಾಸಕ ಹೆಚ್.ಪಿ.ಸ್ವರೂಪ್ ಪ್ರಕಾಶ್ ಮತ್ತು ಮಾಜಿ ಶಾಸಕ ಪ್ರೀತಮ್ ಗೌಡ ನಡುವೆ ಕ್ರೆಡಿಟ್ ಪಡೆಯುವ ಪೈಪೋಟಿ ನಡೆಯುತ್ತಿದೆ. ಆದರೆ, ಯೋಜನೆಗೆ ಪ್ರೀತಮ್‌ಗೌಡ ಅವರ ಕೊಡುಗೆ ಶೂನ್ಯ ಎಂದು ಎಎಪಿ ರಾಜ್ಯ ಉಪಾಧ್ಯಕ್ಷ ಅಗಿಲೆ ಯೋಗೇಶ್ ಅವರು ಹೇಳಿದರು.

ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕ್ಯಾತನಹಳ್ಳಿ ಏತ ನೀರಾವರಿ ಯೋಜನೆಗಾಗಿ ತಾವು ಹೋರಾಟ ಆರಂಭಿಸಿದ ಸಂದರ್ಭದಲ್ಲಿ ಅದಕ್ಕೆ ಅಡ್ಡಿಪಡಿಸಿದವರೇ ಪ್ರೀತಮ್‌ಗೌಡ ಅವರ ಬೆಂಬಲಿಗರು. ಯೋಜನೆಯನ್ನು ಸಾಕಾರಗೊಳಿಸುವಲ್ಲಿ ಮಾಜಿ ಸಚಿವ ಬಿ.ಶಿವರಾಂ ಅವರ ಪಾತ್ರ ಪ್ರಮುಖವಾಗಿದೆ. ಆದರೆ, ಈಗ ಯೋಜನೆಯ ಮೋಟಾರ್‌ಗಳು ಕೆಟ್ಟುಹೋಗಿದ್ದು, ಅವುಗಳನ್ನು ದುರಸ್ತಿಪಡಿಸಿ ರೈತರ ಜಮೀನುಗಳಿಗೆ ನೀರು ಹರಿಸುವಂತೆ ರೈತ ಮುಖಂಡರು ಹೋರಾಟ ನಡೆಸುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ಯೋಜನೆಯ ಶ್ರೇಯಸ್ಸು ಪಡೆಯಲು ರಾಜಕೀಯ ಪೈಪೋಟಿ ನಡೆಸುತ್ತಿರುವುದು ದುರದೃಷ್ಟಕರ ಎಂದು ಹೇಳಿದರು.

2018ರಲ್ಲಿ ಸಾಲಗಾಮೆಯಲ್ಲಿ ಯೋಜನೆಗಾಗಿ ಹೋರಾಟ ಸಭೆ ಆಯೋಜಿಸಿದಾಗ, ಕಡದರ ಹಳ್ಳಿ ಬಳಿ ಜೆಸಿಬಿ ಮೂಲಕ ಕಾಲುವೆ ಕೊರೆಸಿ ನೀರು ಹರಿಸುವ ನಾಟಕವಾಡಲಾಗಿತ್ತು. ಆದರೆ, ಅದರಿಂದ ಯಾವುದೇ ಪ್ರಯೋಜನವಾಗಲಿಲ್ಲ, ಬದಲಾಗಿ ತಮ್ಮ ವಿರುದ್ಧ ಹಲವು ಪ್ರಕರಣಗಳನ್ನು ದಾಖಲಿಸಲಾಯಿತು. ಪ್ರೀತಮ್‌ಗೌಡ ಅವರು ಶಾಸಕರಾಗಿದ್ದ ಅವಧಿಯಲ್ಲಿಯೂ ಸೀಗೆ ಕೆರೆಗೆ ನೀರು ಹರಿಸಲು ಸಾಧ್ಯವಾಗಲಿಲ್ಲ. ಈಗ ಕೆಟ್ಟುಹೋಗಿರುವ ಯಂತ್ರಗಳನ್ನು ದುರಸ್ತಿಪಡಿಸಿ ನೀರು ಹರಿಸುವಂತೆ ರೈತರು ಒತ್ತಾಯಿಸುತ್ತಿರುವಾಗ, ಹಸಿರು ಶಾಲು ಧರಿಸಿ ಹೋರಾಟದಲ್ಲಿ ಭಾಗವಹಿಸುವ ಮೂಲಕ ರಾಜಕೀಯ ಲಾಭ ಪಡೆಯಲು ಮುಂದಾಗಿರುವುದು ಸರಿಯಲ್ಲ ಎಂದು ಟೀಕಿಸಿದರು.



ನಗರಾಭಿವೃದ್ಧಿ ಪ್ರಾಧಿಕಾರದಿಂದ ಬಡಾವಣೆ ನಿರ್ಮಿಸುವ ವಿಚಾರದಲ್ಲಿ ತೋರಿದ ಆಸಕ್ತಿ ಯನ್ನು ನೀರಾವರಿ ಯೋಜನೆ ಸಾಕಾರಗೊಳಿಸುವಲ್ಲಿಯೂ ತೋರಿಸಬೇಕಿತ್ತು. ಬಿಜೆಪಿಯ ರಾಜ್ಯ ಪ್ರಧಾನ ಕಾರ್ಯದರ್ಶಿಯಾಗಿರುವ ಪ್ರೀತಂಗೌಡ ಅವರು ಕಾಂಗ್ರೆಸ್ ವಿರುದ್ಧದ ಪ್ರತಿ ಭಟನೆಗಳಲ್ಲಿ ಭಾಗವಹಿಸದೆ, ಗಣೇಶ ಮೆರವಣಿಗೆಗಳಲ್ಲಿ ಪಾಲ್ಗೊಳ್ಳುತ್ತಾರೆ. ಅವರ ರಾಜಕೀಯ ನಿಲುವಿನ ಬಗ್ಗೆ ಅನುಮಾನ ಮೂಡುವಂತಾಗಿದೆ ಎಂದು ವ್ಯಂಗ್ಯವಾಡಿದರು. ಎಎಪಿ ಜಿಲ್ಲಾ ಘಟಕದ ಅಧ್ಯಕ್ಷ ತೇಜೂರು ಆನಂದ್, ನಗರ ಘಟಕದ ಅಧ್ಯಕ್ಷ ಮಧು ಉಪಸ್ಥಿತರಿದ್ದರು.

## ಪರಿಶ್ರಮದಿಂದ ಬದುಕಿನಲ್ಲಿ ಬದಲಾವಣೆ ಸಾಧ್ಯ

» **ಮೊದಲನೇ ಪುಟದಿಂದ**

ಜಾಗೃತಿ ಮೂಡಿಸುವ ಕೆಲಸ ಮಾಡಬೇಕೆಂದು ತಿಳಿಸಿದರು.

ಮಲೆನಾಡು ತಾಂತ್ರಿಕ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಬಿ.ಆರ್.ಗುರುದೇವ್ ಅವರು ಮಾತನಾಡಿ, ಪರಿಶ್ರಮ, ಸಮಯದ ಸದ್ಬಳಕೆ ಹಾಗೂ ಸಾಮಾಜಿಕ ಜವಾಬ್ದಾರಿ ಯಶಸ್ಸಿನ ಪ್ರಮುಖ ಅಂಶಗಳಾಗಿವೆ.ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಪರಿಸರ ಸಂರಕ್ಷಣೆ ಮತ್ತು ತ್ಯಾಜ್ಯ ನಿರ್ವಹಣೆಯ ಬಗ್ಗೆಯೂ ಕಾಳಜಿ ವಹಿಸಬೇಕೆಂದು ಹೇಳಿದರು.

ಕಾಲೇಜಿನ ಉಪಾಧ್ಯಕ್ಷ ಅರ್ಜುನ್ ಗುರುದೇವ್ ಮಾತನಾಡಿ, ಸಮಯ ಯುವಜನರ ಅಮೂಲ್ಯ ಆಸ್ತಿಯಾಗಿದೆ. ಅದನ್ನು ವ್ಯರ್ಥ ಮಾಡದೆ ಶಿಕ್ಷಣ, ವೃತ್ತಿ ಹಾಗೂ ಭವಿಷ್ಯದ ಗುರಿ ಸಾಧನೆಗೆ ಸಮರ್ಪಕವಾಗಿ ಬಳಸಿಕೊಳ್ಳಬೇಕೆಂದರು. ಕಾರ್ಯಕ್ರಮದಲ್ಲಿ ವಿವಿಧ ಸಂಘಗಳ ಜವಾಬ್ದಾರಿಗಳನ್ನು ವಿದ್ಯಾರ್ಥಿಗಳಿಗೆ ಹಸ್ತಾಂತರಿಸಲಾಯಿತು. ರಾಮನಾಥ್, ಕಾಲೇಜಿನ ಪ್ರಾಂಶುಪಾಲರಾದ ಎನ್.ಎಸ್. ಶಶಿಕಲಾ, ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಕಾರ್ಮೇಲ್ ಶ್ರೀನಾ ಸೇರಿ ಹಲವರು ಉಪಸ್ಥಿತರಿದ್ದರು.

## ಮಾನವರ ನಡುವಿನ ಕಂದಕ ಸ್ವಾಸ್ಥ್ಯ ಸಮಾಜ ನಿರ್ಮಾಣಕ್ಕೆ ಅಪಾಯಕಾರಿ

• ಪ್ರಜೋದಯ ವರದಿ

**ಸಕಲೇಶಪುರ:** ಮಾನವರ ನಡುವಿನ ಕಂದಕ ಸ್ವಾಸ್ಥ್ಯ ಸಮಾಜ ನಿರ್ಮಾಣಕ್ಕೆ ಅಪಾಯಕಾರಿ ಎಂದು ವಿರಾಜಪೇಟೆ ತಾಲ್ಲೂಕಿನ ಅರಮೇರಿ ಕಳಂಚೇರಿ ಮಠದ ಶ್ರೀ ಶಾಂತಮಲ್ಲಿಕಾರ್ಜುನ ಸ್ವಾಮೀಜಿ ಹೇಳಿದರು.

ಗುರುವಾರ ಪಟ್ಟಣದ ಗುರುವೇಗೌಡ ಕಲ್ಯಾಣ ಮಂಟಪದಲ್ಲಿ ಜೆಎಸ್‌ಎಸ್ ಸಂಸ್ಥೆ ಹಾಗೂ ಮಲೆನಾಡು ವೀರಶೈವ ಸಮಾಜ ಸಂಯುಕ್ತವಾಗಿ ಹಮ್ಮಿಕೊಂಡಿದ್ದ ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮೀಜಿಯವರ 111ನೇ ಜಯಂತಿ ಮಹೋತ್ಸವ ಉದ್ಘಾಟಿಸಿ ಮಾತನಾಡಿದ ಅವರು, ಮಾನವರ ನಡುವೆ ಪ್ರೀತಿ, ವಿಶ್ವಾಸ ಕಣ್ಮರೆಯಾದಂತೆ ಸಂಬಂಧಗಳ ನಡುವೆ ಕಂದಕ ಸೃಷ್ಟಿಯಾಗುತ್ತಿದೆ. ಮಾನವ ಬದುಕಿರುವುದೇ ಪ್ರೀತಿಯ ನೆಲಗಟ್ಟಿನ ಮೇಲೆ. ಇಂದು ಹಣದ ಹಿಂದೆ ಬಿದ್ದಿರುವ ಜನರಲ್ಲಿ ಪ್ರೀತಿಯ ಕುರುಹೇ ಇಲ್ಲದಾಗಿದೆ. ಇದು ಉತ್ತಮ ಸಮಾಜದ ಲಕ್ಷಣವಲ್ಲ ಎಂದರು.

ಶಿವರಾತ್ರಿ ರಾಜೇಂದ್ರ ಸ್ವಾಮೀಜಿಗಳು ಪ್ರೀತಿ, ಕರುಣೆಯನ್ನು ಹಂಚುವುದಕ್ಕಾಗಿ ತಮ್ಮ ಜೀವನವನ್ನು ಮೀಸಲಾಗಿಟ್ಟಿದ್ದರು. ಬಡವರಿಗೆ ವಿದ್ಯಾಭ್ಯಾಸ ನೀಡುವ ಉದ್ದೇಶದಿಂದಲೇ ಸ್ವಾತಂತ್ರ್ಯ ಪೂರ್ವದಲ್ಲೇ ತಮ್ಮಲ್ಲಿದ್ದ ಸಂಪತ್ತನ್ನು ತ್ಯಾಗ ಮಾಡಿ, ದೀನದಲಿತರ ಉದ್ಧಾರಕ್ಕಾಗಿ ಶಿಕ್ಷಣ ಸಂಸ್ಥೆಗಳನ್ನು ಕಟ್ಟಿ ಬೆಳೆಸುವ ಮೂಲಕ ಶೈಕ್ಷಣಿಕ ಕ್ಷೇತ್ರದಲ್ಲಿ ಶಿಕ್ಷಣದ ಭೀಷ್ಮ ಎಂದು ಕರೆಸಿ ಕೊಂಡಿದ್ದಾರೆ. ಇಂದು ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳು ದೇಶದಲ್ಲಿ ಮಾತ್ರವಲ್ಲದೆ ವಿದೇಶದಲ್ಲೂ ವಿಸ್ತರಿಸಿಕೊಂಡಿವೆ ಎಂದು ತಿಳಿಸಿದರು.

ಶಿಕ್ಷಣ ನೀಡುವ ವೇಳೆ ಜಾತಿ, ಮತ ಎಣಿಸದ ಸ್ವಾಮೀಜಿಗಳ ಸಾಧನೆ ಅಭೂತಪೂರ್ವ. ಭೂಮಿಯ ಮೇಲೆ ಸಾಕಷ್ಟು ಹರಗುರುಗಳು ಜನಿಸಿದ್ದು, ತಮ್ಮದೇ ಕ್ಷೇತ್ರದಲ್ಲಿ ಸಾಕಷ್ಟು ಸಾಧನೆ ಮಾಡಿದ್ದಾರೆ. ಇಂತಹ ಸಾಧಕರ ಪಟ್ಟಿಯಲ್ಲಿ ಶಿವರಾತ್ರಿ ರಾಜೇಂದ್ರ ಸ್ವಾಮೀಜಿಗಳು ಒಬ್ಬರು. ಶಿಕ್ಷಣ ಕ್ರಾಂತಿಯನ್ನು ಮಾಡಿದ ಸ್ವಾಮೀಜಿಗಳು ಲಕ್ಷಾಂತರ ವಿದ್ಯಾರ್ಥಿಗಳ ಬದುಕಿಗೆ ಬೆಳಕಾಗಿದ್ದಾರೆ. ಇಂದು ಅವರು ಬೌದ್ಧಿಕವಾಗಿ ನಮ್ಮೊಂದಿಗೆ ಇಲ್ಲದಿದ್ದರೂ ಎಲ್ಲರ ಮನದಲ್ಲಿ ಇಂದಿಗೂ ನೆಲೆ ನಿಂತಿದ್ದಾರೆ ಎಂದರು.

ಸಮಾಜಮುಖಿ ಕಾರ್ಯಕ್ರಮದಲ್ಲಿ ಪ್ರತಿಯೊಬ್ಬರು ತೊಡಗಿಕೊಳ್ಳುವ ಮೂಲಕ ಉತ್ತಮ ಸಮಾಜ ನಿರ್ಮಾಣಕ್ಕೆ ತಮ್ಮದೇ ಕಾಣಿಕೆ ನೀಡಬೇಕು ಎಂದರು. ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ಪಟ್ಟಣದ ಮುಖ್ಯ ಬೀದಿಯಲ್ಲಿ ವಿವಿಧ ಕಲಾಪ್ರಕಾರಗಳೊಂದಿಗೆ ಶಿವರಾತ್ರಿ ರಾಜೇಂದ್ರ ಮಹಾಸ್ವಾಮೀಜಿಯವರ ಭಾವಚಿತ್ರದೊಂದಿಗೆ ಮೆರವಣಿಗೆ ನಡೆಸಲಾಯಿತು.



ಶಾಸಕ ಸಿಮೆಂಟ್ ಮಂಜು, ಮಲೆನಾಡು ವೀರಶೈವ ಸಮಾಜದ ಅಧ್ಯಕ್ಷ ಮೂಗಲಿ ಧರ್ಮಣ್ಣ, ಗುರುವೇಗೌಡ ಕಲ್ಯಾಣ ಮಂಟಪದ ಅಭಿವೃದ್ಧಿ ಸಮಿತಿ ಅಧ್ಯಕ್ಷ ಬಿ.ಡಿ.ಬಸವಣ್ಣ, ನಾರ್ವೆ ಶಿವಪ್ರಸಾದ್, ಮಹಾಸಭಾ ಅಧ್ಯಕ್ಷ ದಿನೇಶ್ ಸುಳ್ಳಕ್ಕಿ, ಅಕ್ಕಮಹಾದೇವಿಮಹಿಳಾ ವೇದಿಕೆಅಧ್ಯಕ್ಷೆಕೋಮಲದಿನೇಶ್, ಓಂಕಾರಮೂರ್ತಿ,ಮಳಲಿಸ್ವಾಮಿಇದ್ದರು.

ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019

CMYK CMYK CMYK CMYK